22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 128 | ನವದೆಹಲಿ | ಬೆಲೆ ₹ 10 | ನವಂಬರ್ 8, 2024 ಶುಕ್ರವಾರ

## ಒಳಪುಟಗಳಲ್ಲಿ

ಮಹಾರಾಷ್ಟ್ರ ಬದಲಾವಣೆ ಬಯಸುತ್ತಿದೆ: ಶರದ್ ಪವಾರ್ - ಪು.4

ಸರ್ಕಾರಿ ಕಚೇರಿ, ಆವರಣದಲ್ಲಿ ತಂಬಾಕು ಸೇವನೆ ನಿಷೇಧಕ್ಕೆ ಸರ್ಕಾರದ ಮಹತ್ವದ ಆದೇಶ ಪು.5

# ಕೃಷಿತ್ಯಾಜ್ಯ ಸುಟ್ಟವರಿಗೆ ದಂಡ ದ್ವಿಗುಣ: ಕೇಂದ್ರ ಆದೇಶ

**ನವದೆಹಲಿ, ನ.7: ರಾಜಧಾನಿ ದೆಹಲಿಯಲ್ಲಿ ಹದಗೆಡುತ್ತಿರುವ ಗಾಳಿಯ ಗುಣಮಟ್ಟದ ಹಿನ್ನೆಲೆ, ಕೃಷಿ ತ್ಯಾಜ್ಯಗಳನ್ನು ಸುಡುವ ರೈತರಿಗೆ ವಿಧಿಸುವ ದಂಡವನ್ನು ಕೇಂದ್ರ ಸರ್ಕಾರ ಗುರುವಾರ ದ್ವಿಗುಣಗೊಳಿಸಿದೆ. ಐದು ಎಕರೆಗಿಂತ ಹೆಚ್ಚು ಕೃಷಿಭೂಮಿ ಹೊಂದಿರುವ ರೈತರು 30,000 ರೂ. ದಂಡ ಪಾವತಿಸಬೇಕಾಗುತ್ತದೆ ಎಂದು ಕೇಂದ್ರ ಸರ್ಕಾರ ಪ್ರಕಟಿಸಿದ ಅಧಿಸೂಚನೆ ಹೇಳಿದೆ.**



ಕೃಷಿತ್ಯಾಜ್ಯ ಅಧಿಸೂಚನೆಯಲ್ಲಿ, ಎರಡು ಎಕರೆಗಿಂತ ಕಡಿಮೆ ಜಮೀನು ಹೊಂದಿರುವ ರೈತರು 5,000 ರೂಪಾಯಿಗಳ ಪರಿಸರ ಪರಿಹಾರವನ್ನು ಪಾವತಿಸಬೇಕಾಗುತ್ತದೆ. ಈ ಹಿಂದೆ ಈ ವರ್ಗದ ರೈತರು 2500 ರೂ. ದಂಡ ಪಾವತಿಸಬೇಕಾಗಿತ್ತು. ಎರಡರಿಂದ ಐದು ಎಕರೆ ಜಮೀನು ಹೊಂದಿರುವ ರೈತರು ಹಿಂದೆ 5 ಸಾವಿರ ದಂಡ ಪಾವತಿಸಬೇಕಾಗಿತ್ತು, ಆದರೆ ಇಂದಿನಿಂದ ಅದರ ದಂಡ 10 ಸಾವಿರ ರೂ. ಗಳಿಗೆ ಏರಿಸಲಾಗಿದೆ.

ಪಂಜಾಬ್ ಮತ್ತು ಹರಿಯಾಣದಲ್ಲಿ ಕೃಷಿ ತ್ಯಾಜ್ಯಗಳನ್ನು ಸುಡುವ ಘಟನೆಗಳ ಸಂಖ್ಯೆಯು ಹೆಚ್ಚಾದರೆ ನವೆಂಬರ್ 1 ರಿಂದ 15 ರವರೆಗೆ ದೆಹಲಿಯು ಗರಿಷ್ಠ ಮಟ್ಟದ ಮಾಲಿನ್ಯವನ್ನು ಅನುಭವಿಸುತ್ತದೆ ಎಂದು ದೆಹಲಿ ಮಾಲಿನ್ಯ ನಿಯಂತ್ರಣ ಸಮಿತಿ (**DPCC**) ವಿಶ್ಲೇಷಣೆ ಹೇಳಿದೆ. ಭತ್ತ–ಗೋಧಿ ಬೆಳೆ ಪದ್ಧತಿ, ದೀರ್ಘಾವಧಿಯ ಭತ್ತದ ತಳಿಗಳ ಬೇಸಾಯ, ಯಾಂತ್ರೀಕೃತ ಕೊಯ್ಲು, ಹೊಲದಲ್ಲಿ ಬೆಳೆದಿರುವ ಕೊಯ್ಲು, ಕಾರ್ಮಿಕರ ಕೊರತೆ, ಮತ್ತು ಕೃಷಿತ್ಯಾಜ್ಯಕ್ಕೆ ಮಾರುಕಟ್ಟೆಯ ಕೊರತೆ ಮುಂತಾದ ಸಮಸ್ಯೆಗಳ ಕಾರಣಕ್ಕೆ ಅದನ್ನು ಸುಡಲಾಗುತ್ತದೆ ಎನ್ನಲಾಗಿದೆ. ಈ ಅವಶೇಷಗಳನ್ನು ಹೆಚ್ಚಾಗಿ ಸುಡುವ ಅವಧಿಯಲ್ಲಿ, ರಾಜಧಾನಿ ದೆಹಲಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಆಗುವ ವಾಯು ಮಾಲಿನ್ಯಕ್ಕೆ 30% ದಷ್ಟು ಕೊಡುಗೆ ನೀಡುತ್ತದೆ ಎಂದು ಅಧ್ಯಯನಗಳು ಅಂದಾಜಿಸಿವೆ.

ಅದಾಗ್ಯೂ ಈ ವಾದವನ್ನು ಪರಿಸರ ತಜ್ಞರು ಅಲ್ಲಗಳೆದಿದ್ದು, ಹಿರಿಯ ಪರಿಸರವಾದಿ ಸುನೀತಾ ನಾರಾಯಣ್ ಅವರು, ಚಳಿಗಾಲದ ಸಮಯ ರೈತರು ಕೃಷಿ ತ್ಯಾಜ್ಯವನ್ನು ವ್ಯಾಪಕವಾಗಿ ಸುಡುವುದಕ್ಕೆ ಮಾತ್ರ ದೆಹಲಿಯಲ್ಲಿ ವಾಯು ಮಾಲಿನ್ಯ ಆಗುತ್ತಿಲ್ಲ. ಬದಲಾಗಿ, ದೆಹಲಿಯ ಸಾರಿಗೆ ಮತ್ತು ಕೈಗಾರಿಕೆಗಳು ಸೇರಿದಂತೆ ನಗರದೊಳಗಿನ ನಿರಂತರ ಮಾಲಿನ್ಯದ ಕಾರಣಕ್ಕೆ ಇದು ನಡೆಯುತ್ತದೆ ಎಂದು ಹೇಳುತ್ತಾರೆ.

## ಕೊನೆಯುಸಿರು ಎಳೆಯುವ ಮುನ್ನ ಮೇಕೆದಾಟು ಯೋಜನೆಗೆ ಪ್ರಧಾನಿ ಒಪ್ಪಿಗೆ ಕೊಡಿಸುತ್ತೇನೆ: ಮಾಜಿ ಪಿಎಂ ದೇವೇಗೌಡ

**ಚನ್ನಪಟ್ಟಣ/ರಾಮನಗರ, ನ.7:** ನಾನು ನನ್ನ ಕೊನೆ ಉಸಿರು ಎಳೆಯುವ ಮುನ್ನ ಮೇಕೆದಾಟು ಯೋಜನೆಗೆ ಪ್ರಧಾನಿ ನರೇಂದ್ರ ಮೋದಿ ಅವರಿಂದ ಮೇಕೆದಾಟು ಯೋಜನೆಗೆ ಒಪ್ಪಿಗೆ ಕೊಡಿಸುತ್ತೇನೆ ಎಂದು ಮಾಜಿ ಪ್ರಧಾನಿಗಳಾದ ಎಚ್.ಡಿ.ದೇವೇಗೌಡರು ಘೋಷಣೆ ಮಾಡಿದರು. ಹೊಡಿಕೆಹೊಸಹಳ್ಳಿ ಗ್ರಾಮದಲ್ಲಿ ಎನ್‌ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಪರವಾಗಿ ಮತಯಾಚನೆ ಮಾಡಿದ ದೇವೇಗೌಡ, ಮೇಕೆದಾಟು ಯೋಜನೆ ಜಾರಿಯಾಗಬೇಕಾದರೆ ಅದು ಪ್ರಧಾನಿ ನರೇಂದ್ರ ಮೋದಿ ಅವರಿಂದ ಮಾತ್ರ ಸಾಧ್ಯ. ಇದರಲ್ಲಿ ಎರಡು ಮಾತಿಲ್ಲ. ಆದರೆ ತಮಿಳುನಾಡಿನವರು ನಮ್ಮ ಕುತ್ತಿಗೆ ಹಿಡಿದಿದ್ದಾರೆ ಎಂದು ಅವರು ಬೇಸರ ವ್ಯಕ್ತಪಡಿಸಿದರು. ನಾನು ಇಗ್ಗಲೂರು ಆಣೆಕಟ್ಟು ಕಟ್ಟಿದ್ದು ದೊಡ್ಡ ವಿಷಯ ಅಲ್ಲ. ನಾನು ಪ್ರಧಾನಿ ಆಗಿದ್ದು ದೈವದ ಆಟ. ಮೇಕೆದಾಟು ಯೋಜನೆ ನರೇಂದ್ರ ಮೋದಿ ಅವರಿಂದ ಮಾತ್ರ ಸಾಧ್ಯ. ನಾನು ಅವರಿಗೆ ಮನವಿ ಮಾಡುತ್ತೇನೆ. ವಾಸ್ತವ ಸ್ಥಿತಿಯನ್ನು ಮನವರಿಕೆ ಮಾಡಿಕೊಡುತ್ತೇನೆ. ಈಗಾಗಲೇ ಹಲವಾರು ಸಲ ಅವರು ನನ್ನ ಮನವಿ ಆಲಿಸಿದ್ದಾರೆ ಎಂದು ಅವರು ನುಡಿದರು.

# ಸಿಎಂ ಸಿದ್ದರಾಮಯ್ಯ ವಿರುದ್ಧ ಕೇಂದ್ರದಿಂದ ರಾಜಕೀಯ ಷಡ್ಯಂತ್ರ ಆರೋಪ

## ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ನೇತೃತ್ವದಲ್ಲಿ ಪ್ರತಿಭಟನಾ ಸಭೆ

**ನವದೆಹಲಿ, ನ.7:** ಕರ್ನಾಟಕಕ್ಕೆ ಕೇಂದ್ರ ಸರ್ಕಾರದಿಂದ ತೆರಿಗೆ ವಂಚನೆಯಾಗುತ್ತಿದೆ ಇದರ ವಿರುದ್ಧ ಧ್ವನಿ ಎತ್ತುವ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಕೇಂದ್ರೀಯ ತನಿಖಾ ಸಂಸ್ಥೆಗಳ ಮೂಲಕ ಪ್ರಧಾನಿ ನರೇಂದ್ರ ಮೋದಿ ಷಡ್ಯಂತ್ರ ರೂಪಿಸುತ್ತಿದ್ದಾರೆ ಎಂದು ಆರೋಪಿಸಿ ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆ ನೇತೃತ್ವದಲ್ಲಿ ಪ್ರತಿಭಟನಾ ಸಭೆ ನಡೆಸಲಾಯಿತು.

ದೆಹಲಿಯ ಕರ್ನಾಟಕ ಸಂಘದಲ್ಲಿ ರಾಜ್ಯಸಭೆ ಮಾಜಿ ಸಂಸದ ಎಲ್. ಹನುಮಂತಯ್ಯ ಅವರ ನೇತೃತದಲ್ಲಿ ನಡೆದ ಪ್ರತಿಭಟನಾ ಸಭೆಯಲ್ಲಿ ರಾಜ್ಯದ ಪ್ರಮುಖ ಸಾಹಿತಿಗಳು, ಚಿಂತಕರು, ಕನ್ನಡಪರ ಹೋರಾಟಗಾರರು, ರೈತ ನಾಯಕರು, ಮಹಿಳಾ ಹೋರಾಟಗಾರ್ತಿಯರು ಭಾಗಿಯಾಗಿದ್ದರು. ಪ್ರತಿಭಟನಾ ಸಭೆ ಬಳಿಕ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಕಚೇರಿಗೆ ಮನವಿ ಪತ್ರ ಸಲ್ಲಿಸಿದರು.



ಸಭೆಯಲ್ಲಿ ಮಾತನಾಡಿದ ಎಲ್ ಹನುಮಂತಯ್ಯ, ಪ್ರಧಾನಿ ನರೇಂದ್ರ ಮೋದಿ ಅವರ ಸರ್ಕಾರದಿಂದ ರಾಜ್ಯಗಳಿಗೆ ಆಗುತ್ತಿರುವ ಆರ್ಥಿಕ ಅನ್ಯಾಯ ನಿಲ್ಲಬೇಕು ಎಂದು ಒತ್ತಾಯಿಸಿದರು. ಪ್ರತಿಯೊಂದು ರಾಜ್ಯದ ಭಾಷೆ, ಸಂಸ್ಕೃತಿ ವೈವಿಧ್ಯತೆಯನ್ನು ಒಕ್ಕೂಟ ಸರ್ಕಾರ ಕಾಪಾಡಬೇಕು, ಅದರ ಬದಲು ಏಕಮುಖ ಸಂಸ್ಕೃತಿ ಏರಿಕೆ ಮಾಡಬಾರದು ಎಂದರು.

ತಮ್ಮ ವಿರುದ್ಧ ಮಾತನಾಡುವ ರಾಜಕೀಯ ವಿರೋಧಿಗಳನ್ನು ಉದ್ದೇಶಪೂರ್ವಕವಾಗಿ ಹಣಿಯುವ ಕೆಲಸ ಮಾಡಬಾರದು, ಇದು ಪ್ರಜಾಪ್ರಭುತ್ವ ವ್ಯವಸ್ಥೆಗೆ ಕಂಟಕವಾಗಲಿದೆ ಇದನ್ನು ದೆಹಲಿ ನಾಯಕರಿಗೆ ಅರ್ಥೈಸಿಬೇಕು. ಕ್ರಿಮಿನಲ್ ಹಿನ್ನಲೆ ನಾಯಕರು ಬಿಜೆಪಿ ಸೇರಿದ ಬೆನ್ನಲೆ ಕ್ಲಿನ್ ಚಿಟ್ ಕೊಟ್ಟು ಅವರಿಗೆ ಅಧಿಕಾರ ಕೊಡುತ್ತಿದ್ದಾರೆ ಇದು ದಗಲಬಾಜಿ ರಾಜಕಾರಣ ಅಲ್ಲದೆ ಇನ್ನೇನು? (3ನೇ ಪುಟಕ್ಕೆ)

# ಗ್ರೀನ್ ಹೈಡ್ರೋಜನ್; ಭಾರತದಲ್ಲಿ ವಿಶ್ವದರ್ಜೆ ಕೇಂದ್ರಗಳ ಸ್ಥಾಪನೆ

## ಕೇಂದ್ರ ಸರ್ಕಾರದಿಂದ ಪ್ರಸ್ತಾವನೆಗಳ ಆಹ್ವಾನ; ಸಚಿವ ಪ್ರಲ್ಹಾದ ಜೋಶಿ ಮಾಹಿತಿ






**ನವದೆಹಲಿ, ನ.7:** ಭಾರತದಲ್ಲಿ ಗ್ರೀನ್ ಹೈಡ್ರೋಜನ್‌ಗಾಗಿ ವಿಶ್ವ ದರ್ಜೆ ಕೇಂದ್ರಗಳನ್ನು ಸ್ಥಾಪಿಸಲು ಉದ್ದೇಶಿಸಿದೆ ಎಂದು ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ತಿಳಿಸಿದರು. ಕೇಂದ್ರ ಸರ್ಕಾರ ಹಸಿರು ಹೈಡ್ರೋಜನ್ ಮೇಲೆ ಸಂಶೋಧನೆ ಮತ್ತು ಅಭಿವೃದ್ಧಿಗಾಗಿ ಶ್ರೇಷ್ಠ (ಸಿಇಒ) ಕೇಂದ್ರಗಳನ್ನು ಸ್ಥಾಪಿಸುತ್ತಿದ್ದು, ಇದಕ್ಕಾಗಿ ಪ್ರಕ್ರಿಯೆ ಆರಂಭಿಸಿದೆ ಎಂದು ಹೇಳಿದ್ದಾರೆ. ರಾಷ್ಟ್ರೀಯ ಹಸಿರು ಹೈಡ್ರೋಜನ್ ಮಿಷನ್‌ನ ಸಂಶೋಧನೆ ಮತ್ತು ಅಭಿವೃದ್ಧಿ (ಆರ್ ಮತ್ತು ಡಿ) ಯೋಜನೆಯಲ್ಲಿ ಉತ್ಕೃಷ್ಟತೆಯ ಕೇಂದ್ರಗಳನ್ನು (ಸಿಒಇ) ಸ್ಥಾಪಿಸಲು ಕ್ರಮ ಕೈಗೊಳ್ಳಲಾಗಿದೆ ಎಂದಿದ್ದಾರೆ ಸಚಿವರು.

**ಪ್ರಸ್ತಾವನೆ ಆಹ್ವಾನ:** ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವಾಲಯ (**MNRE**) ನವೆಂಬರ್ 4ರಂದು ಪ್ರಸ್ತಾವನೆಗಳನ್ನು ಆಹ್ವಾನಿಸಿದ್ದು, ಕೇಂದ್ರಗಳ ಸ್ಥಾಪನೆಗೆ ಸರ್ಕಾರ 100 ಕೋಟಿ ರೂ. ಇರಿಸಿದೆ ಎಂದು ಸಚಿವ ಪ್ರಲ್ಹಾದ ಜೋಶಿ ಮಾಹಿತಿ ನೀಡಿದ್ದಾರೆ. ಸಂಶೋಧನಾ ಸಂಸ್ಥೆಗಳು, ವಿಶ್ವವಿದ್ಯಾನಿಲಯಗಳು ಸೇರಿದಂತೆ ಸಾರ್ವಜನಿಕ ಮತ್ತು ಖಾಸಗಿ ಘಟಕಗಳು ಪ್ರಸ್ತಾವನೆ ಸಲ್ಲಿಸಲಿವೆ ಎಂದ ಸಚಿವರು, ಈ **COE** ಕೇಂದ್ರಗಳು ಹಸಿರು ಹೈಡ್ರೋಜನ್ ಉತ್ಪಾದನೆ, ಸಂಗ್ರಹಣೆ ಮತ್ತು ಬಳಕೆಯ ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸುವ ಮೂಲಕ ಕಡಿಮೆ–ಕಾರ್ಬನ್ ಆರ್ಥಿಕತೆಗೆ ಪರಿವರ್ತನೆ ತರುವಲ್ಲಿ ಕೇಂದ್ರಗಳು ಮಹತ್ವದ ಕಾರ್ಯ ನಿರ್ವಹಿಸಲಿವೆ ಎಂದು ಹೇಳಿದ್ದಾರೆ. **COE** ಕೇಂದ್ರಗಳ ಪ್ರಯೋಜನ: **CoE** ಗಳು ಅತ್ಯಾಧುನಿಕ ಸಂಶೋಧನೆ, ಕೌಶಲ್ಯ ಅಭಿವೃದ್ಧಿ ಮತ್ತು ಜ್ಞಾನ ಪ್ರಸರಣಕ್ಕೆ ಕೇಂದ್ರ ಬಿಂದುಗಳಾಗಿ ಕಾರ್ಯನಿರ್ವಹಿಸುತ್ತವೆ.

ಈ **CoE** ಗಳು ಗ್ರೀನ್ ಹೈಡ್ರೋಜನ್ ತಂತ್ರಜ್ಞಾನಗಳಲ್ಲಿ ಆವಿಷ್ಕಾರಗಳನ್ನು ಹೆಚ್ಚಿಸಲು ಉದ್ಯಮ, ಅಕಾಡೆಮಿ ಮತ್ತು ಸರ್ಕಾರ ಸೇರಿದಂತೆ ಮಧ್ಯಸ್ಥಗಾರರ ನಡುವೆ ಸಹಯೋಗವನ್ನು ಸುಗಮಗೊಳಿಸುತ್ತವೆ. ಇದು ಸುಧಾರಿತ ಪ್ರಕ್ರಿಯೆಯ ದಕ್ಷತೆ ಮತ್ತು ಹೊಸ ಉತ್ಪನ್ನ ಅಭಿವೃದ್ಧಿಗೆ ಕಾರಣವಾಗುತ್ತದೆ. ಈ ಕೇಂದ್ರಗಳು ದೇಶದ ಸಂಪೂರ್ಣ ಹಸಿರು ಹೈಡ್ರೋಜನ್ ಪರಿಸರ ವ್ಯವಸ್ಥೆಯನ್ನು ಮುನ್ನಡೆಸಲು ಪರಿಣತಿ ಮತ್ತು ಸಂಪನ್ಮೂಲಗಳನ್ನು ಒಟ್ಟುಗೂಡಿಸುತ್ತವೆ ಮತ್ತು ಹತೋಟಿಗೆ ತರುತ್ತವೆ. ರಾಷ್ಟ್ರೀಯ ಮಿಶನ್‌ಗೆ 19,744 ಕೋಟಿ ರೂ. ರಾಷ್ಟ್ರೀಯ ಹಸಿರು ಹೈಡ್ರೋಜನ್ ಮಿಷನ್ 2023ರ ಜನವರಿ 4ರಂದು ಪ್ರಾರಂಭಿಸಿದ್ದು, 2029–30ನೇ ಆರ್ಥಿಕ ವರ್ಷದವರೆಗೆ 19,744 ಕೋಟಿ ರೂ. ಇರಿಸಿದೆ ಎಂದು ಮಾಹಿತಿ ನೀಡಿದ್ದಾರೆ.

ರಾಷ್ಟ್ರೀಯ ಹಸಿರು ಹೈಡ್ರೋಜನ್ ಮಿಶನ್ ಜಾಗತಿಕ ಶುದ್ಧ ಶಕ್ತಿ ಪರಿವರ್ತನೆಗೆ ಸ್ಫೂರ್ತಿಯಾಗಿ ಕಾರ್ಯ ನಿರ್ವಹಿಸುತ್ತದೆ.

ಪಳೆಯುಳಿಕೆ ಇಂಧನ ಆಮದುಗಳ ಮೇಲಿನ ಅವಲಂಬನೆ ಕಡಿಮೆ ಮಾಡುತ್ತದೆ ಮತ್ತು ಗ್ರೀನ್ ಹೈಡ್ರೋಜನ್‌ನಲ್ಲಿ ಭಾರತದ ನಾಯಕತ್ವಕ್ಕೆ ಅನುವು ಮಾಡಿಕೊಡುತ್ತಿದೆ ಎಂದು ಪ್ರಲ್ಹಾದ ಜೋಶಿ ಹೇಳಿದ್ದಾರೆ..

# ಬಾಲಿವುಡ್ ಸೂಪರ್‌ಸ್ಟಾರ್ ಶಾರುಖ್ ಖಾನ್‌ಗೆ ಕೊಲೆ ಬೆದರಿಕೆ - 50 ಲಕ್ಷಕ್ಕೆ ಬೇಡಿಕೆ



**ಮುಂಬೈ, ನ.7:** ಸಲ್ಮಾನ್ ಖಾನ್ ಬಳಿಕ ಬಾಲಿವುಡ್ ಸೂಪರ್‌ಸ್ಟಾರ್ ಶಾರುಖ್ ಖಾನ್ ಕೊಲ್ಲುವುದಾಗಿ ವ್ಯಕ್ತಿಯೊಬ್ಬ ಬೆದರಿಕೆ ಹಾಕಿದ್ದಾನೆ. ಮುಂಬೈನ ಬಾಂದ್ರಾ ಪೊಲೀಸರಿಗೆ ಕರೆ ಮಾಡಿರುವ ವ್ಯಕ್ತಿ ಐವತ್ತು ಲಕ್ಷಕ್ಕೆ ಹಣಕ್ಕೆ ಬೇಡಿಕೆ ಇಟ್ಟಿದ್ದಾನೆ. ಸಂದೇಶದ ಬೆನ್ನಲೆ ಬಾಂದ್ರಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಛತ್ತೀಸ್‌ಗಢದ ರಾಯ್‌ಪುರದ ಫೈಜಾನ್ ಖಾನ್ ಎಂಬುವರ ಹೆಸರಿನಲ್ಲಿ ನೋಂದಾಯಿಸಲಾದ ಮೊಬೈಲ್ ಸಂಖ್ಯೆಯಿಂದೀ ಬೆದರಿಕೆ ಕರೆ ಸ್ವೀಕರಿಸಲಾಗಿದೆ. ಈ ಸಂಬಂಧ ಫೈಜಾನ್ ಖಾನ್ ಎಂಬ ವ್ಯಕ್ತಿಯನ್ನು ಪೊಲೀಸರು ವಿಚಾರಣೆ ನಡೆಸಿದ್ದಾರೆ. ವಿಚಾರಣೆಯಲ್ಲಿ ತಾನು ವಕೀಲನಾಗಿದ್ದು ನವೆಂಬರ್ 2 ರಂದು ಮೊಬೈಲ್ ಕಳ್ಳತನವಾಗಿದೆ ಈ ಬಗ್ಗೆ ದೂರು ದಾಖಲಾಗಿದೆ, ಶಾರುಖ್ ಖಾನ್‌ಗೆ ಬೆದರಿಕೆ ಹಾಕಲು ಯಾರೋ ಅದನ್ನು ದುರ್ಬಳಕೆ ಮಾಡಿ ಕೊಂಡಿರಬಹುದು ಎಂದು ಫಯಾಜ್ ಹೇಳಿದ್ದಾನೆ ಎನ್ನಲಾಗಿದೆ. ಕರೆ ಮಾಡಿದ ವ್ಯಕ್ತಿಗೆ ಆತನ ಗುರುತು ಮತ್ತು ಸ್ಥಳದ ಬಗ್ಗೆ ಪೊಲೀಸರು ಪ್ರಶ್ನಿಸಿದಾಗ ಆತನನ್ನು "ಹಿಂದೂಸ್ತಾನಿ" ಎಂದು ಕರೆಯಲು ಪೊಲೀಸರಿಗೆ ತಿಳಿಸಿದ್ದಾನಂತೆ. ನವೆಂಬರ್ 5 ರಂದು ಮಧ್ಯಾಹ್ನ 1.20ರ ಸುಮಾರಿಗೆ ಕರೆ ಮಾಡಿ ಈ ಬೆದರಿಕೆ ಹಾಕಲಾಗಿದೆ ಎಂದು ಮೂಲಗಳು ಹೇಳಿವೆ.

ಕಳೆದ ವರ್ಷ ಅಕ್ಟೋಬರ್‌ನಲ್ಲಿ ಶಾರುಖ್ ಖಾನ್ ಅವರಿಗೆ ಜೀವ ಬೆದರಿಕೆ ಇತ್ತು, ಅದರ ನಂತರ ಅವರ ಭದ್ರತೆಯನ್ನು Y+ ಮಟ್ಟಕ್ಕೆ ಹೆಚ್ಚಿಸಲಾಯಿತು. ಇದು ದಿನದ 24 ಗಂಟೆ ಆರು ಶಸ್ತ್ರಸಜ್ಜಿತ ಸಿಬ್ಬಂದಿಗಳ ಜೊತೆಯಲ್ಲಿ ಇರುವುದನ್ನು ಖಚಿತಪಡಿಸುತ್ತದೆ. ಇದಕ್ಕೂ ಮೊದಲು ಶಾರುಖ್ ಖಾನ್ ಇಬ್ಬರು ಭದ್ರತಾ ಸಿಬ್ಬಂದಿಯನ್ನು ಹೊಂದಿದ್ದರು, ಅವರು ಶಸ್ತ್ರಸಜ್ಜಿತರಾಗಿದ್ದರು.

ಸಲ್ಮಾನ್ ಖಾನ್ ಗೆ ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್‌ನಿಂದ ಬೆದರಿಕೆ ಬಂದ ಬೆನ್ನಲೆ ಹಲವಾರಯ ವ್ಯಕ್ತಿಗಳು ಮುಂಬೈ ಟ್ರಾಫಿಕ್ ಪೊಲೀಸ್ ಸಂದೇಶ ಕಳುಹಿಸಿ ಸಲ್ಮಾನ್ ಖಾನ್ ಹತ್ಯೆ ಮಾಡುವ ಬೆದರಿಕೆ ಹಾಕಿದ್ದರು. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಈ ವ್ಯಕ್ತಿಗಳನ್ನು ಬಂಧಿಸಿದ್ದಾರೆ. ಇಂತಹದೇ ಪ್ರಕರಣದಲ್ಲಿ ಇತ್ತೀಚೆಗೆ ತುಮಕೂರು ಮೂಲದ ವಿಕ್ರಮ್ ಎನ್ನುವವರನ್ನು ಪೊಲೀಸರು ಬಂಧಿಸಿದ್ದರು.

ಸಿರಿಗನ್ನಡಂ ಗೆಲ್ಗೆ ಸಿರಿಗನ್ನಡಂ ಬಾಳ್ಗೆ

ಕರ್ನಾಟಕ ಸರ್ಕಾರ

ನಿವಾಸಿ ಆಯುಕ್ತರವರ ಕಛೇರಿ, ಕರ್ನಾಟಕ ಭವನ
ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ನವದೆಹಲಿ.

69ನೇ ಕರ್ನಾಟಕ ರಾಜ್ಯೋತ್ಸವದ ಪ್ರಯುಕ್ತ
ದಿನಾಂಕ: 09.11.2024 ರಂದು
ದೆಹಲಿ ಕರ್ನಾಟಕ ಸಂಘದ ಸಭಾಂಗಣದಲ್ಲಿ
ಆಯೋಜಿಸಲಾಗಿರುವ
ಸಾಂಸ್ಕೃತಿಕ ಕಾರ್ಯಕ್ರಮಗಳ ಆಹ್ವಾನ ಪತ್ರಿಕೆ

"ಸರ್ವರಿಗೂ ಆದರದ ಸುಸ್ವಾಗತ"

"ಹೆಸರಾಯಿತು ಕರ್ನಾಟಕ – ಉಸಿರಾಗಲಿ ಕನ್ನಡ"

"ಪ್ರತಿ ಮನೆಯಲ್ಲೂ ಕನ್ನಡ – ಪ್ರತಿ ಕಣದಲ್ಲೂ ಕನ್ನಡ"

# ಕಾಂಗ್ರೆಸ್ ಗೆದ್ದರೆ ಸಂಡೂರು ಕ್ಷೇತ್ರದ ಸಮಗ್ರ ಅಭಿವೃದ್ಧಿ: ಮತದಾರರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಯ– ಮೋದಿ ವಿರುದ್ಧ ವಾಗ್ದಾಳಿ

**ಅನ್ನಪೂರ್ಣಮ್ಮ ನನ್ನ ಆತ್ಮೀಯ ಸ್ನೇಹಿತನ ಮಗಳು. ಆಕೆಯನ್ನು ಗೆಲ್ಲಿಸಿ ಮೂರೂವರೆ ವರ್ಷ ನಮ್ಮದೇ ಸರ್ಕಾರ ಇರತ್ತೆ ಸಂಡೂರಿನ ಅಭಿವೃದ್ಧಿ ಜೋರಾಗತ್ತೆ. ಕಾಂಗ್ರೆಸ್ ಗೆಲ್ಲಿಸಿ ಕಳುಹಿಸಿ ಸುಳ್ಳು ಬಿಜೆಪಿಯ ಮನೆ ದೇವರು: ಸಿ.ಎಂ.ಸಿದ್ದರಾಮಯ್ಯ**



**ಸಂಡೂರು, ನ.7:** ಅನ್ನಪೂರ್ಣಮ್ಮ ನನ್ನ ಆತ್ಮೀಯ ಸ್ನೇಹಿತನ ಮಗಳು. ಇವರನ್ನು ಗೆಲ್ಲಿಸಿ ಕಳುಹಿಸಿ ಮೂರೂವರೆ ವರ್ಷ ನಮ್ಮದೇ ಸರ್ಕಾರ ಇರತ್ತೆ. ಸಂಡೂರಿನ ಅಭಿವೃದ್ಧಿ ಜೋರಾಗತ್ತೆ. ಕಾಂಗ್ರೆಸ್ ಗೆಲ್ಲಿಸಿ ಕಳುಹಿಸಿ ಸಂಡೂರು ವಿಧಾನಸಭಾ ಕ್ಷೇತ್ರದ ಬೊಮ್ಮಘಟ್ಟದಲ್ಲಿ ನಡೆದ ಬೃಹತ್ ಜನ ಸಮಾವೇಶದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಅನ್ನಪೂರ್ಣಮ್ಮ ಅವರ ಗೆಲುವಿಗೆ ಪ್ರಚಾರ ನಡೆಸಿ ಮಾತನಾಡಿದರು. ಈ. ತುಕಾರಾಮ್ ಅವರು ಕ್ಷೇತ್ರದ ಅಭಿವೃದ್ಧಿಗಾಗಿ ಸದಾ ಕಾತರಿಸುತ್ತಾ ಕೆಲಸ ಮಾಡುವ ಶಾಸಕರಾಗಿದ್ದರು, ಈಗ ಸಂಸದರಾಗಿದ್ದಾರೆ. ಸಂಡೂರಿನಲ್ಲಿ ಈಗ ಆಗಿರುವ ಎಲ್ಲಾ ಅಭಿವೃದ್ಧಿಗಳೂ ಈ.ತುಕಾರಾಮ್ ಮತ್ತು ಸಂತೋಷ್ ಲಾಡ್ ಅವರ ಅವಧಿಯಲ್ಲಿ ಆಗಿರುವಂಥವು. ಕಾಂಗ್ರೆಸ್ ಸ್ವಾತಂತ್ರ್ಯ ಹೋರಾಟದ ಅವಧಿಯಿಂದಲೂ ಅಭಿವೃದ್ಧಿ ಮತ್ತು ಸಾಮಾಜಿಕ ನ್ಯಾಯದ ಪರವಾಗಿದೆ. ಬಿಜೆಪಿ ಸ್ವಾತಂತ್ರ್ಯ ಹೋರಾಟದಲ್ಲೂ ಜನರ ಪರವಾಗಿ ಇರಲಿಲ್ಲ. ಈಗಲೂ ಇಲ್ಲ. ಪ್ರಧಾನಿ ನರೇಂದ್ರ ಮೋದಿಯವರು "ನಾ ಖಾವೋಂಗಾ– ನಾ ಖಾನೆ ದೂಂಗಾ" ಎಂದು ಭಾಷಣ ಮಾಡುತ್ತಾರೆ. ಆದರೆ ಜನಾರ್ದನ ರೆಡ್ಡಿಯನ್ನು ಬಿಜೆಪಿಗೆ ಸೇರಿಸಿಕೊಂಡಿದ್ದಾರೆ. ಜನಾರ್ದನ ರೆಡ್ಡಿಯನ್ನು ನ್ಯಾಯಲಯವೇ ಅಪರಾಧಿ ಎಂದು ಘೋಷಿಸಿ ಜೈಲಿಗೆ ಹಾಕಿತ್ತು. ಬಿಜೆಪಿಗಾಗಲಿ, ಮೋದಿಗಾಗಲಿ ಭ್ರಷ್ಟಾಚಾರದ ವಿರುದ್ಧ ಮಾತನಾಡುವ ಯೋಗ್ಯತೆ ಇದೆಯಾ ಎಂದು ಪ್ರಶ್ನಿಸಿದರು.


ಬಿಜೆಪಿ ಅಧಿಕಾರದಲ್ಲಿದ್ದಷ್ಟೂ ದಿನ ಸಂಡೂರಿಗೆ ಒಂದೇ ಒಂದು ಮನೆ ಕೊಡುವ ಯೋಗ್ಯತೆ ಇರಲಿಲ್ಲ. ಆಪರೇಷನ್ ಕಮಲದ ಮೂಲಕ ಜನ ಗೆಲ್ಲಿಸಿದ ಕಾಂಗ್ರೆಸ್ ಸರ್ಕಾರವನ್ನು ಬೀಳಿಸಿ ಹಿಂಬಾಗಿಲಿನಿಂದ ಅಧಿಕಾರಕ್ಕೆ ಬಂದು ಲೂಟಿ ಮಾಡಿಕೊಂಡು ಹೋದರು. ಅದಕ್ಕೇ ಆಪರೇಷನ್ ಕಮಲದ ಸರ್ಕಾರವನ್ನು ಜನ ಸೋಲಿಸಿ ನಮ್ಮ ಕಾಂಗ್ರೆಸ್ ಸರ್ಕಾರವನ್ನು ಅಧಿಕಾರಕ್ಕೆ ತಂದರು.

ನಾವು ಅಧಿಕಾರಕ್ಕೆ ಬಂದ 8 ತಿಂಗಳಲ್ಲೇ ಐದಕ್ಕೆ ಐದೂ ಗ್ಯಾರಂಟಿಗಳನ್ನು ಜಾರಿ ಮಾಡಿದ್ದೇವೆ. ನುಡಿದಂತೆ ನಡೆದಿದ್ದೇವೆ. ಒಂದು ಕೋಟಿ ಇಪ್ಪತ್ತು ಲಕ್ಷ ಕುಟುಂಬಗಳ ಯಜಮಾನಿ ಮಹಿಳೆಯರಿಗೆ ಪ್ರತೀ ತಿಂಗಳು 2000 ರೂಪಾಯಿ ಕೊಡ್ತಾ ಇರೋದು ನಮ್ಮ ಸರ್ಕಾರ. 1 ಕೋಟಿ 61 ಲಕ್ಷ ಕುಟುಂಬಗಳಿಗೆ ಉಚಿತ ಕರೆಂಟ್ ಕೊಡ್ತಾ ಇರೋದು ನಾವು. ಐದು ಕೆಜಿ ಅಕ್ಕಿ ಜೊತೆಗೆ ಐದು ಕೆಜಿ ಅಕ್ಕಿಯ ಹಣವನ್ನೂ ಕೊಡ್ತಾ ಇರೋದು ನಾವು. ಹೀಗೆ ಐದಕ್ಕೆ ಐದೂ ಗ್ಯಾರಂಟಿಗಳ ಮೂಲಕ ಸಂಡೂರಿನ ಜನರಿಗೆ, ರಾಜ್ಯದ ಜನರಿಗೆ ಆರ್ಥಿಕ ಶಕ್ತಿ ಕೊಡ್ತಾ ಇರೋದು ನಾವು. ನಮ್ಮ ಕಾಂಗ್ರೆಸ್ ಸರ್ಕಾರ. ಬಿಜೆಪಿ ಅಧಿಕಾರದಲ್ಲಿರುವ ಯಾವ ರಾಜ್ಯಗಳಲ್ಲೂ ಃಎಕ ಏಕೆ ಜಾರಿ ಮಾಡಿಲ್ಲ ಎನ್ನುವುದನ್ನು ಜನರಿಗೆ ಉತ್ತರಿಸಬೇಕು ಎಂದರು. ಸಂಡೂರಿನ ಅಭಿವೃದ್ಧಿಗೆ ಈ.ತುಕಾರಾಮ್ ಮತ್ತು ಅವರ ಪತ್ನಿ ಅನ್ನಪೂರ್ಣಮ್ಮ ಅವರು ಪ್ರಾಮಾಣಿಕವಾಗಿ ಶ್ರಮಿಸುತ್ತಿದ್ದಾರೆ. ಅನ್ನಪೂರ್ಣಮ್ಮ ಗೆದ್ದರೆ ಸಂಡೂರಿನ ಅಭಿವೃದ್ಧಿ ಕೆಲಸಗಳು ಸರಾಗವಾಗಿ, ವೇಗವಾಗಿ ಮುಂದುವರೆಯುತ್ತವೆ ಎಂದರು. ಅನ್ನಪೂರ್ಣಮ್ಮ ನನ್ನ ಆತ್ಮೀಯ ಸ್ನೇಹಿತನ ಮಗಳು. ಇವರನ್ನು ಗೆಲ್ಲಿಸಿ ಕಳುಹಿಸಿ ಸಂಡೂರಿನ ಜನರಿಗೆ ತುಂಬಾ ಅನುಕೂಲಗಳಾಗುತ್ತವೆ ಎಂದರು.



**ಬಿಜೆಪಿಯವರಿಗೆ ಸಂಡೂರಿನ ಗುಡ್ಡಗಳು, ಗಣಿಗಳ ಮೇಲೆ ಮಾತ್ರ ಪ್ರೀತಿ. ಬಿಜೆಪಿಯವರಿಗೆ ಸಂಡೂರಿನ ಜನರ ಬಗ್ಗೆ, ಸಂಡೂರಿನ ಬಡವರ ಮೇಲೆ ಖಂಡಿತಾ ಪ್ರೀತಿ ಇಲ್ಲ. ನಾನು ಸುಡುಗಾಡಿಗೆ ಹೋಗುವ ವರೆಗೂ ಸಂಡೂರಿನ ಜನರ ಋಣದಲ್ಲಿ ಇರ್ತೀನಿ. ನನ್ನಪ್ಪ ಇಲ್ಲೇ ಸತ್ತ. ನನ್ನ ದೊಡ್ಡಪ್ಪ ಇಲ್ಲೇ ಸತ್ತ. ನಾನು ಜೀವ ಇರುವವರೆಗೂ ಇಲ್ಲೇ ಇರ್ತೀನಿ. ಇಲ್ಲೇ ಸಾಯ್ತೀನಿ.**
**– ಸಚಿವ ಸಂತೋಷ್ ಲಾಡ್**

# ನಿತ್ಯ ಪಂಚಾಂಗ 8.11.2024 ಶುಕ್ರವಾರ



**ಶ್ರೀ ಕ್ರೋಧಿ ನಾಮ ಸಂವತ್ಸರ, ದಕ್ಷಿಣಾಯನ–ಶರದ್ ಋತು, ಚಾಂದ್ರಮಾನ, ಕಾರ್ತಿಕ ಶುದ್ಧ**

**ಸಪ್ತಮಿ, ಉತ್ತರಾಷಾಡ ನಕ್ಷತ್ರ, ಮಹಾಸಪ್ತಮಿ, ಯಾಜ್ಞವಲ್ಕ್ಯ ಜಯಂತಿ, ಅಷ್ಟಾಹ್ನಿಕ ಪವಾರಂಭ, ಮೈಸೂರು ರಥ, ಬೆಂಗಳೂರು ಚಾಮರಾಜಪೇಟೆ ಯಾಜ್ಞವಲ್ಕ್ಯ ಜಯಂತಿ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 –12.00 | 1.30 – 3.00 |
| ಮಂಗಳ | 3.00 – 4.30 | 9.00 –10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 –12.00 |
| ಗುರು | 1.30 – 3.00 | 6.00 – 7.30 | 9.00 –10.30 |
| ಶುಕ್ರ | 10.30 –12.00 | 3.00 – 4.30 | 7.30 – 9.00 |
| ಶನಿ | 9.00 –10.30 | 1.30 – 3.00 | 6.00 – 7.30 |

# ನ.20ಕ್ಕೆ ಬಂದ್‌ಗೆ ಕರೆ

## ಮದ್ಯಮಾರಾಟಗಾರರ ಜೊತೆ ಆರ್ಥಿಕ ಇಲಾಖೆ ಕಾರ್ಯದರ್ಶಿ ಪಿ.ಸಿ.ಜಾಫರ್ ಸಭೆ

**ಬೆಂಗಳೂರು, ನ.7:** ಅಬಕಾರಿ ಸಚಿವ ಆರ್.ಬಿ ತಿಮ್ಮಪುರ ವಿರುದ್ಧ ಭ್ರಷ್ಟಾಚಾರದ ವಿಚಾರವಾಗಿ ಮದ್ಯ ಮಾರಾಟಗಾರರು ಆರೋಪ ಮಾಡಿರುವ ವಿಚಾರಕ್ಕೆ ಸಂಬಂಧಿಸಿದಂತೆ ಇಂದು ಬೆಂಗಳೂರಿನ ವಿಧಾನಸೌಧದಲ್ಲಿ ಮಧ್ಯ ಮಾರಾಟಗಾರರ ಜೊತೆ ಆರ್ಥಿಕ ಇಲಾಖೆ ಕಾರ್ಯದರ್ಶಿ ಪಿ.ಸಿ.ಜಾಫರ್ ಸಭೆ ನಡೆಸಿದರು.

ಸಭೆಯ ಬಳಿಕ ಮದ್ಯಮಾರಾಟಗಾರರ ಅಧಕ್ಷ ಗುರುಸ್ವಾಮಿ ಹೇಳಿಕೆ ನೀಡಿದ್ದು, ನಾವು ಚರ್ಚೆ ಬಳಿಕ ಸಭೆ ಮಾಡಿದ್ದೇವೆ. ಚೀಫ್ ಸೆಕ್ರೆಟರಿ ಜೊತೆಗೆ ಸಭೆ ಮಾಡ್ತೇವೆ ಅಂದಿದ್ದಾರೆ. ಎಲ್ಲ ವಿಚಾರಗಳ ಬಗ್ಗೆ ಚರ್ಚೆ ಮಾಡಿದ್ದೇವೆ. ಭ್ರಷ್ಟಾಚಾರ ವಿಚಾರದ ಬಗ್ಗೆ ಚರ್ಚೆ ಆಗಿದೆ. ಸಿಎಂ ಜೊತೆಗೆ ಸಭೆ ಕೂಡ ಮಾಡುತ್ತೇವೆ. ಕೆಲವು ಬದಲಾವಣೆ ವಿಚಾರವಾಗಿಯೂ ಚರ್ಚೆ ಆಗಿದೆ. ನವೆಂಬರ್ 20ರಂದು ಮದ್ಯ ಮಾರಾಟ ಬಂದ್ ನಡೆಯುತ್ತದೆ. ಅದರ ಬಗ್ಗೆ ಯಾವುದೇ ಬದಲಾವಣೆ ಇಲ್ಲ ಎಂದು ಸ್ಪಷ್ಟಪಡಿಸಿದರು. ನವೆಂಬರ್ 20 ರಂದು ಬಂದ್‌ಗೆ ಕೆಲವರ ವಿರೋಧ ವ್ಯಕ್ತವಾಗಿದೆ. ಮದ್ಯ ಮಾರಾಟಗಾರರಲ್ಲೇ ಇದೀಗ ವಿರೋಧದ ಕೂಗು ಕೇಳಿಬಂದಿದೆ.

ಈ ಕುರಿತು ಪ್ರಧಾನ ಕಾರ್ಯದರ್ಶಿ ಹೊನ್ನಗಿರಿ ಗೌಡ ಹೇಳಿಕೆ ನೀಡಿದ್ದು, ನಾವು ಯಾವುದೇ ಕಾರಣಕ್ಕೆ ಬಂದ್ ಮಾಡಲ್ಲ. ಮೈಸೂರು ಭಾಗದ ಮಾರಾಟಗಾರರ ವಿರೋಧ ವ್ಯಕ್ತವಾಗಿದ್ದು, ಸಭೆಯಲ್ಲೂ ತೀವ್ರ ವಿರೋಧಿಸಿದ್ದಾರೆ. ಮಾರಾಟಕ್ಕೆ ಉತ್ತಮ ವಾತಾವರಣ ನಿರ್ಮಿಸಿಕೊಡಿ. ಒಳ್ಳೆಯ ಅಧಿಕಾರಿಗಳನ್ನ ಹಾಕಿ ಅದನ್ನ ಬಿಟ್ಟು ಬಂದ್ ಮಾಡೋಕೆ ಆಗಲ್ಲ ಎಂದು ಕೆಲವು ಮಾರಾಟಗಾರರು ಅಭಿಪ್ರಾಯ ತಿಳಿಸಿದ್ದಾರೆ.

ಗುರುಸ್ವಾಮಿ ಏಕಾಏಕಿ ನಿರ್ಧಾರ ಮಾಡಿದ್ದಾರೆ ನ.20 ರಂದು ಬಂದ್ ಮಾಡ್ತೇವೆ ಅಂದಿದ್ದಾರೆ. ಚರ್ಚೆ ನಡೆಸದೆ ಮಾಧ್ಯಮ ಹೇಳಿಕೆ ನೀಡಿದ್ದಾರೆ. ನಮ್ಮ ಜೊತೆ ಯಾವುದೇ ಸಭೆ ನಡೆಸಿಲ್ಲ. ಜಿಲ್ಲಾ ಸಂಘಗಳನ್ನು ವಿಶ್ವಾಸಕ್ಕೆ ಪಡೆದಿಲ್ಲ. ಮದ್ಯದಂಗಡಿಗಳ ಬಂದ್‌ಗೆ ನಾವು ಸಹಕಾರ ನೀಡಲ್ಲ. ಎಂದು ವೈನ್ ಮರ್ಚೆಂಟ್ಸ್ ಅಸೋಸಿಯೇಷನ್ ಪ್ರಧಾನ ಕಾರ್ಯದರ್ಶಿ ಹೊನ್ನಗಿರಿಗೌಡ ಹೇಳಿಕೆ ನೀಡಿದರು.

# ಭೂಸ್ವಾಧೀನ ಕೈಬಿಡುವಂತೆ ದೇವನಹಳ್ಳಿ ರೈತರ ಧರಣಿ



**ಬೆಂಗಳೂರು, ನ.7:** ದೇವನಹಳ್ಳಿ ತಾಲೂಕಿನ ಚನ್ನರಾಯಪಟ್ಟಣದಲ್ಲಿ ಕೆಐಎಡಿಬಿಯಿಂದ ರೈತರ ಜಮೀನನ್ನು ಭೂಸ್ವಾಧೀನ ಮಾಡಿಕೊಂಡಿದ್ದು, ಆ ಜಮೀನುಗಳನ್ನು ಕೈ ಬಿಡುವಂತೆ ಒತ್ತಾಯಿಸಿ ರೈತರು ಸಚಿವ ಕೆ.ಎಚ್ ಮುನಿಯಪ್ಪ ನಿವಾಸದ ಮುಂದೆ ರೈತರು ನಡೆಸಿದ್ದಾರೆ. ರೈತರು ಮನೆ ಮುಂದೆ ಧರಣಿ ನಡೆಸುತ್ತಿದ್ದರೆ, ಸಚಿವರು ಮಾತ್ರ ಮನೆಯೊಳಗೆ ಹೋಮ–ಹವನದಲ್ಲಿ ಬ್ಯೂಸಿಯಾಗಿದ್ದರು. ರೈತರು ಈ ಹಿಂದೆ ಸಿಎಂ ಸಿದ್ದರಾಮಯ್ಯ ಅವರಲ್ಲಿ ತಮ್ಮ ಅಳಲು ತೋಡಿಕೊಂಡಿದ್ದರು. ಚನ್ನರಾಯಪಟ್ಟಣದಲ್ಲಿ ಕೆಐಎಡಿಬಿ ನಾಲ್ಕು ಬಾರಿ ಭೂಸ್ವಾಧೀನ ಮಾಡಿದೆ. ಈಗಾಗಲೇ ಬಹುಪಾಲು ಭೂಮಿ ಕಳೆದುಕೊಂಡಿದ್ದೇವೆ, ಉಳಿಕೆ ಭೂಮಿಯನ್ನ ಸ್ವಾಧೀನದಿಂದ ಕೈ ಬಿಡಿ ಎಂದು ಮನವಿ ಮಾಡಿದ್ದರು. ಆಗ ಸಿದ್ದರಾಮಯ್ಯ ಅವರು ದಸರಾ ನಂತರ ಸಮಸ್ಯೆ ಬಗೆಹರಿಸೋದಾಗಿ ಭರವಸೆ ನೀಡಿದ್ದರು. ಆದರೆ, ಅವರ ಭರವಸೆ ಸುಳ್ಳಾಗಿದ್ದರಿಂದ ರೈತರು ತೀವ್ರ ಆಕ್ರೋಶಗೊಂಡು ಸಚಿವ ಕೆ.ಎಚ್ ಮುನಿಯಪ್ಪ ನಿವಾಸದ ಮುಂದೆ ಧರಣಿ ಕುಳಿತಿದ್ದಾರೆ.ಈ ಬಗ್ಗೆ ಮಾಧ್ಯಮಗಳ ಎದುರು ಮಾತನಾಡಿದ ರೈತರು, ನಾವು ಯಾವುದೇ ಕಾರಣಕ್ಕೂ ಕೆಐಎಡಿಬಿಗೆ ಜಮೀನು ನೀಡಲ್ಲ. ಸಣ್ಣ ಹಿಡುವಳಿದಾರರು ನಾವು, ನಮ್ಮ ಜಮೀನು ಕೊಡಲ್ಲ. ಸಚಿವರು ಶಾಸಕರು ನೂರಾರು ಎಕರೆ ಬೇನಾಮಿ ಆಸ್ತಿ ಮಾಡಿದ್ದಾರೆ. ಎಂ.ಎಸ್.ರಾಮಯ್ಯ, ದಿನೇಶ್ ಗುಂಡೂರಾವ್ ಸೇರಿದಂತೆ ಹಲವರ ಆಸ್ತಿ ಇದೆ. ಬೇಕಿದ್ದರೆ, ಅವರ ಜಮೀನುಗಳನ್ನ ಸ್ವಾಧೀನಪಡಿಸಿಕೊಳ್ಳಲಿ.. ನಾವು ದಾಳಿಂಬೆ, ಬಾಳೆ ತೆಂಗು ಬೆಳೆಯುತ್ತಿದ್ದೇವೆ. ಕುಟುಂಬದ ಜೀವನಾಧಾರವಾಗಿರುವ ಆಸ್ತಿ ನಮ್ಮದು.. ರೈತರ ಮಕ್ಕಳ ನೋವು, ಉಸಿರು ತಟ್ಟಲ್ವ ಅವರಿಗೆ ಧರಣಿ ನಿರತ ರೈತರು ಆಕ್ರೋಶ ಹೊರಹಾಕಿದ್ದಾರೆ.

13 ಹಳ್ಳಿಗಳ 1777 ಎಕರೆ ರೈತರ ಭೂಮಿಯನ್ನು ಕೆಐಎಡಿಬಿ ಸ್ವಾಧೀನಪಡಿಸಿಕೊಳ್ಳಲು ಮುಂದಾಗಿದೆ. ನಲಪನಹಳ್ಳಿ, ಮಲ್ಲಾಪುರ, ಶ್ರೀಮಾಚನಹಳ್ಳಿ, ಚನ್ನರಾಯಪಟ್ಟಣ, ನಾಗನಾಯಕನಹಳ್ಳಿ ಪಾಳ್ಯ, ಯಾಡಾಳು, ಮಟ್ಟಬಾರ್ಲು, ವಾಕರೆಬಚ್ಚೇನಹಳ್ಳಿ, ಮುದ್ದೇನಹಳ್ಳಿ, ಕೋಲನಹಳ್ಳಿ, ಕಲ್ಲಳ್ಳಿ ಗ್ರಾಮಗಳ ರೈತರ ಜಮೀನು ಭೂಸ್ವಾಧೀನ ಮಾಡಿಕೊಳ್ಳಲಾಗುತ್ತಿದೆ. ಹೋಮ ಮುಗಿಸಿ ಆ ಬಳಿಕ ಹೊರಬಂದ ಸಚಿವ ಮುನಿಯಪ್ಪ ಅವರು ರೈತರ ಮನವೊಲಿಕೆಗೆ ಮುಂದಾದರು. ನೋಟೀಸ್ ನೀಡಲು ನಾನು ಹೇಳಿಲ್ಲ. ಕೂಡಲೇ ನೋಟೀಸ್ ವಾಪಾಸ್ ಪಡೆಯಲು ಸೂಚನೆ ಕೊಡ್ತೀನಿ, ರೈತ ಮುಖಂಡರನ್ನೆಲ್ಲಾ ಕರೆದು ಸಮಸ್ಯೆ ಇತ್ಯರ್ಥ ಮಾಡ್ತೀನಿ, ಅಲ್ಲಿಯವರೆಗೂ ನೀವು ಬರಬೇಡಿ ಎಂದು ಮನವಿ ಮಾಡಿದರು. ಮುನಿಯಪ್ಪ ಭರವಸೆಗೆ ತೃಪ್ತರಾಗದ ರೈತರು ಧರಣಿ ಮುಂದುವರೆಸಿದ್ದಾರೆ. ಈ ಬಗ್ಗೆ ಮಾತನಾಡಿದ ಸಚಿವರು, ಮೂರು ವರ್ಷದಿಂದ ರೈತರ ಹೋರಾಟ ನಡೆಯುತ್ತಲೇ ಇದೆ. ರೈತರ ವಿಶ್ವಾಸಕ್ಕೆ ತೆಗೆದುಕೊಳ್ಳುತ್ತೇವೆ. ರೈತ ಮುಖಂಡರನ್ನು ಕರೆದು ಮಾತಾಡ್ತೇವೆ. ಸಿಎಂ ಜೊತೆ ಮಾತಾಡಿ, ತಡೆ ಹಿಡಿಯುತ್ತೇವೆ. ನೀರಾವರಿ ಭೂಮಿ ಬಿಟ್ಟು ಉಳಿಕೆ ಜಮೀನನ್ನು ಬಳಸಿಕೊಳ್ಳೋ ಬಗ್ಗೆ ತೀರ್ಮಾನ ಮಾಡ್ತೇವೆ. ನೋಟೀಸ್ ಕೊಟ್ಟಿರೋದನ್ನು ತಡೆ ಹಿಡಿಯುತ್ತೇವೆ, ಹಿರಿಯ ಅಧಿಕಾರಿಗಳ ಜೊತೆ ಮಾತಾಡುತ್ತೇವೆ. ರೈತರ ವಿಚಾರವನ್ನು ಸೆಟ್ಲ್ ಮಾಡ್ತೀವಿ ಎಂದು ಹೇಳಿದರು.

## ನೋಟೀಸ್ ಹಿಂಪಡೆಯುವಂತೆ ಸಚಿವ ಮುನಿಯಪ್ಪ ಸೂಚನೆ

**ಬೆಂಗಳೂರು, ನ.7:** ಚನ್ನರಾಯಪಟ್ಟಣ ಹೋಬಳಿಯ ಹ್ಯಾಡಾಳ ಗ್ರಾಮದ ರೈತರಿಗೆ ಅಧಿಕಾರಿಗಳು ನೋಟೀಸ್ ನೀಡಿರುವ ಬಗ್ಗೆ ನನ್ನ ಗಮನಕ್ಕೆ ಬಂದಿದ್ದು ಕೂಡಲೇ ಹಿಂಪಡೆಯುವಂತೆ ಅಧಿಕಾರಿಗಳಿಗೆ ಆದೇಶವನ್ನು ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಕೆಹೆಚ್. ಮುನಿಯಪ್ಪ ನವರು ನೀಡಿದ್ದಾರೆ. ಗುರುವಾರ ಚನ್ನರಾಯಪಟ್ಟಣ ಹೋಬಳಿಯ ರೈತರು ಸಚಿವರ ನಿವಾಸಕ್ಕೆ ಬಂದು ಮನವಿ ಸಲ್ಲಿಸಿದರು

ಕರ್ನಾಟಕ ಕೈಕಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ರೈತರಿಗೆ ನೀಡಿರುವ ನೋಟೀಸ್ ಹಿನ್ನೆಲೆಯಲ್ಲಿ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಆದೇಶ ನೀಡಿರುವ ಸಚಿವರು ರೈತರ ಹಿತವನ್ನು ಕಾಯುವ ಸರ್ಕಾರವಾಗಿದ್ದು ಅವರಿಗೆ ಯಾವುದೇ ತೊಂದರೆಗಳನ್ನು ನೀಡದೆ ಕ್ರಮ ವಹಿಸಲು ಅಧಿಕಾರಿಗಳಿಗೆ ಸೂಚನೆಯನ್ನು ನೀಡಲಾಗಿದೆ ಎಂದರು.

ಚನ್ನರಾಯಪಟ್ಟಣ ಹೋಬಳಿಯ ರೈತರ ಜಮೀನನ್ನು ಕೆಐಡಿಬಿ ಸ್ವಾಧೀನ ಪಡಿಸಿಕೊಳ್ಳುತ್ತಿರುವ ವಿಷಯವನ್ನು ಈಗಾಗಲೇ ಮುಖ್ಯಮಂತ್ರಿಗಳು ಹಾಗೂ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ್ ಅವರೊಂದಿಗೆ ಸಭೆಯನ್ನು ನಡೆಸಿದ್ದು ಕೆಲವೇ ದಿನಗಳಲ್ಲಿ ಸಮಸ್ಯೆಯನ್ನು ಬಗೆಹರಿಸುತ್ತೇವೆ ಎಂದು ರೈತರಿಗೆ ಭರವಸೆಯನ್ನು ನೀಡಿದರು.

ಮುಂದಿನ ಸರ್ಕಾರದ ಆದೇಶದವರೆಗೂ ಯಾವುದೇ ನೋಟೀಸ್ ಗಳನ್ನು ರೈತರಿಗೆ ನೀಡದಂತೆ ಹಾಗೂ ತಕ್ಷಣವೇ ರೈತರಿಗೆ ನೀಡಿರುವ ನೋಟೀಸ್ ಹಿಂಪಡೆಯಲು ಅಧಿಕಾರಿಗಳಿಗೆ ಸಚಿವರು ಸೂಚಿಸಿದರು

ಮುಖ್ಯಮಂತ್ರಿಗಳೊಂದಿಗೆ ಸಭೆಯನ್ನು ನಡೆಸಿ ಈ ಕುರಿತು ಅಂತಿಮ ತೀರ್ಮಾನ ತೆಗೆದುಕೊಳ್ಳುವವರೆಗೂ ರೈತರಿಗೆ ನೋಟೀಸ್ ನೀಡಿದಂತೆ ಸೂಚನೆ ನೀಡಿದರು.

# ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳಲ್ಲಿ ಓದುವ ಮಕ್ಕಳ ಪ್ರೋತ್ಸಾಹಧನ 1 ರಿಂದ 2 ಲಕ್ಷಕ್ಕೆ ಹೆಚ್ಚಳ



**ಬೆಂಗಳೂರು, ನ.7:** ರಾಷ್ಟ್ರೀಯ ಸಂಸ್ಥೆಗಳಲ್ಲಿ ಓದುವ ಪರಿಶಿಷ್ಟ ವಿದ್ಯಾರ್ಥಿಗಳ ಪ್ರೋತ್ಸಾಹ ಧನವನ್ನು 1 ರಿಂದ 2 ಲಕ್ಷಕ್ಕೆ ಹೆಚ್ಚಳ ಮಾಡಿ ಸರ್ಕಾರವು ಆದೇಶ ಹೊರಡಿಸಿದ್ದು ಇದು ಪರಿಶಿಷ್ಟ ಸಮುದಾಯದ ವಿದ್ಯಾರ್ಥಿಗಳ ಹೆಚ್ಚಿನ ಶೈಕ್ಷಣಿಕ ಸಾಧನೆಗೆ ಕಾರಣವಾಗಲಿದೆ ಎಂದು ಮಾನ್ಯ ಸಮಾಜ ಕಲ್ಯಾಣ ಸಚಿವರಾದ ಡಾ.ಎಚ್.ಸಿ.ಮಹದೇವಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಇನ್ನು ಪಿಯುಸಿ ಪರೀಕ್ಷೆಯಲ್ಲಿ 95ಕ್ಕೂ ಹೆಚ್ಚಿನ ಅಂಕಗಳನ್ನು ಪಡೆದು, ನೀಟ್ ಪ್ರವೇಶ ಪರೀಕ್ಷೆಯ ಮೂಲಕ ಸರ್ಕಾರಿ ಕೋಟಾದಡಿ ಪ್ರವೇಶ ದೊರಕದೇ ಮ್ಯಾನೇಜ್‌ಮೆಂಟ್ ಕೋಟಾದಡಿ ಎಂಬಿಬಿಎಸ್ ಕೋರ್ಸ್‌ಗೆ ಸೀಟು ಪಡೆದುಕೊಂಡ ಪರಿಶಿಷ್ಟ ಜಾತಿಯ ಮಕ್ಕಳಿಗೆ 25 ಲಕ್ಷ ರೂಪಾಯಿಗಳ ಶುಲ್ಕ ಧನವನ್ನು ಒದಗಿಸಲು ಸರ್ಕಾರ ತೀರ್ಮಾನಿಸಿದೆ.

ಎಂಬಿಬಿಎಸ್ ಪದವಿಯನ್ನು ಪಡೆಯುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ಮೊದಲ ವರ್ಷ 60%ಗೂ ಹೆಚ್ಚಿನ ಅಂಕಗಗಳನ್ನು ಪಡೆದು ಉತ್ತೀರ್ಣರಾದರೆ ಅವರಿಗೆ ಅವರಿಗೆ ಮತ್ತೆ 25 ಲಕ್ಷ ರೂಪಾಯಿಗಳ ಪ್ರೋತ್ಸಾಹ ಧನವನ್ನು ನೀಡಲಾಗುವುದು.

ಶಿಕ್ಷಣವೇ ಸಮಾಜವನ್ನು ಬದಲಿಸುವ ಕೀಲಿಕೈ ಎಂಬ ಅಂಶವನ್ನು ಮನಗಂಡು ಈ ಒಂದು ಮಹತ್ವದ ಘೋಷಣೆಯನ್ನು ಸರ್ಕಾರವು ಮಾಡಿದ್ದು, ಇದರಿಂದ ಉನ್ನತ ಶಿಕ್ಷಣ ಮಾಡಬೇಕೆಂಬ ವಿದ್ಯಾರ್ಥಿಗಳ ಕನಸು ನನಸಾಗಲಿದೆ. ಐಐಟಿ ಐಐಎಂ ನಂತಹ ಶಿಕ್ಷಣ ಸಂಸ್ಥೆಗಳಲ್ಲಿ ಓದುವಂತಹ ಪರಿಶಿಷ್ಟ ಜಾತಿ ಮತ್ತು ಪಂಗಡದ ಮಕ್ಕಳು ದೇಶ ನಿರ್ಮಾಣದಲ್ಲಿ ಸಕ್ರಿಯವಾಗಿ ತೊಡಗಬೇಕು, ಆ ಮೂಲಕ ಸಮೃದ್ಧ ಮತ್ತು ಸಶಕ್ತ ರಾಷ್ಟ್ರದ ನಿರ್ಮಾಣವಾಗಬೇಕು ಎಂದು ಮಾನ್ಯ ಸಚಿವರು ತಿಳಿಸಿದರು.ಇನ್ನು ಬಡತನದ ಬೇಗೆಗೆ ಸಿಲುಕಿ ಎಂಬಿಬಿಎಸ್ ಓದುವ ಬಯಕೆ ಇರುವಂತಹ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸರ್ಕಾರಿ ಕೋಟಾದಡಿ ಸೀಟು ಸಿಗದೇ ಅವರು ಖಾಸಗೀ ಸಂಸ್ಥೆಗಳಲ್ಲಿ ಓದುತ್ತಿದ್ದರೆ, ಅಂತಹ ಪ್ರತಿಭಾವಂತ ಮಕ್ಕಳ ಶುಲ್ಕವನ್ನು ಸರ್ಕಾರ ಭರಿಸಲಿದ್ದು, ಇದಕ್ಕಾಗಿ ಆರಂಭಿಕವಾಗಿ 25 ಲಕ್ಷ ರೂಪಾಯಿಗಳನ್ನು ನೀಡುವ ನಿರ್ಧಾರವನ್ನು ತೆಗೆದುಕೊಂಡಿದೆ.

# ಎಚ್‌ಡಿಕೆ-ರಮೇಶ್‌ಗೌಡ ವಿರುದ್ಧದ ಹಣ ಬೇಡಿಕೆ ಪ್ರಕರಣ: ಅರ್ಜಿ ವಿಚಾರಣೆ ನ.29ಕ್ಕೆ

**ಬೆಂಗಳೂರು, ನ.7:** ಚನ್ನಪಟ್ಟಣ ವಿಧಾನಸಭಾ ಉಪಚುನಾವಣೆಯ ಖರ್ಚಿಗೆ 50 ಕೋಟಿ ರೂಪಾಯಿ ಬೇಡಿಕೆ ಇಟ್ಟು ಬೆದರಿಕೆ ಹಾಕಿರುವ ಆರೋಪದ ಪ್ರಕರಣದಲ್ಲಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ವಿರುದ್ಧ ಯಾವುದೇ ಬಲವಂತದ ಕ್ರಮಕೈಗೊಳ್ಳದಂತೆ ಪೊಲೀಸರಿಗೆ ರಾಜ್ಯ ಹೈಕೋರ್ಟ್ ಮಧ್ಯಂತರ ಆದೇಶ ನೀಡಿದೆ. ರಿಯಲ್ ಎಸ್ಟೇಟ್ ಉದ್ಯಮಿ ಮತ್ತು ಜೆಡಿಎಸ್ ಮಾಜಿ ಮುಖಂಡ ವಿಜಯ್ ಟಾಟಾ ದೂರಿನ ಮೇರೆಗೆ ಅಮೃತಹಳ್ಳಿ ಠಾಣೆಯಲ್ಲಿ ದಾಖಲಾಗಿರುವ ಎಫ್‌ಐಆರ್ ರದ್ದುಗೊಳಿಸುವಂತೆ ಕೋರಿ ಎಚ್.ಡಿ.ಕುಮಾರಸ್ವಾಮಿ ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರ ಏಕಸದಸ್ಯ ಪೀಠ ವಿಚಾರಣೆ ನಡೆಸಿತು.

ಅರ್ಜಿದಾರರ ಪರ ವಕೀಲ ಎ.ವಿ.ನಿಶಾಂತ್ ಅವರು ಇದೇ ಪ್ರಕರಣದಲ್ಲಿ ಮೊದಲ ಆರೋಪಿಯಾಗಿರುವ ಜೆಡಿಎಸ್ ನಗರ ಘಟಕದ ಅಧ್ಯಕ್ಷ ರಮೇಶ್ ಗೌಡ ವಿರುದ್ಧ ಯಾವುದೇ ಬಲವಂತ ಕ್ರಮಕೈಗೊಳ್ಳದಂತೆ ಆದೇಶ ಮಾಡಲಾಗಿದೆ ಎಂದು ಪೀಠದ ಗಮನಕ್ಕೆ ತಂದರು. ಇದನ್ನು ಆಲಿಸಿದ ಪೀಠವು ಇಲ್ಲಿಯೂ ಯಾವುದೇ ಬಲವಂತದ ಕ್ರಮಕೈಗೊಳ್ಳಬಾರದು ಎಂಬ ಆದೇಶ ಅನ್ವಯಿಸಲಿದೆ ಎಂದು ವಿಚಾರಣೆಯನ್ನು ನ.29ಕ್ಕೆ ಮುಂದೂಡಿತು. ಅ.23ರಂದು ರಮೇಶ್ ಗೌಡ ಅರ್ಜಿ ವಿಚಾರಣೆ ನಡೆಸಿದ್ದ ಪೀಠವು ಅಮೃತಹಳ್ಳಿ ಠಾಣಾಧಿಕಾರಿಯು ಕುಮಾರಸ್ವಾಮಿ ಅವರು 50 ಕೋಟಿ ರೂಪಾಯಿ ಬೇಡಿಕೆ ಇಟ್ಟಿದ್ದಾರೆ ಎಂಬ ದೂರಿಗೆ ಸಂಬಂಧಿಸಿದಂತೆ ಮೊದಲಿಗೆ ಎನ್‌ಸಿಆರ್ ದಾಖಲಿಸಿ, ಆನಂತರ ಎಫ್‌ಐಆರ್ ಮಾಡಿರುವುದು ಏಕೆ ಎಂಬುದಕ್ಕೆ ಮುಂದಿನ ವಿಚಾರಣೆ ವೇಳೆಗೆ ವಿವರಣೆ ಸಲ್ಲಿಸಬೇಕು. ಅಲ್ಲಿಯವರೆಗೆ ಅರ್ಜಿದಾರರ ವಿರುದ್ಧ ಯಾವುದೇ ದುರುದ್ದೇಶಪೂರಿತ ಕ್ರಮಕೈಗೊಳ್ಳಬಾರದು ಎಂದು ಆದೇಶಿಸಿತ್ತು. ವಿಜಯ್ ಟಾಟಾ ದೂರು ಆಧರಿಸಿ ಅ.3ರಂದು ರಮೇಶ್ ಗೌಡ ಮತ್ತು ಕುಮಾರಸ್ವಾಮಿ ವಿರುದ್ಧ ಭಾರತೀಯ ನ್ಯಾಯ ಸಂಹಿತೆ ಸೆಕ್ಷನ್‌ಗಳಾದ 308(2), 351(2), 3(5) ಅಡಿ ಪ್ರಕರಣ ದಾಖಲಿಸಲಾಗಿದೆ.

# ಬಿಜೆಪಿ ವಿರುದ್ಧ ಸಿಎಂ ಸಿದ್ದರಾಮಯ್ಯ ವಾಗ್ದಾಳಿ



ಸಂಡೂರು, ನ.7: ವಾದಾ ದಿಯಾ: ಪೂರಾ ಕಿಯಾ ಎಂದು ಸಿ.ಎಂ.ಸಿದ್ದರಾಮಯ್ಯ ಅವರು ಬಿಜೆಪಿಯ ಸುಳ್ಳು ಜಾಹಿರಾತಿಗೆ ಕಪಾಳಮೋಕ್ಷ ಮಾಡಿದರು. ಸಂಡೂರು ಚುನಾವಣಾ ಪ್ರಚಾರದ ವೇದಿಕೆಯಲ್ಲೇ ಈ ಹೇಳಿಕೆ ನೀಡಿದರು. ಮಹಾರಾಷ್ಟ್ರದ ಬಿಜೆಪಿ ಕರ್ನಾಟಕ ಸರ್ಕಾರ ವಾದಾ ಕಿಯಾ: ಧೋಖಾ ದಿಯಾ ಎಂದು ಸುಳ್ಳು ಜಾಹಿರಾತು ನೀಡಿದೆ. ಕರ್ನಾಟಕದಲ್ಲಿ ಮಹಿಳೆಯರಿಗೆ ಉಚಿತ ಬಸ್ ಪ್ರಯಾಣದ ಭರವಸೆ ನೀಡಿತ್ತು. ಭರವಸೆ ಈಡೇರಿಸದೇ, ಯೋಜನೆಯನ್ನೇ ಇನ್ನೂ ಆರಂಭಿಸದೆ ವಂಚಿಸಿದೆ ಎನ್ನುವ ಅರ್ಥದ ಪರಮ ಸುಳ್ಳಿನ ಜಾಹಿರಾತುಗಳನ್ನು ಪುಟಗಟ್ಟಲೆ ನೀಡಿದೆ. ಈ ಸುಳ್ಳಿನ ಜಾಹಿರಾತನ್ನು ಉಲ್ಲೇಖಿಸಿದ ಸಿಎಂ ಸಿದ್ದರಾಮಯ್ಯ ಅವರು ಅವರದೇ ಶೈಲಿಯಲ್ಲಿ ಉತ್ತರಿಸಿ, "ವಾದಾ ದಿಯಾ ಪೂರಾ ಕಿಯಾ" ಎಂದು ವ್ಯಂಗ್ಯವಾಗಿ ತಿರುಗೇಟು ನೀಡಿದರು.

**ಸುಳ್ಳೇ ಬಿಜೆಪಿಯ ಮನೆ ದೇವರು: ಸಿಎಂ**

ಬಿಜೆಪಿಯವರಿಗೆ ಸುಳ್ಳೇ ಮನೆ ದೇವರು. ರಾಜ್ಯದಲ್ಲಿ ಶಕ್ತಿ ಯೋಜನೆ ಸೇರಿದಂತೆ ಐದಕ್ಕೆ ಐದೂ ಗ್ಯಾರಂಟಿಗಳು ಯಶಸ್ವಿಯಾಗಿ ನಡೆದುಕೊಂಡು ಹೋಗುತ್ತಿದೆ. ಗೃಹಲಕ್ಷ್ಮಿಯ ಮುಂದಿನ ಕಂತಿನ ಹಣ ಒಂದೆರಡು ದಿನಗಳಲ್ಲೇ ಬಿಡುಗಡೆ ಕೂಡ ಆಗುತ್ತದೆ. ಆದರೆ ಬಿಜೆಪಿಯವರು ಸುಳ್ಳುಗಳನ್ನು ಹರಡಿಸುತ್ತಾ, ಸುಳ್ಳುಗಳನ್ನು ಹರಡುವುದಕ್ಕೇ ಕೋಟಿ ಕೋಟಿ ಖರ್ಚು ಮಾಡುತ್ತಿರುವುದಕ್ಕೆ ಆಕ್ರೋಶ ವ್ಯಕ್ತಪಡಿಸಿದರು.

**ಮೋದಿ ಹೇಳಿದ್ದೇನು? ಮಾಡಿದ್ದೇನು?**

ವಿದೇಶದಲ್ಲಿರುವ ಕಪ್ಪು ಹಣ ತಂದು ಎಲ್ಲರ ಖಾತೆಗೆ 15 ಲಕ್ಷ ಕೊಡ್ತೀವಿ ಅಂತ ಹೇಳಿದ್ರಲ್ಲಾ ಮೋದಿಯವರೇ ಕೊಟ್ರೇನ್ರೀ? ವರ್ಷಕ್ಕೆ 2 ಕೋಟಿ ಉದ್ಯೋಗ ಸೃಷ್ಟಿ ಮಾಡ್ತೀನಿ ಅಂದ್ರಲ್ಲಾ ಮೋದಿಯವರೇ, ಉದ್ಯೋಗ ಸೃಷ್ಟಿ ಮಾಡಿದ್ರಾ? ಎಲ್ರೀ ಸ್ವಾಮಿ ನಿಮ್ಮ ಅಚ್ಛೆ ದಿನ್? ರೈತರ ಆದಾಯ ದುಪ್ಪಟ್ಟು ಮಾಡ್ತೀನಿ ಅಂದ್ರಲ್ಲಾ ಮೋದಿಯವರೇ ಮಾಡಿದ್ರಾ? ಮೋದಿ ಪ್ರಧಾನಿ ಆಗುವ ಮೊದಲು ದೇಶದ ಸಾಲ ಇದ್ದದ್ದು 54 ಲಕ್ಷ ಕೋಟಿ ಮಾತ್ರ ಇತ್ತು. ಈಗ ನಿಮ್ಮ ಅವಧಿಯಲ್ಲಿ ದೇಶದ ಸಾಲವನ್ನು 185 ಲಕ್ಷ ಕೋಟಿಗೆ ಏರಿಸಿದ್ದೀರಿ. ಇದೇನಾ ಸ್ವಾಮಿ ನಿಮ್ಮ ಅಚ್ಛೆ ದಿನ್ ಎಂದು ವ್ಯಂಗ್ಯವಾಡಿದರು.

# ಐಎಎಸ್ ರೋಹಿಣಿ ಸಿಂಧೂರಿ ವಿರುದ್ಧ ಸುಪ್ರೀಂ ಮೆಟ್ಟಿಲೇರಿದ್ದ ಐಪಿಎಸ್ ಡಿ.ರೂಪಾಗೆ ಹಿನ್ನಡೆ



**ನವದೆಹಲಿ, ನ.7:** ಐಎಎಸ್ ರೋಹಿಣಿ ಸಿಂಧೂರಿ ಸಲ್ಲಿಸಿರುವ ಮಾನನಷ್ಟ ಮೊಕದ್ದಮೆ ರದ್ದು ಕೋರಿ ಸುಪ್ರೀಂಕೋರ್ಟ್ಗ ಮೇಲ್ಮನವಿ ಅರ್ಜಿ ಸಲ್ಲಿಸಿದ್ದ ಐಪಿಎಸ್ ಡಿ. ರೂಪಾ ಮೌದ್ಗಿಲ್ ತಮ್ಮ ಅರ್ಜಿಯನ್ನು ವಾಪಸ್ ಪಡೆದಿದ್ದಾರೆ. ಅರ್ಜಿ ವಾಪಸ್ ಪಡೆಯದಿದ್ದರೆ ವಜಾ ಮಾಡುವುದಾಗಿ ಕೋರ್ಟ್ ಎಚ್ಚರಿಕೆ ನೀಡಿದ ಬಳಿಕ ಅರ್ಜಿ ವಾಪಾಸ್ ಪಡೆದಿದ್ದಾರೆ.

ರೋಹಿಣಿ ಸಿಂಧೂರಿ ಸಲ್ಲಿಸಿದ್ದ ಅರ್ಜಿ ವಜಾ ಮಾಡಲು ಹೈಕೋರ್ಟ್ ನಿರಾಕರಿಸಿದ ಹಿನ್ನಲೆ ಹೈಕೋರ್ಟ್ ಆದೇಶ ಪ್ರಶ್ನಿಸಿ ಸುಪ್ರೀಂಕೋರ್ಟ್‌ಗೆ ಡಿ.ರೂಪಾ ಅರ್ಜಿ ಸಲ್ಲಿಸಿದ್ದರು. ಅರ್ಜಿಯನ್ನು ನ್ಯಾ. ಎ.ಎಸ್ ಓಕಾ ನೇತೃತ್ವದ ದ್ವಿ ಸದಸ್ಯ ವಿಚಾರಣೆ ನಡೆಸಿತು. ವಿಚಾರಣೆ ವೇಳೆ ಡಿ.ರೂಪಾ ಪರ ವಕೀಲರು ಮಧ್ಯವರ್ತಿಗಳ ಮಧ್ಯಸ್ಥಿಕೆಯಲ್ಲಿ ಪರಸ್ಪರ ಕ್ಷಮೆಯಾಚನೆಗೆ ಮನವಿ ಮಾಡಿದರು, ಇದಕ್ಕೆ ಒಪ್ಪದ ರೋಹಣಿ ಸಿಂಧೂರಿ ಪರ ವಕೀಲರು ಅವರಿಂದ ತಪ್ಪಾಗಿದೆ ಹೀಗಾಗೀ ಡಿ. ರೂಪಾ ಬೇಷರತ್ ಕ್ಷಮೆಯಾಚಿಸಿದರೆ ಮಾನನಷ್ಟ ಮೊಕದಮ್ಮೆ ಅರ್ಜಿ ವಾಪಸ್ ಪಡೆಯುವುದಾಗಿ ವಾದಿಸಿದರು.

ಈ ವೇಳೆ ಮಧ್ಯಪ್ರವೇಶ ಮಾಡಿದ ನ್ಯಾಯಧೀಶರು ಇಬ್ಬರು ಕೋರ್ಟ್‌ನಲ್ಲಿದ್ದೀರಿ ಪರಸ್ಪರ ಮಾತನಾಡಿಕೊಳ್ಳಬಹುದೇ ಅಥಾವ ಹಿರಿಯ ವಕೀಲರು ಅಥಾವ ನಿವೃತ್ತ ನ್ಯಾಯಾಧೀಶರ ಸಮ್ಮುಖದಲ್ಲಿ ಪರಸ್ಪರ ರಾಜೀ ಸಂಧಾನ ಮಾಡಬಹುದೇ ಎಂದು ಪ್ರಸ್ತಾಪ ಮಾಡಿತು. ಕೆಲ ಕಾಲ ಮಾತುಕತೆಗೂ ಅವಕಾಶ ನೀಡಿ ವಿಚಾರಣೆ ಮುಂದೂಡಿತು.

ಕೆಲ ಹೊತ್ತಿನ ಬಳಿಕ ಡಿ. ರೂಪಾ ಮಾತುಕತೆ ವಿಫಲವಾಯಿತು ಎಂದರು. ಇದಕ್ಕೆ ಕಾರಣ ಏನು ಎಂದು ನ್ಯಾಯಧೀಶರು ಪ್ರಶ್ನಿಸಿರು ಇದಕ್ಕೆ ಉತ್ತರಿಸಿದ ರೂಪಾ ನಾನು ಬೇಷರತದ ಕ್ಷಮೆ ಯಾಚಿಸಲು ಕೇಳುತ್ತಿದ್ದಾರೆ ಎಂದು ಹೇಳಿದರು.

ಇದಕ್ಕೆ ಉತ್ತರಿಸಿದ ರೋಹಿಣಿ ಸಿಂಧೂರಿ, ಡಿ.ರೂಪಾ ನನ್ನ ಮೇಲೆ ಮಾಡಿದ ಆರೋಪಗಳು ಇನ್ನು ಸಾಮಾಜಿಕ ಜಾಲತಾಣಗಳಿದೆ ಕೋರ್ಟ್ ಆದೇಶ ಬಳಿಕವೂ ರೂಪಾ ಡಿಲಿಟ್ ಮಾಡಿಲ್ಲ ಎಂದು ವಾದಿಸಿದರು. ಇಬ್ಬರು ಹಿರಿಯ ಅಧಿಕಾರಿಗಳು ಹೀಗೆ ವರ್ತಿಸಬಾರದು, ಮಾತುಕತೆಗೆ ಒಪ್ಪದಿದ್ದರೆ ನಾವು ಏನು ಮಾಡಬಹುದು, ಅರ್ಹತೆ ಮೇಲೆ ವಿಚಾರಣೆ ನಡೆಸಬಹುದು ಎಂದು ಕೋರ್ಟ್ ಆಕ್ಷೇಪ ವ್ಯಕ್ತಪಡಿಸಿತು. ಅಂತಿಮವಾಗಿ ಇಬ್ಬರು ಅಧಿಕಾರಿಗಳನ್ನು ತರಾಟೆ ತೆಗೆದುಕೊಂಡ ಸುಪ್ರೀಂ ವಿಚಾರಣಾಧೀನ ನ್ಯಾಯಲಯದಲ್ಲಿ ಪ್ರಕರಣ ಇತ್ಯರ್ಥ ಪಡಿಸಿಕೊಳ್ಳುವಂತೆ ಸೂಚನೆ ನೀಡಿತು. ಸುಪ್ರೀಂಕೋರ್ಟ್ ಸೂಚನೆ ಹಿನ್ನಲೆ ಡಿ. ರೂಪಾ ತಮ್ಮ ಅರ್ಜಿ ವಾಪಸ್ ಪಡೆದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ರಾಜ್ಯ ಸರ್ಕಾರದ ಸೂಚನೆ ಮೇರೆಗೆ ಜಮೀನು-ಕಟ್ಟಡಗಳ ದಾಖಲೆಯಲ್ಲಿ ವಕ್ಫ್ ನಮೂದು: ಜಗದಾಂಬಿಕಾ ಪಾಲ್ ಆರೋಪ



**ಹುಬ್ಬಳ್ಳಿ, ನ. 7:** ಕರ್ನಾಟಕದಲ್ಲಿ ವಕ್ಫ್ ವಿವಾದ ತೀವ್ರಗೊಂಡಿರುವ ಬೆನ್ನಲ್ಲೇ ರಾಜ್ಯಕ್ಕೆ ಭೇಟಿ ನೀಡಿರುವ ಜಂಟಿ ಸಂಸದೀಯ ಸಮಿತಿಯ ಅಧ್ಯಕ್ಷ ಜಗದಾಂಬಿಕಾ ಪಾಲ್ ನಗರದಲ್ಲಿ ರೈತರ ಅಹವಾಲು ಆಲಿಸಿದ ನಂತರ, ಕರ್ನಾಟಕದ ಕಾಂಗ್ರೆಸ್ ಸರ್ಕಾರದ ಸೂಚನೆಯ ಮೇರೆಗೆ ಸಾರ್ವಜನಿಕರ ಜಮೀನು ಮತ್ತು ಆಸ್ತಿ ಪಾಸ್ತಿಗಳ ದಾಖಲೆಯಲ್ಲಿ ವಕ್ಫ್ ನಮೂದಿಸಲಾಗಿದೆ. ವಕ್ಫ್ ಸಚಿವ ಜಮೀರ್ ಅಹ್ಮದ್ ಖಾನ್ ಅವರು ಸ್ವತಃ ತಾವು ಮುಖ್ಯಮಂತ್ರಿಗಳ ಆದೇಶದ ಮೇರೆಗೆ ವಕ್ಫ್ ಅದಾಲತಗಳನ್ನು ನಡೆಸಿ, ಖಾತೆ ಬದಲಾವಣೆಗೆ ಗಡುವು ನೀಡಿರುವುದಾಗಿ ತಿಳಿಸಿರುವುದೆಲ್ಲವೂ ರಾಜ್ಯ ಸರ್ಕಾರ ಸೃಷ್ಟಿಸಿಕೊಂಡ ಸಮಸ್ಯೆ ಮತ್ತು ಜನರಿಗೆ ಅನಗತ್ಯ ತೊಂದರೆಗೆ ಸಿಲುಕಿಸಿರುವ ಕ್ರಿಯೆಯಗಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ನೇರ ವಾಗ್ದಾಳಿ ನಡೆಸಿದ್ದಾರೆ.

ಆಡಳಿತ ವ್ಯವಸ್ಥೆಯ ಕೈವಾಡ ಇಲ್ಲದೆ ಈ ರೀತಿ ಎಲ್ಲ ಬದಲಾವಣೆಗಳು ಆಗಲು ಸಾಧ್ಯವಿಲ್ಲ. ಕೇಂದ್ರದಲ್ಲಿ ವಕ್ಫ್ ಕಾಯ್ದೆಗೆ ತಿದ್ದುಪಡಿ ತರುವ ನಿಟ್ಟಿನಲ್ಲಿ ಜಂಟಿ ಸಂಸದೀಯ ಸಮಿತಿ ರಚಿಸಲಾಗಿದೆ. ಸಮಿತಿಯಲ್ಲಿ ಚರ್ಚೆಗಳು ನಡೆದಿರುವಾಗಲೇ ಇತ್ತ ಕರ್ನಾಟಕ ಮತ್ತಿತರ ರಾಜ್ಯಗಳಲ್ಲಿ ಸರ್ಕಾರಿ ಆಸ್ತಿಗಳನ್ನು, ಸಾರ್ವಜನಿಕರ ಜಮೀನು, ಮಠ-ಮಾನ್ಯಗಳು ಹಾಗೂ ಐತಿಹಾಸಿಕ ಸ್ಮಾರಕಗಳನ್ನು ವಕ್ಫ್ ಸೇರ್ಪಡೆಗೊಳಿಸಿರುವುದು ಕಂಡು ಬಂದಿದೆ. ಅನೇಕ ದಶಕಗಳಿಂದ ಉಳುಮೆ ಮಾಡುತ್ತಿರುವ ರೈತರಿಗೆ ವಕ್ಫ್ ನೋಟಿಸ್ ನೀಡಲಾಗಿದೆ. ಪಾರದರ್ಶಕ ರೀತಿಯಲ್ಲಿ ಕಾಯ್ದೆ ರೂಪಿಸಲು ಈ ಸಂಸದೀಯ ಸಮಿತಿ ರಚನೆಯಾಗಿದೆ. ಭವಿಷ್ಯದಲ್ಲಿ ವಕ್ಫ್ ಆಸ್ತಿ ಮಾರಾಟವಾಗದಂತೆ ಅದನ್ನು ರಕ್ಷಣೆ ಮಾಡುವ ನಿಟ್ಟಿನಲ್ಲಿ ಈ ಹೆಜ್ಜೆ ಇರಿಸಲಾಗಿದೆ. 10-15 ರೈತರ ನಿಯೋಗ ಮನವಿ ಸಲ್ಲಿಸುವ ನಿರೀಕ್ಷೆ ಇತ್ತು. ಆದರೆ, ಒಂದೊಂದು ಕಡೆಯೂ 70ಕ್ಕೂ ಹೆಚ್ಚು ಅಹವಾಲುಗಳು ಬಂದಿವೆ ಎಂದರು. ರಾಜ್ಯ ಸರ್ಕಾರದ ಸೂಚನೆಯ ಮೇರೆಗೇ ರೈತರ ಪಹಣಿಯಲ್ಲಿ ವಕ್ಫ್ ಆಸ್ತಿ ಎಂದು ನಮೂದಿಸಲಾಗಿದೆ ಎಂಬುದಾಗಿ ಜಂಟಿ ಸಂಸದೀಯ ಸಮಿತಿಯ ಅಧ್ಯಕ್ಷ ಜಗದಾಂಬಿಕಾ ಪಾಲ್ ನೇರವಾಗಿ ರಾಜ್ಯ ಸರ್ಕಾರದ ವಿರುದ್ಧ ಆರೋಪಿಸಿದರು. ಆಡಳಿತ ವ್ಯವಸ್ಥೆಯ ಕೈವಾಡ ಇಲ್ಲದೆ ಇದೆಲ್ಲ ಆಗಲು ಸಾಧ್ಯವಿಲ್ಲ. ರಾಜ್ಯ ಸರ್ಕಾರ ಸೂಚನೆಯಂತೆ ವಕ್ಫ್ ಆಸ್ತಿ ಎಂದು ಘೋಷಿಸಲಾಗಿದೆ. ಈಗ ರೈತರಿಗೆ ಕೊಟ್ಟ ನೋಟಿಸ್ ಹಿಂಪಡೆಯುವುದಾಗಿ ಹೇಳಿದ್ದಾರೆ. ರಾಜ್ಯ ಸರ್ಕಾರದ ಕೈವಾಡ ಇಲ್ಲದೆ ಆಸ್ತಿ ಕಬಳಿಸಲು ಸಾಧ್ಯವಿಲ್ಲ. ಸರ್ಕಾರದ ಸೂಚನೆ ಇಲ್ಲದೆ ಅಧಿಕಾರಿಗಳು ಹೇಗೆ ಕೆಲಸ ಮಾಡ್ತಾರೆ ಇದು ಅತ್ಯಂತ ಗಂಭೀರವಾದ ವಿಚಾರ ಎಂದು ಕರ್ನಾಟಕ ಕಾಂಗ್ರೆಸ್ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು, ಎಲ್ಲ ಅಹವಾಲುಗಳನ್ನು ಗಂಭೀರವಾಗಿ ಪರಿಗಣಿಸಿ ವರದಿ ತಯಾರಿಸುತ್ತೇವೆ ಎಂದೂ ಜಗದಾಂಬಿಕಾ ಪಾಲ್ ಹೇಳಿದರು. ಮತ್ತೊಂದೆಡೆ, ಈ ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲೇ ರೈತರ ಆಸ್ತಿ ದಾಖಲೆಗಳಲ್ಲಿ ವಕ್ಫ್ ಹೆಸರು ನಮೂದಿಸಲು ಸುತ್ತೋಲೆ ಹೊರಡಿಸಲಾಗಿತ್ತು ಎಂದು ಕಾಂಗ್ರೆಸ್ ಆರೋಪಿಸುತ್ತಿದೆ. ಈ ಮಧ್ಯೆ, ಜಗದಾಂಬಿಕಾ ಪಾಲ್ ನೇರವಾಗಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಆರೋಪ ಮಾಡಿದ್ದಾರೆ. ಇದು ರಾಜ್ಯ ರಾಜಕಾರಣದಲ್ಲಿ ಮತ್ತೊಂದು ಸುತ್ತಿನ ವಾಕ್ಸಮರಕ್ಕೆ ಕಾರಣವಾಗುವ ಎಲ್ಲ ಸಾಧ್ಯತೆಗಳಿವೆ. ಏತನ್ಮಧ್ಯೆ, ವಿಜಯಪುರದಲ್ಲಿ ಬಿಜೆಪಿ ನಾಯಕರ, ರೈತರ ಅಹೋರಾತ್ರಿ ಧರಣಿ ಮುಂದುವರಿದಿದೆ. ರೈತರು ರಾಜ್ಯದಲ್ಲಿ ರೊಚ್ಚಿಗೆದ್ದಿದ್ದಾರೆ, ವಕ್ಫ್ ಬೋರ್ಡ್ ನೋಟೀಸ್ ಕುರಿತ ಸಂಪೂರ್ಣ ಮಾಹಿತಿ ಜೆಪಿಸಿಗೆ ಕೊಟ್ಟ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಮತ್ತು ವಿಧಾನಸಭೆ ವಿರೋಧ ಪಕ್ಷದ ಉಪನಾಯಕ ಅರವಿಂದ ಬೆಲ್ಲದ ನೇತೃತ್ವದ ಬಿಜೆಪಿ ನಾಯಕರ ನಿಯೋಗ ಜಗದಾಂಬಿಕಾ ಪಆಲ್ ಅವರಿಗೆ ಭೇಟಿಯಾಗಿ ಮನವಿ ಸಲ್ಲಿಸಿತು.


> ಸಂಸದ ತೇಜಸ್ವಿ ಸೂರ್ಯ ಮಾತನಾಡಿದ ಅವರು, ಮೋದಿ ಸರ್ಕಾರ ವಕ್ಫ್ ವಿವಾದಕ್ಕೆ ಪೂರ್ಣವಿರಾಮ ಇಡಲು ಪರಿಮಿತ ಅಧಿಕಾರವನ್ನು ತೆಗೆದುಹಾಕಲಿದೆ.

> ಇದರ ವಿಸ್ತೃತ ವರದಿ ಸಿದ್ಧಪಡಿಸಿ ಲೋಕಸಭಾ ಸ್ಪೀಕರ್‌ಗೆ ಸಲ್ಲಿಸಲಾಗುವುದು ಎಂದು ಸಂಸದೀಯ ಜಂಟಿ ಸಮಿತಿಯ ಅಧ್ಯಕ್ಷ ಜಗದಂಬಿಕಾ ಪಾಲ ತಿಳಿಸಿದ್ದಾರೆ.

**ಸಂಸದ ಬಸವರಾಜ ಬೊಮ್ಮಾಯಿ :** ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಹಾವೇರಿ ಜಿಲ್ಲೆಯ ಶಿಗ್ಗಾವಿ ಸವಣೂರು ಸೇರಿದಂತೆ ಎಲ್ಲ ತಾಲೂಕುಗಳಲ್ಲಿ ವಕ್ಫ್ ಬೋರ್ಡ್ ನಿಂದ ರೈತರಿಗೆ, ಆಸ್ಪತ್ರೆ, ಶಾಲೆ, ಕಾಗಿನೆಲೆ ಮಠಕ್ಕೆ ನೊಟೀಸ್ ನೀಡಿದ್ದಾರೆ. ಇದನ್ನು ಜೆಪಿಸಿ ಅಧ್ಯಕ್ಷ ಗಮನಕ್ಕೆ ತಂದಿದ್ದೇವೆ. ಕೇವಲ ಹಾವೇರಿ ಜಿಲ್ಲೆಯಷ್ಟೇ ಅಲ್ಲ ಧಾರವಾಡ, ಬಿಜಾಪುರ, ಕೊಪ್ಪಳ, ಗದಗ, ಹಳೆ ಮೈಸೂರಿನ ಮಂಡ್ಯ, ಮೈಸೂರು ಜಿಲ್ಲೆ ಸೇರಿದಂತೆ ಎಲ್ಲ ಜಿಲ್ಲೆಗಳಲ್ಲಿ ರೈತರಿಗೆ ನೊಟೀಸ್ ಕೊಟ್ಟಿದ್ದಾರೆ ಎಂದು ಹೇಳಿದರು. ವಕ್ಫ್ ಕಾಯಿದೆ ದುರ್ಬಳಕೆ ಮಾಡಿಕೊಂಡಿರುವುದರಿಂದ ಸಮಸ್ಯೆ ಉಲ್ಬಣಗೊಂಡಿದೆ.

ಈ ಬಗ್ಗೆ ಸಮಿತಿ ಗಮನಕ್ಕೆ ತಂದಿದ್ದೇವೆ. ಈ ಸಮಿತಿ ತಳಮಟ್ಟದಲ್ಲಿ ವಾಸ್ತವ ಏನಿದೆ ಎನ್ನುವುದನ್ನು ತನ್ನ ವರದಿಯಲ್ಲಿ ಪ್ರಸ್ತಾಪಿಸಿ ಕಾಯ್ದೆ ತಿದ್ದುಪಡಿಗೆ ಸದನಕ್ಕೆ ಸಲ್ಲಿಸಲಿದೆ ಎಂದು ಹೇಳಿದರು. ರಾಜ್ಯದಲ್ಲಿ ತರಾತುರಿಯಲ್ಲಿ ವಕ್ಫ್ ಅದಾಲತ್ ಮಾಡಿ, ಕೇಂದ್ರದಲ್ಲಿ ವಕ್ಫ್ ಕಾಯ್ದೆ ತಿದ್ದುಪಡಿಯಾಗುವ ಮೊದಲೇ ರೈತರ ಭೂಮಿಯನ್ನು ವಕ್ಫ್ ಆಸ್ತಿಯನ್ನಾಗಿ ಮಾಡಿಕೊಳ್ಳುವ ಹುನ್ನಾರ ನಡೆಸಿದ್ದಾರೆ. ಕೇವಲ ಹಿಂದುಗಳಲ್ಲ, ಮುಸ್ಲಿಂ ಸಮುದಾಯದ ರೈತರ ಜಮೀನಿಗೂ ನೊಟಿಸ್ ಕೊಟ್ಟಿದ್ದಾರೆ. ಇಡೀ ರೈತ ಸಮುದಾಯ ಆಕ್ರೋಶಗೊಂಡಿದೆ ಎಂದು ಹೇಳಿದರು. ರಾಜ್ಯ ಸರ್ಕಾರ ಈ ಚುನಾವಣೆಯಲ್ಲಿ ಮಂತ್ರಿಗಳು, ಶಾಸಕರ ದಂಡೇ ಬಂದು ಕುಳಿತಿದೆ. ಅಧಿಕಾರಿಗಳ ಮೂಲಕ ಅಧಿಕಾರ ದುರುಪಯೋಗ ಮಾಡಿಕೊಳ್ಳುತ್ತಿದೆ. ಅಲ್ಲದೇ ಚುನಾವಣೆಯಲ್ಲಿ ಹಣದ ಹೊಳೆ ಹರಿಸುತ್ತಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕೇಂದ್ರ ಸಚಿವ ವಿ. ಸೋಮಣ್ಣ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಶಾಸಕ ಬಸನಗೌಡ ಪಾಟೀಲ ಯತ್ನಾಳ, ವಿಧಾನ ಪರಿಷತ್ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ವಿಧಾನಸಭೆ ವಿರೋಧ ಪಕ್ಷದ ಉಪ ನಾಯಕ ಅರವಿಂದ ಬೆಲ್ಲದ, ಶಾಸಕ ಮಹೇಶ್ ಟೆಂಗಿನಕಾಯಿ, ಸಂಸದ ರಮೇಶ ಜಿಗಜಿಣಗಿ, ಶಾಸಕ ರಮೇಶ ಜಾರಕಿಹೊಳಿ, ಅಣ್ಣಾಸಾಹೇಬ ಜೊಲ್ಲೆ, ಶಶಿಕಲಾ ಜೊಲ್ಲೆ, ಮಾಜಿ ಸಚಿವರಾದ ಎಸ್.ಕೆ. ಬೆಳ್ಳುಬ್ಬಿ, ಅಪ್ಪಾಸಾಹೇಬ ಪಟ್ಟಣಶೆಟ್ಟಿ, ಆರ್.ಎಸ್. ಪಾಟೀಲ್ ಕುಚಬಾಳ, ವಿಜುಗೌಡ ಪಾಟೀಲ, ದಯಾಸಾಗರ ಪಾಟೀಲ, ಉಮೇಶ ಕೋಳಕೂರ, ಕಾಸುಗೌಡ ಬಿರಾದಾರ ಮಾಜಿ ಸಂಸದ ಪ್ರತಾಪ್‌ಸಿಂಹ ಸೇರಿದಂತೆ ಅನೇಕ ನಾಯಕರು ಹಾಜರಿದ್ದರು.



# ರೈತರನ್ನು ಒಕ್ಕಲೆಬ್ಬಿಸುವುದಿಲ್ಲ: ಡಿಸಿಎಂ ಡಿಕೆಶಿ ಭರವಸೆ



**ಹುಬ್ಬಳ್ಳಿ, ನ.07:** ವಕ್ಫ್ ವಿವಾದ ಬಿಜೆಪಿ ಸೃಷ್ಟಿ. ನಮ್ಮ ಸರ್ಕಾರ ರೈತರನ್ನು ರಕ್ಷಿಸಲು ಬದ್ಧವಾಗಿದ್ದು, ಯಾರನ್ನೂ ಒಕ್ಕಲೆಬ್ಬಿಸುವುದಿಲ್ಲ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು. ಹುಬ್ಬಳ್ಳಿಯಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಗುರುವಾರ ಪ್ರತಿಕ್ರಿಯೆ ನೀಡಿದರು. ವಕ್ಫ್ ತಿದ್ದುಪಡಿ ಮಸೂದೆ ಸಂಬಂಧ ಜಂಟಿ ಸಂಸದೀಯ ಸಮಿತಿ (ಜೆಪಿಸಿ) ಅಧ್ಯಕ್ಷರ ಭೇಟಿ ಬಗ್ಗೆ ಕೇಳಿದಾಗ, "ಚುನಾವಣೆ ಹಿನ್ನಲೆಯಲ್ಲಿ ಬಿಜೆಪಿ ಈ ವಿವಾದ ಸೃಷ್ಟಿಸಿದೆ. ರಾಜ್ಯದ ಆಸ್ತಿ ರಾಜ್ಯಕ್ಕೆ ಸಂಬಂಧಿಸಿದ ವಿಚಾರ. ವಕ್ಫ್ ಆಸ್ತಿ ವಿಚಾರವಾಗಿ ಧಾರವಾಡ ಸೇರಿದಂತೆ ಬೇರೆ ಜಿಲ್ಲೆಗಳಲ್ಲಿ 2019ರಿಂದ ಮೊದಲು ನೋಟೀಸ್ ಕೊಟ್ಟಿದ್ದು ಬಿಜೆಪಿ. ಈಗ ನಮ್ಮ ಮೇಲೆ ಆರೋಪ ಮಾಡುತ್ತಿದ್ದಾರೆ. ನಾವು ಆಗಿರುವ ತಪ್ಪುಗಳನ್ನು ಸರಿಪಡಿಸಿ ರೈತರನ್ನು ರಕ್ಷಣೆ ಮಾಡುತ್ತೇವೆ. ಈ ವಿಚಾರವಾಗಿ ನಮ್ಮ ಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರು ಸ್ಪಷ್ಟನೆ ನೀಡಿದ್ದಾರೆ.

ಜೆಪಿಸಿ ರಾಜ್ಯದ ವಿಚಾರಕ್ಕೆ ಭೇಟಿ ನೀಡುವ ಅಧಿಕಾರವಿಲ್ಲ. ಕೇವಲ ರಾಜಕೀಯ ಉದ್ದೇಶದಿಂದ ಭೇಟಿ ನೀಡುತ್ತಿದ್ದಾರೆ. ಈ ಸಮಿತಿಗೆ ಅಧಿಕೃತ ಮಾನ್ಯತೆ ಇಲ್ಲ ಎಂದು ತಿಳಿಸಿದರು. ಈ ಕಮಿಟಿ ರಾಜ್ಯಕ್ಕೆ ಬರಬೇಕಾದರೆ ರಾಜ್ಯ ಸರ್ಕಾರ ಹಾಗೂ ಅಧಿಕಾರಿಗಳಿಗೆ ತಿಳಿಸಬೇಕು ಎಂದಿದ್ದಾರೆ. ಅದರಲ್ಲಿ ಇರುವ ಸದಸ್ಯರೆಲ್ಲ ಬರಬೇಕು. ಆದರೆ, ಒಬ್ಬರು ಅಧ್ಯಕ್ಷರು ಬಂದಿದ್ದಾರೆ. ಅವರ ಪಕ್ಷದ ಕೆಲಸಕ್ಕೆ ಬಂದಿದ್ದಾರೆ. ಇನ್ನೊಬ್ಬ ಎಂಪಿಯನ್ನು (ತೇಜಸ್ವಿ ಸೂರ್ಯ) ಕರೆದುಕೊಂಡು ಬಂದಿದ್ದಾರೆ ಎಂದು ವ್ಯಂಗ್ಯ ಮಾಡಿದ್ದಾರೆ.

ಜೆಪಿಸಿಯಲ್ಲಿ ಬಸವರಾಜ ಬೊಮ್ಮಾಯಿ ಅವರು ಏನಾದರೂ ಮೆಂಬರ್ ಆಗಿದ್ದಾರಾ, ಸೋಮಣ್ಣ ಮೆಂಬರ್ ಆಗಿದ್ದಾರಾ ಎಂದು ಪ್ರಶ್ನೆ ಮಾಡಿರುವ ಅವರು, ವಿ.ಸೋಮಣ್ಣ ಮಂತ್ರಿ. ಮಂತ್ರಿಯಾದವರು ಜೆಪಿಸಿಯಲ್ಲಿ ಇರೋಕೆ ಆಗಲ್ಲ. ಅವರು ಬಂದು ಜನರ ಹತ್ತಿರ ಅರ್ಜಿ ಇಸ್ಕೊಂಡಿದ್ದಾರೆ. ಜನರ ಮುಂದೆ ಪ್ರಚಾರ ಮಾಡ್ಬೇಕು ಅಂತ ಬಂದಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ಧಾರವಾಡದ ಜಿಲ್ಲಾಧಿಕಾರಿಗಳಿಗೆ ಕೇಳಿ, ಬಸವರಾಜ ಬೊಮ್ಮಾಯಿ ಸರ್ಕಾರ ಇದ್ದಾಗಲೇ ನೋಟಿಸ್ ಕೊಟ್ಟು ದಾಖಲೆ ತಿದ್ದಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈಗಾಗಲೇ ದಾಖಲೆ ಬಿಡುಗಡೆ ಮಾಡ್ತೇವೆ ಅಂತ ಹೇಳಿದ್ದಾರೆ. ಈ ಬಗ್ಗೆ ಕಂದಾಯ ಸಚಿವ ಕೃಷ್ಣಬೈರೇಗೌಡ ಅವರು ದಾಖಲೆ ಬಿಡುಗಡೆ ಮಾಡಲಿದ್ದಾರೆ ಎಂದು ಹೇಳಿದರು.



**ಜಂಟಿ ಸದನ ಸಮಿತಿ ಅಧ್ಯಕ್ಷರಾದ ಜಗದಾಂಬಿಕ ಪಾಲ್ ರಾಜ್ಯಕ್ಕೆ ನೀಡಿರುವ ಭೇಟಿ ರಾಜಕೀಯ ದುರುದ್ದೇಶದಿಂದ ಕೂಡಿದೆ ಎಂದು ಗೃಹ ಸಚಿವ ಜಿ. ಪರಮೇಶ್ವರ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಗದಾಂಬಿಕ ಪಾಲ್, ಜೆಪಿಸಿಯ ಇತರ ಸದಸ್ಯರೊಂದಿಗೆ ಚರ್ಚಿಸದೆ ಆಗಮಿಸಿದ್ದಾರೆ. ಸದಸ್ಯರೊಬ್ಬರ ವಿರೋಧದ ನಡುವೆ ಈ ಭೇಟಿ ಸಮಂಜಸವಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.**



ಸಂಡೂರಿನ ಉಪಚುನಾವಣೆಯ ಕಾಂಗ್ರೆಸ್ ಅಭ್ಯರ್ಥಿ ಅನ್ನಪೂರ್ಣ ಪರ ಮುಖ್ಯಮಂತ್ರಿ ಸಿದ್ದರಾಮಯ್ಯ ಗುರುವಾರ ಪ್ರಚಾರ ನಡೆಸಿದರು.

# ಪಿಎಮ್‌ಎಲ್‌ಎ ಅಧಿಕಾರಿಗಳ ವಿಚಾರಣೆಗೆ ಪೂರ್ವಾನುಮತಿ ಅಗತ್ಯ: ಸುಪ್ರೀಂ



**ನವದೆಹಲಿ, ನ. 07:** ಕ್ರಿಮಿನಲ್ ಪ್ರಕ್ರಿಯಾ ಸಂಹಿತೆಯ ಸೆಕ್ಷನ್ 197(1) ಅಡಿಯಲ್ಲಿ ಸರ್ಕಾರಿ ಅಧಿಕಾರಿಗಳನ್ನು ವಿಚಾರಣೆಗೆ ಒಳಪಡಿಸಲು ಸರ್ಕಾರದ ಪೂರ್ವಾನುಮತಿ ಅಗತ್ಯವಾಗಿದ್ದು, ಇದೆ ನಿಯಮ ಮನಿ ಲಾಂಡರಿಂಗ್ ತಡೆ ಕಾಯ್ದೆ (ಕಒಐಂ)ಯ ಮನಿ ಲಾಂಡರಿಂಗ್ ಪ್ರಕರಣಗಳಿಗೂ ಅನ್ವಯಿಸುತ್ತದೆ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಮಾಜಿ ಐಎಎಸ್ ಅಧಿಕಾರಿಗಳಾದ ಬಿಭು ಪ್ರಸಾದ್ ಆಚಾರ್ಯ ಮತ್ತು ಆದಿತ್ಯನಾಥ್ ದಾಸ್ ವಿರುದ್ಧ ದಾಖಲಿಸಲಾದ ಹಣ ಅಕ್ರಮ ವರ್ಗಾವಣೆ ಪ್ರಕರಣವನ್ನು ರದ್ದುಗೊಳಿಸಿದ ತೆಲಂಗಾಣ ಹೈಕೋರ್ಟ್ನ ತೀರ್ಪನ್ನು ನ್ಯಾಯಮೂರ್ತಿ ಅಭಯ್ ಓಕಾ ಮತ್ತು ನ್ಯಾಯಮೂರ್ತಿ ಅಗಸ್ಟಿನ್ ಜಾರ್ಜ್ ಮಸಿಹ್ ಅವರ ಪೀಠವು ಎತ್ತಿ ಹಿಡಿದಿದೆ. ಇಬ್ಬರು ಮಾಜಿ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಲು ಪೂರ್ವಾನುಮತಿ ಪಡೆದಿಲ್ಲ ಎಂದು ಪೀಠ ಹೇಳಿದೆ. ಆಂಧ್ರಪ್ರದೇಶದ ಮಾಜಿ ಮುಖ್ಯಮಂತ್ರಿ ಜಗನ್ ಮೋಹನ್ ರೆಡ್ಡಿ ಜೊತೆಗೆ ನಡೆಸಿದ ಪಿತೂರಿಯಲ್ಲಿ ಆಚಾರ್ಯ ಅವರು ಇಂದೂ ಟೆಕ್ಜೋನ್ ಕಂಪನಿಗೆ ವಿಶೇಷ ಆರ್ಥಿಕ ವಲಯ ಯೋಜನೆಗಾಗಿ 250 ಎಕರೆ ಭೂಮಿಯನ್ನು ಕಾನೂನುಬಾಹಿರವಾಗಿ ಮಂಜೂರು ಮಾಡಿದ್ದಾರೆ ಎಂದು ಜಾರಿ ನಿರ್ದೇಶನಾಲಯ ಆರೋಪಿಸಿತ್ತು. ಹಣ ಅಕ್ರಮ ವರ್ಗಾವಣೆಯಲ್ಲಿ ಪರೋಕ್ಷವಾಗಿ ಭಾಗಿಯಾಗಿರುವ ಆರೋಪ ಕೂಡಾ ಆಚಾರ್ಯ ಅವರ ಮೇಲಿದೆ. ಪಿಎಮ್‌ಎಲ್‌ಎ ಜೊತೆಗೆ ಆಗ ತೆಲಂಗಾಣದ ನೀರಾವರಿ ಮತ್ತು ಸಿಎಡಿ ಇಲಾಖೆಯ ಪ್ರಧಾನ ಕಾರ್ಯದರ್ಶಿಯಾಗಿದ್ದ ದಾಸ್ ಅವರು ಕಾಗ್ನಾ ನದಿಯಿಂದ ಇಂಡಿಯಾ ಸಿಮೆಂಟ್ ಸಂಸ್ಥೆಗೆ ಹೆಚ್ಚುವರಿ 10 ಲಕ್ಷ ಲೀಟರ್ ನೀರನ್ನು ಅಕ್ರಮವಾಗಿ ಹಂಚಿಕೆ ಮಾಡಲು ಜಗನ್ಮೋಹನ್ ರೆಡ್ಡಿ ಅವರೊಂದಿಗೆ ಸಂಚು ರೂಪಿಸಿದ್ದರು ಎಂದು ಜಾರಿ ನಿರ್ದೇಶನಾಲಯ ಆರೋಪಿಸಿದೆ. 2019ರ ಜನವರಿ 21 ರಂದು ಪ್ರಾಸಿಕ್ಯೂಷನ್‌ಗೆ ಪೂರ್ವಾನುಮತಿ ಇಲ್ಲದಿರುವುದನ್ನು ಸೂಚಿಸಿದ್ದ ತೆಲಂಗಾಣ ಹೈಕೋರ್ಟ್ ಮೊಕದ್ದಮೆಯನ್ನು ರದ್ದುಗೊಳಿಸಲು ಅನುಮತಿ ನೀಡಿತ್ತು. ಆದರೆ ಈ ತೀರ್ಪಿನ ವಿರುದ್ಧ ಜಾರಿ ನಿರ್ದೇಶನಾಲಯವು ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿತ್ತು. ಮನಿ ಲಾಂಡರಿಂಗ್ ತಡೆ ಕಾಯಿದೆಯ 71ನೇ ಸೆಕ್ಷನ್, ಕ್ರಿಮಿನಲ್ ಪ್ರೊಸೀಜರ್ ಕೋಡ್ ಸೇರಿದಂತೆ ಇತರ ಕಾನೂನುಗಳಿಗಿಂತ ಆದ್ಯತೆ ಇವೆ ಎಂದು ಅದು ವಾದಿಸಿದೆ. ಆದರೆ ನ್ಯಾಯಾಲಯವು ಜಾರಿ ನಿರ್ದೇಶನಾಲಯದ ಈ ವಾದವನ್ನು ನಿರಾಕರಿಸಿದೆ.

## ಮೊದಲನೇ ಪುಟದಿಂದ : ಸಿಎಂ ಸಿದ್ದರಾಮಯ್ಯ ವಿರುದ್ಧ ಕೇಂದ್ರದಿಂದ ರಾಜಕೀಯ ಷಡ್ಯಂತ್ರ ಆರೋಪ

ರಾಜ್ಯಕ್ಕೆ ತೆರಿಗೆ ಅನ್ಯಾಯವಾಗುತ್ತಿದೆ, ದೇಶದಲ್ಲಿ ಅವೈಜ್ಞಾನಿಕ ರೀತಿಯಲ್ಲಿ ತೆರಿಗೆ ಹೇರಲಾಗುತ್ತಿದೆ. ಭಾರತದಂತ ದುಬಾರಿ ತೆರಿಗೆ ವ್ಯವಸ್ಥೆ ಎಲ್ಲೂ ಇಲ್ಲ, ಅದರಲ್ಲೂ ಹೆಚ್ಚು ತೆರಿಗೆ ಕಟ್ಟುವ ರಾಜ್ಯಕ್ಕೆ ಇಲ್ಲಿ ಅನ್ಯಾಯ ಮಾಡಲಾಗುತ್ತಿದೆ. ಚುನಾಯಿತ ಸರ್ಕಾರಗಳ ಅನುಮೋದಿಸುವ ಕಾನೂನುಗಳನ್ನು ರಾಜ್ಯಪಾಲರು ತಡೆ ಹಿಡಿಯುವ ಕೆಲಸ ಮಾಡುತ್ತಿದ್ದಾರೆ. ರಾಜ್ಯಪಾಲರನ್ನು ದುರ್ಬಳಕೆಯನ್ನು ಮಾಡಿಕೊಳ್ಳಲಾಗುತ್ತಿದೆ ಸಂವಿಧಾನದ ಮುಖ್ಯಸ್ಥರಾಗುವ ಬದಲು ರಾಜ್ಯಪಾಲರು ಸರ್ಕಾರ ಅಸ್ಥಿರ ಮಾಡುವ ಮುಖ್ಯಸ್ಥರಾಗಿದ್ದಾರೆ.

ಬಿಜೆಪಿ ನಾಯಕರು ಜನರಿಗೆ ಸಹಾಯ ಮಾಡುವ ನಾಯಕರನ್ನು ಮುಗಿಸುವ ಕೆಲಸ ಮಾಡುತ್ತಿದ್ದಾರೆ ಇದಕ್ಕೆ ಮೊದಲ ಬಲಿ ಸಿದ್ದರಾಮಯ್ಯ ಅವರು. ವಿರೋಧ ಪಕ್ಷದ ನಾಯಕರನ್ನು ವ್ಯವಸ್ಥಿತವಾಗಿ ಮುಗಿಸಲಾಗುತ್ತಿದೆ. ನಿಜವಾದ ಸಮಾಜವಾದ ರಾಜಕೀಯ ಸಿದ್ದರಾಮಯ್ಯ ಅವರು ಮಾಡುತ್ತಿದ್ದಾರೆ, ತುಳಿತಕ್ಕೊಳಾದ ಜನರನ್ನು ಮೇಲೆತ್ತುವ ಪ್ರಯತ್ನ ಮಾಡುತ್ತಿದ್ದಾರೆ ಆದರೆ ಬಿಜೆಪಿ ಇದನ್ನು ಟೀಕಿಸುತ್ತಿದೆ, ಇಲ್ಲದ ಆರೋಪ ಮಾಡುತ್ತಿದೆ, ಅವರನ್ನು ರಾಜಕೀಯವಾಗಿ ಹಣಿಯಲು ಷಡ್ಯಂತ್ರ ಮಾಡುತ್ತಿದೆ ಎಂದು ಆರೋಪಿಸಿದರು.

ಮೈಸೂರು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ. ಬಿಜೆ ವಿಜಯ್‌ಕುಮಾರ್ ಮಾತನಾಡಿ, ದೇಶದ ಆತಂರಿಕ ಶಾಂತಿಗಾಗಿ ದೆಹಲಿಯಲ್ಲಿ ಸಭೆ ಮಾಡುವ ಅನಿವಾರ್ಯತೆ ಬಂದಿದೆ, ಬುದ್ದಿ ಹೇಳುವ ವ್ಯವಸ್ಥೆಯ ವಿರುದ್ಧವೇ ನಾವು ಮಾತನಾಡಬೇಕಾದ ಅನಿವಾರ್ಯತೆ ಇದೆ. ಐಟಿ, ಇಡಿ ಸಿಬಿಐ ಅನ್ನು 65 ವರ್ಷ ಕಾಂಗ್ರೆಸ್ ನಡೆಸಿಕೊಂಡ ರೀತಿ ಬಿಜೆಪಿ ನಡೆಸಿಕೊಂಡ ರೀತಿ ಭಿನ್ನವಾಗಿದೆ ಎಂದರು.

ಕನ್ನಡ ಪ್ರಾಧಿಕಾರದ ಸದಸ್ಯ ಟಿ ಗುರುರಾಜ್ ಮಾತನಾಡಿ, ಕರ್ನಾಟಕ, ಕನ್ನಡಿಗರ ವಿಷಮ ಪರಿಸ್ಥಿತಿಯಲ್ಲಿ ನರಳುತ್ತಿದ್ದಾರೆ, ತಾರತಮ್ಯ ಮಾಡದೇ ಆಡಳಿತ ಮಾಡಬೇಕಿದ್ದ ಕೇಂದ್ರ ಸರ್ಕಾರ ಉತ್ತರ ಭಾರತ, ದಕ್ಷಿಣ ಭಾರತದ ಎಂದು ಮಲತಾಯಿ ಧೋರಣೆ ಮಾಡುತ್ತಿದೆ. ಕರ್ನಾಟಕಕ್ಕೆ ನ್ಯಾಯಬದ್ಧವಾಗಿ ಬರಬೇಕಿರುವ ತೆರಿಗೆ ಹಣ ನೀಡುತ್ತಿಲ್ಲ. ನರೇಂದ್ರ ಮೋದಿ ಅವರು ಸಾಮ್ರಾಟನ ರೀತಿಯಲ್ಲಿ ವರ್ತಿಸುತ್ತಿದ್ದಾರೆ. ಅವರು ಒಕ್ಕೂಟ ವ್ಯವಸ್ಥೆ ಭಾಗ ಎನ್ನುವುದು ಮರೆತಿದ್ದಾರೆ. ನಮ್ಮ ತೆರಿಗೆ ಪಾಲು ಕೊಡಿ ಎಂದು ಕೇಂದ್ರ ಸರ್ಕಾರದ ವಿರುದ್ಧ ಸಿದ್ದರಾಮಯ್ಯ ಪ್ರತಿಭಟನೆ ನಡೆಸಿದರು ಎನ್ನುವ ಕಾರಣಕ್ಕೆ ಅವರ ವಿರುದ್ಧ ಕೇಂದ್ರೀಯ ತನಿಖಾ ಸಂಸ್ಥೆಗಳ ಬಳಕೆ ಮಾಡುತ್ತಿದೆ ಇದನ್ನು ನಾವು ಖಂಡಿಸುತ್ತೇವೆ ಎಂದರು.

ವಿಧಾನ ಪರಿಷತ್ ಸದಸ್ಯ ಡಾ.ಡಿ ತಿಮ್ಮಯ್ಯ ಮಾತನಾಡಿ, ಸಿಎಂ ಸಿದ್ದರಾಮಯ್ಯ ಅವರು ಮೊದಲ ಅವಧಿಯಲ್ಲಿ ಭಾಗ್ಯಗಳನ್ನು ನೀಡಿದರು, ಎರಡನೇ ಅವಧಿಯಲ್ಲಿ ಗ್ಯಾರಂಟಿ ಯೋಜನೆಗಳನ್ನು ಆರಂಭಿಸಿದ್ದಾರೆ. ಜನಪರ ಕಾರ್ಯಕ್ರಮ ನೀಡುತ್ತಿರುವ ಹಿನ್ನಲೆ ಅವರ ಚಾರಿತ್ರ್ಯದ ಮೇಲೆ ಕಪ್ಪು ಚುಕ್ಕೆ ಇಡುವ ಹುನ್ನಾರ ನಡೆಯುತ್ತಿದೆ. ಮೈಸೂರು ಮೂಡಾ ಪ್ರಕರಣ ಸೃಷ್ಠಿ ಮಾಡಿ ಇಡಿ ಸಿಬಿಐಯನ್ನು ದುರ್ಬಳಕೆ ಬಳಕೆ ಮಾಡುತ್ತಿದೆ. ಪ್ರಕರಣದಲ್ಲಿ ಸಿದ್ಧರಾಮಯ್ಯ ಅವರ ಕೈವಾಡ ನೇರವಾಗಿ ಎಲ್ಲೂ ಇಲ್ಲ ಅದಾಗ್ಯೂ ಕಿರುಕುಳ ಕೊಡುವ ಪ್ರಯತ್ನ ಮಾಡಲಾಗುತ್ತಿದೆ. ಸರ್ಕಾರ ದಿವಾಳಿಯಾಗಿದೆ ಎಂದು ಆರೋಪಿಸಲಾಗುತ್ತಿದೆ ಕೇಂದ್ರದ ಜಿಡಿಪಿ 8% ರಷ್ಟಿದ್ದರೆ ರಾಜ್ಯದ ಜಿಡಿಪಿ 10% ರಷ್ಟಿದೆ. ಇನ್ನು ಮುಂದಾದರು ಇದನ್ನು ಸರಿಪಡಿಸಕೊಂಡು ತಾರಮತ್ಯ ನಿಲ್ಲಿಸಬೇಕು ಎಂದು ಆಗ್ರಹಿಸಿದರು.

ಹಿರಿಯ ಸಾಹಿತಿ ಕಾಳೇಗೌಡ ನಾಗವಾರ ಮಾತನಾಡಿ, ಕೇಂದ್ರ ಸರ್ಕಾರ ಎಲ್ಲರನ್ನು ಸಮಾನವಾಗಿ ಕಾಣಬೇಕು, 12ನೇ ಶತಮಾನದಲ್ಲಿ ಬಸವಣ್ಣನವರು ಸಮಾನತೆ ಸಾರಿದರು. ವೈಚರಿಕಾ ಸಾಹಿತ್ಯದಲ್ಲಿ ಈ ಬಗ್ಗೆ ಸಾಕಷ್ಟು ಉಲ್ಲೇಖಗಳಿವೆ. ಜನಪ್ರತಿನಿಧಿಗಳು ಶ್ರಮ ಜೀವಿಗಳ ಋಣದಲ್ಲಿ ಇದ್ದಾರೆ ಅದನ್ನು ಹೇಳಲು ಇಲ್ಲಿಗೆ ಬಂದಿದ್ದೇವೆ. ತಪ್ಪು ತಿದ್ದಿಕೊಳ್ಳಬೇಕು, ಜನರಿಗೆ ಹಿಟ್ಲರ್ ನೆನಪಿಲ್ಲ ಆದರೆ ಸರಳೆಯ ಗೌತಮ ಬುದ್ಧನನ್ನು ಇನ್ನು ನೆನಪಿಟ್ಟುಕೊಂಡಿದ್ದಾರೆ.

ಕನ್ನಡ ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷ ಬಂಜಗೇರೆ ಜಯ ಪ್ರಕಾಶ್ ಮಾತನಾಡಿ, ರಾಜ್ಯಕ್ಕೆ ತೆರಿಗೆ ವಂಚನೆ ಅನ್ಯಾಯದ ಕ್ರಮ, ಸರಿಯಾದ ತೆರಿಗೆ ನೀಡುವುದು ಅವರ ಕರ್ತವ್ಯ ಅದು ನಮ್ಮ ಹಕ್ಕು, ಅದನ್ನು ಮೋದಿ ಸರಕಾರ ಗೌರವಿಸಬೇಕು. ಕೇಂದ್ರ ಕುತಂತ್ರದ ರಾಜಕೀಯ ಮಾಡುತ್ತಿದೆ. ಇದನ್ನು ವಿರೋಧಿಸಲು ನಾವು ಸಭೆ ಸೇರಿದ್ದೇವೆ. ಹಲವು ರಾಜ್ಯ ಸರ್ಕಾರಗಳನ್ನು ಅಸ್ಥಿರ ಮಾಡುವ ಸಂದರ್ಭದಲ್ಲೇ ಈ ಪ್ರತಿಭಟನೆ ಮಾಡಬೇಕಿತ್ತು, ಈಗ ಇದು ಕರ್ನಾಟಕದ ಬುಡಕ್ಕೆ ಬಂದಿದೆ. ಬಿಜೆಪಿಗೆ ಒಳ್ಳೆಯ ಮನಸ್ಥಿತಿ ಇಲ್ಲ, ತನಿಖಾ ಸಂಸ್ಥೆ ದುರ್ಬಳಕೆ ಮಾಡಿಕೊಂಡು ಕುತಂತ್ರ ಮಾಡುತ್ತಿದೆ. ಅಹಿಂದಾ ನಾಯಕನ ವಿರುದ್ಧ ಷಡ್ಯಂತ್ರ ರೂಪಿಸಿರುವ ಕೇಂದ್ರ ಸರ್ಕಾರ ಮೂಡಾ ಮುಂದಿಟ್ಟುಕೊಂಡು ರಾಜ್ಯ ಸರ್ಕಾರ ಮತ್ತು ಸಿದ್ದರಾಮಯ್ಯ ನಾಯಕತ್ವ ಬಗ್ಗುಬಡೆಯಲು ಯತ್ನ ನಡೆಯುತ್ತಿದೆ ಇದು ರಾಜಕೀಯ ಸಂಸ್ಕೃತಿಗೆ ಶೋಭೆ ತರುವುದಿಲ್ಲ. ಆಪರೇಷನ್ ಮೂಲಕ ಬಿಜೆಪಿ ಆಡಳಿತಕ್ಕೆ ಬಂದಿದೆ. ಯಾವ ರಾಜ್ಯದಲ್ಲೂ ಬಿಜೆಪಿ ಬಹುಮತ ಪಡೆಯಲಿಲ್ಲ, ರಾಜಕೀಯ ಅಡ್ಡ ತಂತ್ರಗಳನ್ನು ನಾವು ಖಂಡಿಸಬೇಕು, ಸರ್ಕಾರ ಇದಕ್ಕೆ ಬಗ್ಗದಿದ್ದರೆ ನಾವು ಹೋರಾಟಕ್ಕೆ ಇಳಿಬೇಕಾಗುತ್ತದೆ ಎಂದು ಎಚ್ಚರಿಸಿದರು.

ಹಿರಿಯ ಕನ್ನಡ ಪರ ಹೋರಾಟಗಾರ ಜಾಣಗೆರೆ ವೆಂಕಟರಾಮಯ್ಯ ಮಾತನಾಡಿ, ದಕ್ಷಿಣ ಭಾರತದ ರಾಜ್ಯಗಳನ್ನು ಶೋಷಣೆ ಮಾಡಿದರೆ ಒಟ್ಟಾಗಿ ಹೋರಾಟ ಮಾಡಬೇಕಾಗುತ್ತದೆ, ಕೇಂದ್ರ ಸರ್ಕಾರ ಹೇಳುವುದೊಂದು ಮಾಡುವುದೊಂದು ಮಾಡುತ್ತಿದೆ, ದಕ್ಷಿಣ ಭಾರತದಲ್ಲಿ ಹಿಂದಿ ಹೇರಿಕೆಯಾಗುತ್ತಿದೆ ಯಾವುದನ್ನು ಇಷ್ಟಕ್ಕೆ ನಾವು ಬಿಡುವುದಿಲ್ಲ ಎಂದರು. ಮಹಿಳಾ ಹೋರಾಟಗಾರ್ತಿ ಲೀಲಾ ಸಂಪಿಗೆ ಮಾತನಾಡಿ, ಭಾರತವನ್ನು ತಾಯಿಗೆ, ಕರ್ನಾಟಕವನ್ನು ಮಗಳಿಗೆ ಹೋಲಿಸಿದೆ ಇಂತಹ ದೇಶದಲ್ಲಿ ಮಹಿಳೆಯರನ್ನು ಬೆತ್ತಲಾಗಿಸಿ ಹಲ್ಲೆ ಮಾಡಲಾಗುತ್ತಿದೆ. ರಾಜ್ಯದಲ್ಲಿ ಗ್ಯಾರಂಟಿ ವಿರೋಧ ಮಾಡುವ ಬಿಜೆಪಿ ಬೇರೆ ರಾಜ್ಯಗಳಲ್ಲಿ ಇದೇ ಮಾದರಿಯ ಭರವಸೆ ನೀಡುತ್ತದೆ. ಕ್ಷುಲಕ ಕಾರಣಗಳ ಮೂಲಕ ಸರ್ಕಾರದ ಅಸ್ಥಿರದ ಪ್ರಯತ್ನ ಮಾಡುತ್ತಿದೆ. ಮಹಿಳಾ ವಿರೋಧಿ ಧೋರಣೆಯನ್ನು ಖಂಡಿಸಬೇಕಿದೆ, ಮನಸ್ಮೃತಿ ಸರ್ಕಾರಕ್ಕೆ ಎಚ್ಚರಿಕೆ ನೀಡಬೇಕಿದೆ ಎಂದರು. ಮಾಜಿ ಸಚಿವ ಎಂ ಶಿವಣ್ಣ ಮಾತನಾಡಿ, ದೇಶದಲ್ಲಿ ಬಿಜೆಪಿ ಸರ್ಕಾರಗಳಿರಬೇಕು ಎನ್ನುವುದು ಅವರ ಅಜೆಂಡಾ ಅದಕ್ಕಾಗಿ ಎಲ್ಲವನ್ನು ಮಾಡ್ತಾರೆ.

ಪ್ರತಿಭಟನಾ ಸಭೆಯಲ್ಲಿ ಪ್ರಗತಿಪರ ರೈತ ಆರ್ ಸ್ವಾಮಿ ಆನಂದ, ರೆಸ್ಪಾನ್ಸಿಬಲ್ ಸಿಟಿಝುನ್ಸ್ ವಾಯ್ಸ್ ಫೋರಂ ಅಧ್ಯಕ್ಷ ಎಫ್ ಎಂ ಕಲೀಂ ಮತ್ತಿತರು ಭಾಗಿಯಾಗಿದ್ದರು. ರಾಜ್ಯ ಹಿಂದುಳಿದ ವರ್ಗಗಳ ಜಾಗೃತ ವೇದಿಕೆಯ ಶಿವರಾಂ ಕಾರ್ಯಕ್ರಮ ಆಯೋಜಿಸಿದ್ದರು.

# ಭಾರತದಲ್ಲಿ ಫ್ರೆಂಚ್ ಶಿಕ್ಷಕರಿಗೆ ನಾಳೆವರೆಗೆ ತರಬೇತಿ ಆಯೋಜನೆ: ಬೆಂ.ವಿ.ವಿ. ಕುಲಪತಿ



**ಬೆಂಗಳೂರು, ನ. 07 :** ವಿಶ್ವವಿದ್ಯಾನಿಲಯದ ಜಾಗತಿಕ ಭಾಷೆಯ ಕೇಂದ್ರ ಭಾರತದಲ್ಲಿನ ಪ್ರಾಂಚೈಸ್ ಇನ್ಸಿಟ್ಯೂಟ್, ಭಾರತದಲ್ಲಿನ ಫ್ರಾನ್ಸ್ ರಾಯಭಾರಿ ಕಚೇರಿ ಮತ್ತು ಅಲಯನ್ಸ್ ಫ್ರಾಂಕಾಯಿಸ್, ಕಾವಿಲಾಮ್, ಪ್ರಾನ್ಸ್ ಸಹಯೋಗದೊಂದಿಗೆ ಭಾರತದಲ್ಲಿ ಫ್ರೆಂಚ್ ಶಿಕ್ಷಕರಿಗೆ ನವೆಂಬರ್ 6 ರಿಂದ 8 ರವರೆಗೂ ಮೂರು ದಿನಗಳ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಿತ್ತು. ಸಿನೆಮಾ ಎಟ್ ಎಫ್‌ಎಲ್‌ಇ (ಸಿನೆಮಾ ಮತ್ತು ವಿದೇಶಿ ಭಾಷೆಯಾಗಿ ಪ್ರೆಂಚ್) ಎಂಬ ಕಾರ್ಯಕ್ರಮದಲ್ಲಿ ಭಾರತದಾದ್ಯಂತ ಪ್ರೆಂಚ್ ಶಿಕ್ಷಕರು ಭಾಗವಹಿಸಿದ್ದರು. ಈ ಕಮ್ಮಟದಲ್ಲಿ ಪ್ರೆಂಚ್ ಅನ್ನು ವಿದೇಶಿ ಭಾಷೆಯಾಗಿ ತರಗತಿಗಳಲ್ಲಿ ಕಲಿಸಲು ಸಿನಿಮಾವನ್ನು ಶಿಕ್ಷಣದ ಸಾಧನವಾಗಿ ಬಳಸುವ ಬಗ್ಗೆ ಚರ್ಚಿಸಿಲಾಯಿತು.

ಫ್ರಾನ್ಸಿನ ಕಾವಿಲಾಮ್ ಅಲಯನ್ಸ್ ಪ್ರಾಂಚೈಸ್‌ನ ಪ್ರೆಂಚ್ ಭಾಷೆಯಲ್ಲಿ ಪರಿಣಿತರಾದ ಫ್ಲೋರಿನ್ ಟೂಲೌಸ್ ಅವರು ಸಂಪನ್ಮೂಲ ವ್ಯಕ್ತಿಯಾಗಿ ತರಬೇತಿ ನೀಡಿದ್ದರು. ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಗೌರವಾನ್ವಿತ ಉಪಕುಲಪತಿ ಪ್ರೊ, ಲಿಂಗರಾಜ ಗಾಂಧಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಪ್ರೊ, ಗಾಂಧಿ ಯವರು ಭಾಷೆ ಸಂವಹನದ ಮುಖ್ಯ ಸಾಧನ, ವಿವಿಧ ಸಂಸ್ಕೃತಿಗಳನ್ನು ಅರ್ಥಮಾಡಿಕೊಳ್ಳಲು ಭಾಷೆ ಅಗತ್ಯ ಎಂದು ಹೇಳಿದರು. ನಿರಂತರವಾಗಿ ಬದಲಾಗುತ್ತಿರುವ ಜಾಗತೀಕರಣದ ಜಗತ್ತಿನಲ್ಲಿ ಕಲಿಕೆ, ಪುನಃ ಕಲಿಕೆ ಮತ್ತು ಕಳಿಯಿಳಿಕೆ ಅಗತ್ಯವೆಂದು ಹೇಳಿದರು.

ಅಟ್ಯಾಚೆ ಪಾರ್ ಕೋ ಅಪರೇಷನ್ ಇನ್ ಎಜುಕೇಷನ್‌ನ ಮಿಸ್, ಸ್ಟೆಪಿನಿ ಆರ್ಫಿಲ, ಭಾರತದ ಇನ್ಸಿಟ್ಯೂಟ್ ಪ್ರಾಂಚೈಸ್ ನಿಂದ ಶ್ರೀ ಥಾಮಸ್ ಚೌಮೊಂಟ್, ಭಾರತದ ಇನ್ಸಿಟ್ಯೂಟ್ ಪ್ರಾಂಚೈಸ್ ಅಟ್ಯಾಚೆ ಪಾರ್ ಪ್ರೆಂಚ್ ಲ್ಯಾಂಗ್ವೇಜ್‌ನಿಂದ ಶ್ರೀ ಜತೀಂದರ್ ಸಿಂಗ್, ಶಿಕ್ಷಣ ಸಹಾಯಕರಾಗಿ ಅಟ್ಯಾಚೆ ಪಾರ್ ಕೋ ಅಪರೇಷನ್ ಇನ್ ಲ್ಯಾಂಗ್ವೇಜ್ ನಿಂದ ಸ್ಮೃತಿ ಪಹ್ವಾ ಉಪಸ್ಥಿತರಿದ್ದರು.

# ರಾಜಿ ಆಯ್ತು ಅಂತಾ ಲೈಂಗಿಕ ಕಿರುಕುಳ ಪ್ರಕರಣ ರದ್ದಾಗದು: ಸುಪ್ರೀಂ



**ನವದೆಹಲಿ, ನ. 07:** ದೂರುದಾರರು ಮತ್ತು ಆರೋಪಿ ರಾಜಿ ಮಾಡಿಕೊಂಡ ಕಾರಣಕ್ಕೆ ಲೈಂಗಿಕ ಕಿರುಕುಳ ಪ್ರಕರಣವನ್ನು ರದ್ದುಗೊಳಿಸಲು ಸಾಧ್ಯವಿಲ್ಲ ಎಂದು ಸುಪ್ರೀಂ ಕೋರ್ಟ್ ಗುರುವಾರ (ನ.7) ತೀರ್ಪು ನೀಡಿದೆ. ಅಪ್ರಾಪ್ತ ವಿದ್ಯಾರ್ಥಿಗೆ ಲೈಂಗಿಕ ಕಿರುಕುಳ ನೀಡಿದ ಪ್ರಕರಣದಲ್ಲಿ ಶಿಕ್ಷಕನ ವಿರುದ್ಧ ದಾಖಲಾಗಿದ್ದ ಎಫ್ಐಆರ್ ರದ್ದುಪಡಿಸಿದ್ದ ರಾಜಸ್ಥಾನ ಹೈಕೋರ್ಟ್ ಆದೇಶವನ್ನು ಸುಪ್ರೀಂ ಕೋರ್ಟ್ ಬದಿಗೊತ್ತಿದ್ದು, ಆರೋಪಿ ಶಿಕ್ಷಕನ ವಿರುದ್ಧ ಕ್ರಮಕ್ಕೆ ಸೂಚಿಸಿದೆ.

ರಾಜಸ್ಥಾನದ ಗಂಗಾಪುರ ನಗರದ ದಲಿತ ಬಾಲಕಿಯೊಬ್ಬಳು 2022ರಲ್ಲಿ ಸರ್ಕಾರಿ ಶಾಲೆಯ ಶಿಕ್ಷಕ ತನಗೆ ಲೈಂಗಿಕ ಕಿರುಕುಳ ನೀಡಿದ್ದಾಗಿ ದೂರು ದಾಖಲಿಸಿದ್ದಳು. ಪೊಲೀಸರು ಪೋಕ್ಸೋ ಮತ್ತು ಎಸ್ಸಿ, ಎಸ್ಟಿ ದೌರ್ಜನ್ಯ ತಡೆ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡು ಬಾಲಕಿಯ ಹೇಳಿಕೆ ಪಡೆದಿದ್ದರು.

ಈ ನಡುವೆ ಆರೋಪಿ ಶಿಕ್ಷಕ ವಿಮಲ್ ಕುಮಾರ್ ಗುಪ್ತಾ, ಸ್ಟಾಂಪ್ ಪೇಪರ್‌ನಲ್ಲಿ ಬಾಲಕಿಯ ಕುಟುಂಬದಿಂದ ಹೇಳಿಕೆ ಪಡೆದಿದ್ದ. ಆ ಹೇಳಿಕೆಯಲ್ಲಿ ತಪ್ಪು ತಿಳುವಳಿಕೆಯಿಂದ ನಾನು ಪೊಲೀಸ್ ದೂರು ದಾಖಲಿಸಿದ್ದೆ. ಇನ್ನು ಮುಂದೆ ಶಿಕ್ಷಕನ ವಿರುದ್ಧ ಯಾವುದೇ ಕ್ರಮವನ್ನು ಬಯಸುವುದಿಲ್ಲ ಎಂದು ಬಾಲಕಿ ಹೇಳಿದ್ದಳು. ಅದನ್ನು ಸ್ವೀಕರಿಸಿದ ಪೊಲೀಸರು ನ್ಯಾಯಾಲಯಕ್ಕೆ ವರದಿ ಸಲ್ಲಿಸಿದ್ದರು. ಆದರೆ, ಕೆಳ ನ್ಯಾಯಾಲಯ ಈ ಹೇಳಿಕೆಯನ್ನು ತಿರಸ್ಕರಿಸಿತ್ತು. ನಂತರ ಆರೋಪಿ ಹೈಕೋರ್ಟ್ ಮೆಟ್ಟಿಲೇರಿದ್ದ. ಹೈಕೋರ್ಟ್ ಬಾಲಕಿಯ ಹೇಳಿಕೆಯನ್ನು ಪರಿಗಣಿಸಿ ಆರೋಪಿ ಶಿಕ್ಷಕನ ವಿರುದ್ಧದ ಎಫ್ಐಆರ್ ರದ್ದುಪಡಿಸಿತ್ತು.

ಇದನ್ನು ಪ್ರಶ್ನಿಸಿ ಸಾಮಾಜಿಕ ಹೋರಾಟಗಾರ ರಾಮ್ಜಿ ಲಾಲ್ ಬೈರ್ವಾ ಅವರು ಸುಪ್ರೀಂ ಕೋರ್ಟ್ ಮೊರೆ ಹೋಗಿದ್ದರು. ಬೈರ್ವಾ ಅವರ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಸಿ.ಟಿ ರವಿಕುಮಾರ್ ಮತ್ತು ಪಿ.ವಿ.ಸಂಜಯ್ ಕುಮಾರ್ ಅವರಿದ್ದ ಪೀಠ, ಹೈಕೋರ್ಟ್ ತೀರ್ಪನ್ನು ತಳ್ಳಿಹಾಕಿದೆ. ಆರೋಪಿ ಶಿಕ್ಷಕ ವಿರುದ್ಧ ಕ್ರಮಕ್ಕೆ ಸೂಚಿಸಿದೆ.



ವಯನಾಡ್ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಾಂಕಾ ಗಾಂಧಿ ವಾದ್ರಾ ಅವರು ಗುರುವಾರ ವಯನಾಡ್‌ನ ಎರನಾಡಿನ ಅಕಂಪಾದಂನಲ್ಲಿ ಪ್ರಚಾರ ನಡೆಸಿದರು.

# ರಾಷ್ಟ್ರೀಯ ಭಯೋತ್ಪಾದನೆ ನಿಗ್ರಹ ನೀತಿ ಶೀಘ್ರ ಜಾರಿ: ಅಮಿತ್ ಶಾ




**ನವದೆಹಲಿ, ನ. 07:** ದೇಶದಲ್ಲಿ ಭಯೋತ್ಪಾದನೆ, ಭಯೋತ್ಪಾದಕರು ಮತ್ತು ಭಯೋತ್ಪಾದನೆ ಪರಿಸರ ವ್ಯವಸ್ಥೆಯನ್ನು ಎದುರಿಸಲು ಸರಕಾರವು ದೃಢವಾದ ರಾಷ್ಟ್ರೀಯ ಭಯೋತ್ಪಾದನಾ ನಿಗ್ರಹ ನೀತಿ ಮತ್ತು ಕಾರ್ಯತಂತ್ರವನ್ನು ಶೀಘ್ರದಲ್ಲೇ ತರಲಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಗುರುವಾರ ಹೇಳಿದ್ದಾರೆ. ಭಯೋತ್ಪಾದನಾ ವಿರೋಧಿ ಸಮಾವೇಶ–2024 ರ ಉದ್ಘಾಟನಾ ಅಧಿವೇಶನವನ್ನು ಉದ್ದೇಶಿಸಿ ಮಾತನಾಡಿದ ಗೃಹ ಸಚಿವರು, ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ರಾಜ್ಯಗಳು ಒಂದಾಗಬೇಕು ಮತ್ತು ಪೊಲೀಸ್ ಪಡೆಗಳನ್ನು ಅತ್ಯಾಧುನಿಕ ತಂತ್ರಜ್ಞಾನದೊಂದಿಗೆ ಸಜ್ಜುಗೊಳಿಸಬೇಕು ಮತ್ತು ಭಯೋತ್ಪಾದನೆಯನ್ನು ಬಲವಾಗಿ ಎದುರಿಸಬೇಕು ಎಂದು ಕರೆ ನೀಡಿದರು.

ತಂತ್ರಜ್ಞಾನವನ್ನು ಬಳಸಿಕೊಂಡು ನಮ್ಮ ಸಂಪೂರ್ಣ ಪಡೆಗೆ ತರಬೇತಿ ನೀಡದ ಹೊರತು ನಾವು ಭಯೋತ್ಪಾದನೆ ವಿರುದ್ಧ ಹೋರಾಡಲು ಸಾಧ್ಯವಿಲ್ಲ ಎಂದು ಶಾ ಹೇಳಿದರು. ಈಗ ಭಯೋತ್ಪಾದನೆಯು ಗಡಿಯಿಲ್ಲದ ಮತ್ತು ಅಗೋಚರ ರೂಪದಲ್ಲಿ ನಮ್ಮ ಮುಂದೆ ನಿಂತಿದೆ ಮತ್ತು ನಾವು ಅದನ್ನು ನಿಖರವಾಗಿ ಎದುರಿಸಬೇಕಾದರೆ ನಾವು ಉನ್ನತ ಮಟ್ಟದ ತಂತ್ರಜ್ಞಾನದೊಂದಿಗೆ ಯುವ ಅಧಿಕಾರಿಗಳಿಗೆ ತರಬೇತಿ ನೀಡಬೇಕಾಗುತ್ತದೆ.

ತಂತ್ರಜ್ಞಾನವನ್ನು ಅವರ ತರಬೇತಿಯ ಪ್ರಮುಖ ಭಾಗವಾಗಿ ಮಾಡಬೇಕಾಗಿದೆ. ಭಯೋತ್ಪಾದನೆಗೆ ಸಂಬಂಧಿಸಿದಂತೆ ರಾಜ್ಯಗಳು ತಮ್ಮದೇ ಆದ ಗಡಿಗಳನ್ನು ಹೊಂದಿವೆ, ರಾಜ್ಯಗಳಿಗೆ ಭೌಗೋಳಿಕ ಗಡಿಗಳಿವೆ, ಸಾಂವಿಧಾನಿಕ ಗಡಿಗಳಿವೆ ಆದರೆ ಭಯೋತ್ಪಾದನೆ ಮತ್ತು ಭಯೋತ್ಪಾದಕರಿಗೆ ಗಡಿಗಳಿಲ್ಲ ಎಂದು ಗೃಹ ಸಚಿವರು ಹೇಳಿದರು.

ಕಳೆದ 10 ವರ್ಷಗಳಲ್ಲಿ ನರೇಂದ್ರ ಮೋದಿ ಪ್ರಧಾನಿಯಾದ ಬಳಿಕ ದೇಶವು ಭಯೋತ್ಪಾದನೆ ವಿರುದ್ಧ ದೃಢವಾದ ಕಾರ್ಯತಂತ್ರದೊಂದಿಗೆ ಮುನ್ನಡೆಯುತ್ತಿದೆ ಎಂದರು. ಭಯೋತ್ಪಾದನೆ ವಿರುದ್ಧದ ಶೂನ್ಯ ಸಹಿಷ್ಣುತೆಯ ನೀತಿಯನ್ನು ಇಂದು ಇಡೀ ಜಗತ್ತು ಒಪ್ಪಿಕೊಂಡಿದೆ.

# ನಾನು ವ್ಯಾಪಾರ ವಿರೋಧಿ ಅಲ್ಲ, ಏಕಸ್ವಾಮ್ಯ ವಿರೋಧಿ



**ನವದೆಹಲಿ, ನ. 07:** ತನ್ನನ್ನು ವ್ಯಾಪಾರ ವಿರೋಧಿ ಎಂದು ಬಿಂಬಿಸುತ್ತಿರುವ ಬಿಜೆಪಿಯನ್ನು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಗುರುವಾರ ಕಟುವಾಗಿ ಟೀಕಿಸಿದ್ದಾರೆ ಮತ್ತು ನಾನು ಯಾವುದೇ ವ್ಯವಹಾರದ ವಿರೋಧಿಯಲ್ಲ, ಆದರೆ 'ಏಕಸ್ವಾಮ್ಯ ವಿರೋಧಿ' ಎಂದು ಹೇಳಿದ್ದಾರೆ. ವೀಡಿಯೊ ಸಂದೇಶದಲ್ಲಿ, ಗಾಂಧಿ ಹೇಳಿದರು, ನಾನು ಏನನ್ನಾದರೂ ಸಂಪೂರ್ಣವಾಗಿ ಸ್ಪಷ್ಟಪಡಿಸಲು ಬಯಸುತ್ತೇನೆ. ಬಿಜೆಪಿಯ ನನ್ನ ವಿರೋಧಿಗಳು ನನ್ನನ್ನು ಉದ್ಯಮ ವಿರೋಧಿ ಎಂದು ಬಿಂಬಿಸಿದ್ದಾರೆ. ಅವರು ಹೇಳಿದರು ನಾನು ವ್ಯಾಪಾರ ವಿರೋಧಿ ಅಲ್ಲ, ಕನಿಷ್ಠ ವಿರೋಧಿ ಏಕಸ್ವಾಮ್ಯ. ನಾನು ಒಲಿಗೋಪೋಲಿಗಳನ್ನು ರಚಿಸುವ ವಿರೋಧಿ, ನಾನು ಒಬ್ಬ, ಇಬ್ಬರು, ಮೂರು ಅಥವಾ ಐದು ಜನರ ವ್ಯವಹಾರದ ಪ್ರಾಬಲ್ಯವನ್ನು ವಿರೋಧಿಸುತ್ತೇನೆ. ತಾನು ಮ್ಯಾನೇಜ್ಮೆಂಟ್ ಕನ್ಸಲ್ಟೆಂಟ್ ಆಗಿ ತನ್ನ ವೃತ್ತಿಜೀವನವನ್ನು ಆರಂಭಿಸಿದ್ದೇನೆ ಮತ್ತು ವ್ಯವಹಾರ ಯಶಸ್ವಿಯಾಗಲು ಏನು ಬೇಕು ಎಂದು ನನಗೆ ತಿಳಿದಿದೆ ಎಂದು ರಾಹುಲ್ ಹೇಳಿದರು.

ನಾನು ವ್ಯಾಪಾರ ವಿರೋಧಿ ಅಲ್ಲ ಆದರೆ ಏಕಸ್ವಾಮ್ಯ ವಿರೋಧಿ. ಎಲ್ಲಾ ವ್ಯವಹಾರಗಳಿಗೆ ಮುಕ್ತ ಮತ್ತು ನ್ಯಾಯಯುತ ಸ್ಥಳವಿದ್ದಾಗ ನಮ್ಮ ಆರ್ಥಿಕತೆಯು ಅಭಿವೃದ್ಧಿ ಹೊಂದುತ್ತದೆ ಎಂದು ರಾಯ್ಬರೇಲಿ ಸಂಸದರು ಒತ್ತಿ ಹೇಳಿದರು.

# ಮಹಾರಾಷ್ಟ್ರ ಬದಲಾವಣೆ ಬಯಸುತ್ತಿದೆ: ಶರದ್ ಪವಾರ್




**ಶ್ರೀನಗರ, ನ. 07:** ಮಹಾರಾಷ್ಟ್ರದ ಜನರು ಬದಲಾವಣೆಯನ್ನು ಬಯಸುತ್ತಿದ್ದು, ಮುಂಬರುವ ರಾಜ್ಯ ವಿಧಾನಸಭಾ ಚುನಾವಣೆಯ ನಂತರ ಅವರಿಗೆ ಪರ್ಯಾಯವನ್ನು ನೀಡುವ ನಿಟ್ಟಿನಲ್ಲಿ ಪ್ರತಿಪಕ್ಷ ಮಹಾ ವಿಕಾಸ್ ಅಘಾಡಿ (ಎಂವಿಎ) ಮೈತ್ರಿಯು ಕೆಲಸ ಮಾಡಲಿದೆ ಎಂದು ಎನ್‌ಸಿಪಿ (ಎಸ್ಪಿ) ಮುಖ್ಯಸ್ಥ ಶರದ್ ಪವಾರ್ ಗುರುವಾರ ಹೇಳಿದ್ದಾರೆ. ಮಹಾರಾಷ್ಟ್ರ ನವೆಂಬರ್ 20 ರಂದು ನಡೆಯಲಿರುವ ರಾಜ್ಯ ವಿಧಾನಸಭಾ ಚುನಾವಣೆಗೆ ಸಂಬಂಧಿಸಿದಂತೆ ನಾಗ್ಪುರ ವಿಮಾನ ನಿಲ್ದಾಣದಲ್ಲಿ ತಮ್ಮ ಸಾರ್ವಜನಿಕ ಸಭೆಗಳಿಗೆ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದಲ್ಲಿ ಜಾತಿಗಣತಿ ನಡೆಯಬೇಕು ಎಂಬ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರ ಬೇಡಿಕೆಯನ್ನು ಬೆಂಬಲಿಸಿದ್ದಾರೆ. ಎಂವಿಎ ಮೈತ್ರಿಯಲ್ಲಿ ಪ್ರಮುಖವಾಗಿ ಎನ್‌ಸಿಪಿ (ಎಸ್‌ಪಿ), ಕಾಂಗ್ರೆಸ್ ಮತ್ತು ಉದ್ಧವ್ ಠಾಕ್ರೆ ಅವರ ಶಿವಸೇನೆ (ಯುಬಿಟಿ) ಪಕ್ಷಗಳು ಇವೆ. ಬುಧವಾರ ನಾಗ್ಪುರಕ್ಕೆ ಭೇಟಿ ನೀಡಿದ್ದ ರಾಹುಲ್ ಗಾಂಧಿ, ಜಾತಿ ಆಧಾರಿತ ಜನಗಣತಿ ನಡೆಯಲಿದೆ ಎಂದು ಹೇಳಿದ್ದರು. ಜೊತೆಗೆ ಕಾಂಗ್ರೆಸ್ ಪಕ್ಷವು ಶೇ. 50 ಮೀಸಲಾತಿ ಮಿತಿಯನ್ನು ಮೀರಿ ಮೀಸಲಾತಿ ನೀಡಲಿದೆ ಎಂದು ಭರವಸೆ ನೀಡಿದ್ದರು. ಮಹಾರಾಷ್ಟ್ರ

ತಮ್ಮ ಚುನಾವಣಾ ಪ್ರಚಾರದ ಕುರಿತು ಮಾತನಾಡಿದ ಶರದ್ ಪವಾರ್, ಮಹಾರಾಷ್ಟ್ರದ ಜನರು ಬದಲಾವಣೆಯನ್ನು ಬಯಸುತ್ತಿದ್ದಾರೆ. ಅವರಿಗೆ ವಿಶ್ವಾಸವನ್ನು ನೀಡುವಲ್ಲಿ ನಾವು ಕೆಲಸ ಮಾಡಬೇಕಾಗಿದೆ ಎಂದು ನಾವು ಭಾವಿಸುತ್ತೇವೆ ಮತ್ತು ಆ ನಿಟ್ಟಿನಲ್ಲಿ ಕೆಲಸ ಮಾಡುತ್ತಿದ್ದೇವೆ. ಅದಕ್ಕಾಗಿ ನಾನು ಮತ್ತು ನನ್ನ ಎಲ್ಲಾ ಸಹಚರರು ಇಂದಿನಿಂದ ಮಹಾರಾಷ್ಟ್ರದಾದ್ಯಂತ ಜನರನ್ನು ತಲುಪುತ್ತಿದ್ದೇವೆ ಎಂದು ಹೇಳಿದ್ದಾರೆ.

ರಾಹುಲ್ ಗಾಂಧಿ ಅವರ ಹೇಳಿಕೆ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಪವಾರ್, ನನ್ನ ಪಕ್ಷದ ನಿಲುವನ್ನು ನಾನು ಹೇಳುತ್ತೇನೆ. ನಾವು ಕಳೆದ ಮೂರು ವರ್ಷಗಳಿಂದ ಜಾತಿ ಗಣತಿಗೆ ಒತ್ತಾಯಿಸುತ್ತಿದ್ದೇವೆ. ಜಾತಿ ಗಣತಿ ನಡೆಸಬೇಕು, ಅದು ದೇಶದ ಮುಂದೆ ನಿಜವಾದ ಸಮಸ್ಯೆಗಳನ್ನು ಇಡುತ್ತದೆ ಎಂದು ಹೇಳಿದ್ದಾರೆ.

ಪ್ರಮುಖವಾಗಿ, ಮೀಸಲಾತಿ ಮಿತಿಯನ್ನು ಹೆಚ್ಚಿಸುವ ನಿರ್ಧಾರವನ್ನು ಸುಲಭಗೊಳಿಸಲು ಜಾತಿ ಗಣತಿ ಸಹಾಯ ಮಾಡುತ್ತದೆ ಎಂದು ತೋರುತ್ತದೆ. ಜನಗಣತಿ ಪೂರ್ಣಗೊಂಡ ನಂತರ ಈ ಚಿತ್ರಣವು ಸ್ಪಷ್ಟವಾಗಿ ಕಾಣುತ್ತದೆ. ಜೊತೆಗೆ, ರಾಹುಲ್ ಗಾಂಧಿ ಅವರು ಹೇಳುವಂತೆ ನಡೆದರೆ ಮೀಸಲಾತಿ ಶೇಕಡಾವಾರು ಹೆಚ್ಚಿಸಬೇಕಾಗುತ್ತದೆ ಎಂದು ಅವರು ಹೇಳಿದ್ದಾರೆ.

# ಭದ್ರತಾ ಪಡೆಗಳ ಕಾರ್ಯಾಚರಣೆ: ಓರ್ವ ಉಗ್ರನ ಹತ್ಯೆ, ಅಪಾರ ಪ್ರಮಾಣದ ಶಸ್ತ್ರಾಸ್ತ್ರಗಳ ವಶ



**ಶ್ರೀನಗರ, ನ. 07:** ಜಮ್ಮು ಮತ್ತು ಕಾಶ್ಮೀರದ ಕುಪ್ವಾರ ಜಿಲ್ಲೆಯಲ್ಲಿ ಭದ್ರತಾ ಪಡೆಗಳು ನಡೆಸಿದ ಕಾರ್ಯಾಚರಣೆಯಲ್ಲಿ ಓರ್ವ ಉಗ್ರ ಹತ್ಯೆಯಾಗಿದ್ದಾನೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕಾರ್ಯಾಚರಣೆ ನಡೆದ ಸ್ಥಳದಿಂದ ಎಕೆ 47 ರೈಫಲ್, ಎರಡು ಹ್ಯಾಂಡ್ ಗ್ರೆನೇಡ್, ನಾಲ್ಕು ಮ್ಯಾಗಜೀನ್ಗಳು, ಮದ್ದುಗುಂಡುಗಳು ಸೇರಿದಂತೆ ಅಪಾರ ಪ್ರಮಾಣದ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಾಗಿದೆ.

ಲೋಲಾಬ್ ಪ್ರದೇಶದಲ್ಲಿ ಮಂಗಳವಾರ ಕಾರ್ಯಾಚರಣೆ ಆರಂಭವಾಗಿತ್ತು. ಬುಧವಾರ ಸಹ ಈ ಕಾರ್ಯಾಚರಣೆ ಮುಂದುವರೆದಿತ್ತು. ಓರ್ವ ಉಗ್ರನ ಹತ್ಯೆಯ ನಂತರ ಈ ಕಾರ್ಯಾಚರಣೆ ನಿಲ್ಲಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮಂಗಳವಾರ ಬಂಡಿಪೋರಾ ಜಿಲ್ಲೆಯ ಕೆತ್ಸುನ್ ಅರಣ್ಯದಲ್ಲಿ ಒಬ್ಬ ಭಯೋತ್ಪಾದಕನನ್ನು ಹತ್ಯೆಗೈಯ್ಯಲಾಗಿತ್ತು. ಆ ಪ್ರದೇಶದಲ್ಲಿ ಕಾರ್ಯಾಚರಣೆ ಇನ್ನೂ ಮುಂದುವರೆದಿದೆ. ಕಾಶ್ಮೀರದಲ್ಲಿ ನೂತನ ಸರ್ಕಾರ ರಚನೆಯಾದಗಿನಿಂದ ಭಯೋತ್ಪಾದಕರು ತಮ್ಮ ಚಟುವಟಿಕೆಗಳನ್ನು ಹೆಚ್ಚಿಸಿದ್ದಾರೆ. ನವೆಂಬರ್ 2 ರಂದು, ಹಳೆಯ ಶ್ರೀನಗರ ನಗರದ ಖನ್ಯಾರ್ ಪ್ರದೇಶದಲ್ಲಿ ನಡದ ಕಾರ್ಯಾಚರಣೆಯಲ್ಲಿ ಎಲ್‌ಇಟಿಯ ಕಮಾಂಡರ್ನನ್ನು ಹತ್ಯೆಗೈಯ್ಯಲಾಗಿತ್ತು.

ಈ ಕಾರ್ಯಾಚರಣೆ ವೇಳೆ ಇಬ್ಬರು ಸ್ಥಳೀಯ ಪೊಲೀಸರು ಮತ್ತು ಇಬ್ಬರು ಸಿಆರ್‌ಪಿಎಫ್ ಯೋಧರು ಗಾಯಗೊಂಡಿದ್ದರು. ಕಳೆದ ತಿಂಗಳು ಗಂದರ್ಬಾಲ್ ಜಿಲ್ಲೆಯ ಗಗಂಗೀರ್ ಪ್ರದೇಶದಲ್ಲಿ ಉಗ್ರರು ನಡೆಸಿದ ಗುಂಡಿನ ದಾಳಿಯಲ್ಲಿ ಆರು ಕಾರ್ಮಿಕರು ಮತ್ತು ಸ್ಥಳೀಯ ವೈದ್ಯರನ್ನು ಸಾವನ್ನಪ್ಪಿದ್ದರು.

# ಮಹಾರಾಷ್ಟ್ರ ಚುನಾವಣೆ: 5 ಗ್ಯಾರಂಟಿಗಳ ಘೋಷಣೆ



**ಮುಂಬೈ, ನ. 07:** ಮಹಾರಾಷ್ಟ್ರದ ಆಢಳಿತರೂಡ ಮಹಾಯುತಿ ಮೈತ್ರಿಕೂಟ ತನ್ನ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿದ ಬೆನ್ನಲ್ಲೇ, ಪ್ರತಿಪಕ್ಷಗಳ ಒಕ್ಕೂಟ ಮಹಾ ವಿಕಾಸ್ ಅಘಾಡಿ (ಎಂವಿಎ) ಕೂಡ ಗುರುವಾರ (ನ.7) ಪ್ರಣಾಳಿಕೆ ಬಿಡುಗಡೆ ಮಾಡಿದ್ದು, ಕರ್ನಾಟಕದಂತೆ ಐದು ಗ್ಯಾರಂಟಿಗಳನ್ನು ಘೋಷಿಸಿದೆ.

ಎನ್ಸಿಪಿ (ಎಸ್ಪಿ) ಅಧ್ಯಕ್ಷ ಶರದ್ ಪವಾರ್, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತು ಶಿವಸೇನಾ (ಯುಬಿಟಿ) ಅಧ್ಯಕ್ಷ ಉದ್ಧವ್ ಠಾಕ್ರೆ ಅವರ ಸಮ್ಮುಖದಲ್ಲಿ ಬಿಕೆಸಿಯಲ್ಲಿ ನಡೆದ ಎಂವಿಎ ಸಮಾವೇಶದಲ್ಲಿ ಮಾತನಾಡಿದ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಮಹಿಳೆಯರಿಗೆ ಮಾಸಿಕ 3 ಸಾವಿರ ರೂ. ಧನ ಸಹಾಯ, ಮಹಾಲಕ್ಷ್ಮಿ ಯೋಜನೆಯಡಿ ಹೆಣ್ಣು ಮಕ್ಕಳಿಗೆ ಸರ್ಕಾರಿ ಬಸ್‌ಗಳಲ್ಲಿ ಉಚಿತ ಪ್ರಯಾಣ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಎಂವಿಎ ಅಧಿಕಾರಕ್ಕೆ ಬಂದರೆ ನೀಡಲಿದೆ ಎಂದು ಭರವಸೆ ನೀಡಿದರು.

ಉಚಿತ ಔಷಧಿಯೊಂದಿಗೆ 25 ಲಕ್ಷದ ರೂಪಾಯಿ ಉಚಿತ ಕುಟುಂಬ ವಿಮಾ ಯೋಜನೆ, ರೂ. 3 ಲಕ್ಷದವರೆಗಿನ ರೈತರ ಸಾಲ ಮನ್ನಾ, ಜೊತೆಗೆ ಸಾಲ ಮರುಪಾವತಿ ಮಾಡದವರಿಗೆ ರೂ. 50,000 ಪ್ರೋತ್ಸಾಹ ಧನ, ಜಾತಿಗಣತಿ ನಡೆಸುವುದು, ಮೀಸಲಾತಿ ಮೇಲಿನ 50 ಶೇ. ಮಿತಿ ತೆಗೆದು ಹಾಕುವುದು, ವಿದ್ಯಾವಂತ ನಿರುದ್ಯೋಗಿ ಯುವಕರಿಗೆ ಮಾಸಿಕ 4 ಸಾವಿರ ರೂ. ಧನ ಸಹಾಯ ನೀಡುವುದು ಸೇರಿದಂತೆ ಇನ್ನೂ ಅನೇಕ ಭರವಸೆಗಳನ್ನು ಎಂವಿಎ ಜನರಿಗೆ ನೀಡಿದೆ.

ಸಮಾವೇಶದಲ್ಲಿ ಭಾಗವಹಿಸಿದ್ದ ನಾಯಕರು ಸಿಎಂ ಏಕನಾಥ್ ಶಿಂಧೆ ನೇತೃತ್ವದ ಮಹಾಯುತಿ ಸರ್ಕಾರವು ಎಲ್ಲಾ ರಂಗಗಳಲ್ಲಿ ವಿಫಲವಾಗಿದೆ ಎಂದು ಕಿಡಿಕಾರಿದರು. ಮಹಾಯುತಿ ಸರ್ಕಾರವನ್ನು ಬಿಜೆಪಿಯು ಏಕನಾಥ್ ಶಿಂಧೆಯವರ ಜೊತೆಗೂಡಿ ರಹಸ್ಯವಾಗಿ ರಚಿಸಿದೆ ಎಂದು ಆರೋಪಿಸಿದ್ದಾರೆ. ಸಂವಿಧಾನವನ್ನು ಆದಷ್ಟು ಬೇಗ ತೆಗೆದು ಹಾಕಲು ಎನ್ಡಿಎ ಮತ್ತು ಆರ್‌ಎಸ್‌ಎಸ್ ಸಿದ್ದತೆ ನಡೆಸುತ್ತಿದೆ. ಹಾಗಾಗಿ, ಸಂವಿಧಾನ ರಕ್ಷಣೆಗೆ ರಾಷ್ಟ್ರವ್ಯಾಪಿ ಚಳವಳಿಯ ಅಗತ್ಯವಿದೆ ಎಂದು ಎಂವಿಎ ನಾಯಕರು ಹೇಳಿದ್ದಾರೆ.

# 370ನೇ ವಿಧಿ ಜಾರಿ ನಿರ್ಣಯ ಬೆಂಬಲಿಸಿ ಬ್ಯಾನರ್ ಪ್ರದರ್ಶನ ಜಮ್ಮು-ಕಾಶ್ಮೀರ ವಿಧಾನಸಭೆಯಲ್ಲಿ ತಾರಕಕ್ಕೇರಿದ ಗದ್ದಲ




**ಶ್ರೀನಗರ, ನ. 07:** ವಿಶೇಷ ಸ್ಥಾನಮಾನ ಕಲ್ಪಿಸಿದ್ದ 370ನೇ ವಿಧಿಯನ್ನು ಮರು ಸ್ಥಾಪಿಸುವ ವಿಚಾರವಾಗಿ ಜಮ್ಮು ಮತ್ತು ಕಾಶ್ಮೀರ ವಿಧಾನಸಭೆಯಲ್ಲಿ ಗುರುವಾರ (ನ.7) ಕೂಡ ದೊಡ್ಡಮಟ್ಟದ ಕೋಲಾಹಲ ನಡೆದಿದೆ. ಸಂಸದ ಇಂಜಿಯರ್ ರಶೀದ್ ಅವರ ಸಹೋದರ ಹಾಗೂ ಅವಾಮಿ ಇತ್ತೆಹಾದ್ ಪಕ್ಷದ ಶಾಸಕ ಖುರ್ಷಿದ್ ಅಹ್ಮದ್ ಶೇಖ್ ಅವರು ಆರ್ಟಿಕಲ್ 370 ಕುರಿತು ಬ್ಯಾನರ್ ಪ್ರದರ್ಶಿಸಿದಕ್ಕೆ ಬಿಜೆಪಿ ಶಾಸಕರು ತೀವ್ರ ವಿರೋಧ ವ್ಯಕ್ತಪಡಿಸಿದರು, ಶಾಸಕರ ನಡುವೆ ನೂಕಾಟ–ತಳ್ಳಾಟ ನಡೆದಿದೆ. ಈ ನಡುವೆ, ಗದ್ದಲದ ಕುರಿತು ಏನನ್ನೂ ಕಡತಕ್ಕೆ ದಾಖಲಿಸಬೇಡಿ ಎಂದು ಸ್ಪೀಕರ್ ಸೂಚಿಸಿದರು. ಸದನದ ಬಾವಿಗಿಳಿದ ಬಿಜೆಪಿ ಶಾಸಕರನ್ನು ಮಾರ್ಷಲ್‌ಗಳನ್ನು ಹೊರದಬ್ಬಿದರು. 370ನೇ ವಿಧಿಯನ್ನು ಮರುಸ್ಥಾಪಿಸುವಂತೆ ಆಗ್ರಹಿಸಿ ಬುಧವಾರ (ನ.6) ಜಮ್ಮು ಕಾಶ್ಮೀರ ವಿಧಾನಸಭೆಯಲ್ಲಿ ನಿರ್ಣಯ ಅಂಗೀಕರಿಸಲಾಗಿದೆ. ಇದಕ್ಕೆ ತೀವ್ರ ವಿರೋಧ ವ್ಯಕ್ತಪಡಿಸಿರುವ ಬಿಜೆಪಿ, ನಿರ್ಣಯದ ಪ್ರತಿಗಳನ್ನು ಹರಿದು ಪ್ರತಿಭಟಿಸಿತ್ತು.

ನಿರ್ಣಯ ಹಿಂಪಡೆಯುವವರೆಗೆ ಕಲಾಪ ನಡೆಯಲು ಬಿಡುವುದಿಲ್ಲ ಎಂದು ಬಿಜೆಪಿ ಶಾಸಕರು ಹೇಳಿದ್ದಾರೆ. ಈ ನಡುವೆ ಇಂದು ಶಾಸಕ ಖುರ್ಷಿದ್ ಅಹ್ಮದ್ ಬ್ಯಾನರ್ ಪ್ರದರ್ಶಿಸಿರುವುದು ಇನ್ನಷ್ಟು ಗದ್ದಲಕ್ಕೆ ಕಾರಣವಾಗಿದೆ. ಸ್ಪೀಕರ್ ಸದನವನ್ನು ಮುಂದೂಡಿದ್ದಾರೆ.

# ಜಮ್ಮು-ಕಾಶ್ಮೀರದಲ್ಲಿ 370ನೇ ವಿಧಿ ಮರುಸ್ಥಾಪನೆ ಇಲ್ಲ: ಸ್ಮೃತಿ ಇರಾನಿ



**ಹೊಸದಿಲ್ಲಿ, ನ. 7 :** ಜಮ್ಮು ಮತ್ತು ಕಾಶ್ಮೀರ ವಿಧಾನಸಭೆಯಲ್ಲಿ 370ನೇ ವಿಧಿ ಮರುಸ್ಥಾಪನೆ ಕುರಿತು ಗುರುವಾರ ನಡೆದ ಗದ್ದಲದ ಬಗ್ಗೆ ಪ್ರತಿಪಕ್ಷ ಭಾರತ ಬಣವನ್ನು ತರಾಟೆಗೆ ತೆಗೆದುಕೊಂಡ ಬಿಜೆಪಿಯ ಹಿರಿಯ ನಾಯಕಿ ಸ್ಮೃತಿ ಇರಾನಿ, 2019ರಲ್ಲಿ ರದ್ದುಪಡಿಸಲಾದ 370ನೇ ವಿಧಿ ಪುನಃಸ್ಥಾಪಿಸಲು ಸಾಧ್ಯವಿಲ್ಲ. ಪಕ್ಷದ ಪ್ರಧಾನ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸ್ಮೃತಿ ಇರಾನಿ, ನಾನು ಭಾರತದ ನಾಗರಿಕರಿಗೆ ಭರವಸೆ ನೀಡಲು ಬಯಸುತ್ತೇನೆ ಮತ್ತು ಜಮ್ಮು ಮತ್ತು ಕಾಶ್ಮೀರದಲ್ಲಿ ಆರ್ಟಿಕಲ್ 370 ಅನ್ನು ಮರುಸ್ಥಾಪಿಸುವುದಿಲ್ಲ ಮತ್ತು ಜಮ್ಮು ಮತ್ತು ಕಾಶ್ಮೀರವನ್ನು ಭಾರತದಿಂದ ಬೇರ್ಪಡಿಸುವ ಭಾರತದ ಮೈತ್ರಿ ಪ್ರಯತ್ನ ಮಾಡುವುದಿಲ್ಲ ಎಂದು ಭಾರತ ಒಕ್ಕೂಟದ ನಾಯಕರಿಗೆ ಹೇಳಲು ಬಯಸುತ್ತೇನೆ. ಯಶಸ್ವಿ. ಅವಾಮಿ ಇತ್ತೆಹಾದ್ ಪಕ್ಷದ (ಎಐಪಿ) ಶಾಸಕ ಮತ್ತು ಇಂಜಿನಿಯರ್ ರಶೀದ್ ಅವರ ಸಹೋದರ ಖುರ್ಷಿದ್ ಅಹ್ಮದ್ ಶೇಖ್ ಅವರು ಸದನದಲ್ಲಿ 370 ನೇ ವಿಧಿಯ ಬ್ಯಾನರ್ ಅನ್ನು ಪ್ರದರ್ಶಿಸಿದ ನಂತರ ಜಮ್ಮು ಮತ್ತು ಕಾಶ್ಮೀರ ವಿಧಾನಸಭೆಯು ಅಡ್ಡಿಪಡಿಸುವುದನ್ನು ಮುಂದುವರೆಸಿದ ನಂತರ ಸ್ಮೃತಿ ಟೀಕೆಗಳು ಬಂದವು.

ನಿನ್ನೆ, **INDI** ಅಲಯನ್ಸ್ ಜಮ್ಮು ಮತ್ತು ಕಾಶ್ಮೀರದಲ್ಲಿ ಭಾರತೀಯ ಸಂವಿಧಾನವನ್ನು ಕತ್ತು ಹಿಸುಕಲು ಪ್ರಯತ್ನಿಸಿತು. ಜಮ್ಮು ಮತ್ತು ಕಾಶ್ಮೀರದ ದೃಶ್ಯಗಳು, ಭಾರತದ ಸಂವಿಧಾನವನ್ನು ಹರಿದು ಹಾಕಿದ್ದು, ದಿಟ್ಟತನದ ಹಾದಿಯನ್ನು ತೋರಿಸುತ್ತದೆ. ಈ ನಿರ್ಣಯವು ಉಗ್ರವಾದ ಮತ್ತು ಭಯೋತ್ಪಾದನೆಗೆ ಕಾಂಗ್ರೆಸ್ ಮತ್ತು ಇಂಡಿ ಅಲೈಯನ್ಸ್ ನಾಯಕರ ಯುದ್ಧತಂತ್ರದ ಬೆಂಬಲವನ್ನು ತೋರಿಸುತ್ತದೆ ಎಂದು ಅವರು

# ಧೀರೇಂದ್ರ ಶಾಸ್ತ್ರಿ ಸಂದರ್ಶನ ತೆಗೆದುಹಾಕುವಂತೆ ನ್ಯೂಸ್ 18ಗೆ ಎನ್‌ಬಿಡಿಎಸ್‌ಎ ಸೂಚನೆ

**ನವದೆಹಲಿ, ನ. 07:** ಮೌಢ್ಯ ಬಿತ್ತುವ ಮತ್ತು ಕೋಮು ಸೌಹಾರ್ದತೆಗೆ ಧಕ್ಕೆ ತರುವ ಕಾರಣಕ್ಕೆ ಬಾಗೇಶ್ವರ್‌ಬಾಬಾ ಎಂದು ಕರೆಯಲ್ಪಡುವ ಸ್ವಯಂ ಘೋಷಿತ ದೇವಮಾನವ ಧೀರೇಂದ್ರ ಕೃಷ್ಣಶಾಸ್ತ್ರಿಯ ಸಂದರ್ಶನ ತೆಗೆದು ಹಾಕುವಂತೆ ಸುದ್ದಿವಾಹಿನಿ ನ್ಯೂಸ್ 18 ಇಂಡಿಯಾಗೆ ಸುದ್ದಿ ಪ್ರಸಾರ ಮತ್ತು ಡಿಜಿಟಲ್ ಮಾನದಂಡಗಳ ಪ್ರಾಧಿಕಾರ ಸೂಚಿಸಿದೆ. ಕಳೆದ ವರ್ಷ ಜು. 10 ರಂದು ಪ್ರಸಾರವಾದ ಸಂದರ್ಶನವನ್ನು ಎಲ್ಲಾ ಡಿಜಿಟಲ್ ಪ್ಲಾಟ್ಫಾರ್ಮ್‌ಗಳಿಂದ ಒಂದು ವಾರದೊಳಗೆ ತೆಗೆದು ಹಾಕುವಂತೆ ಎನ್‌ಬಿಡಿಎಸ್‌ಎ ಸೂಚನೆ ನೀಡಿದೆ. ಈ ಹಿಂದೆ ಸುದ್ದಿ ವಾಹಿನಿಗಳ ವಿರುದ್ಧ ಹಲವು ದೂರುಗಳನ್ನು ಸಲ್ಲಿಸಿರುವ ಪುಣೆ ಮೂಲದ ಟೆಕ್ಕಿ ಮತ್ತು ಹೋರಾಟಗಾರ ಇಂದ್ರಜೀತ್ ಘೋರ್ಪಡೆ ಅವರು ವಿಡಿಯೋ ವಿರುದ್ಧ ದೂರು ನೀಡಿದ್ದರು. ದೂರನ್ನು ಆಲಿಸಿದ ಎನ್‌ಬಿಡಿಎಸ್‌ಎ ಈ ನಿರ್ಧಾರ ಕೈಗೊಂಡಿದೆ.

ದೂರಿನಲ್ಲಿ ನ್ಯೂಸ್ 18 ಮ್ಯಾನೇಜಿಂಗ್ ಎಡಿಟರ್ ಕಿಶೋರ್ ಅಜ್ವಾನಿ ಜೊತೆಗಿನ ಶಾಸ್ತ್ರಿ ಅವರ ಸಂದರ್ಶನವು ಹಿಂದೂ ರಾಷ್ಟ್ರದ ಕಲ್ಪನೆ, ಲವ್ ಜಿಹಾದ್ ಪಿತೂರಿ ಸಿದ್ಧಾಂತ ಮತ್ತು ಮೂಢನಂಬಿಕೆಯನ್ನು ಪ್ರಚಾರ ಮಾಡಿದೆ. ಅಲ್ಲದೆ, ನಾನು ವಜ್ರ ಹುಡುಕುತ್ತೇನೆ, ಜನರ ಸಮಸ್ಯೆಗಳನ್ನು ಊಹಿಸುತ್ತೇನೆ ಮತ್ತು ಅಲೌಕಿಕ ಶಕ್ತಿಗಳ ಮೂಲಕ ಜನರನ್ನು ಗುಣಪಡಿಸುತ್ತೇನೆ ಎಂದು ಹೇಳುವ ಮೂಲಕ ಧೀರೇಂದ್ರ ಶಾಸ್ತ್ರಿ ಮೌಢ್ಯ ಬಿತ್ತಿದ್ದಾರೆ ಎಂದು ಆರೋಪಿಸಲಾಗಿತ್ತು.

ಧೀರೇಂದ್ರ ಶಾಸ್ತ್ರಿಯ ಹೇಳಿಕೆಗಳಿಗೆ ತಾನು ಜವಾಬ್ದಾರನಲ್ಲ ಎಂದು ಸುದ್ದಿವಾಹಿನಿ ಹೇಳಿದೆ. ಆದರೆ, ಎನ್‌ಬಿಡಿಎಸ್‌ಎ ಮಾರ್ಗಸೂಚಿ ಮತ್ತು ಬಾಂಬೆ ಹೈಕೋರ್ಟ್ ತೀರ್ಪಿನ ಪ್ರಕಾರ ಕಾರ್ಯಕ್ರಮ ಆಹ್ವಾನಿತರು ನೀಡುವ ಹೇಳಿಕೆಗಳಿಗೆ ಸುದ್ದಿವಾಹಿನಿಗಳು ಜವಾಬ್ದಾರಿಯಾಗಿರುತ್ತದೆ. ಆದ್ದರಿಂದ ಕೋಮು ದಳ್ಳುರಿಗೆ ಕಾರಣವಾಗುವ ಹೇಳಿಕೆ ನೀಡುವಂತಹವರನ್ನು ಆಹ್ವಾನಿಸುವುದನ್ನು ತಪ್ಪಿಸಬೇಕು. ಪ್ರಸಾರಕರೇ ಇಂತಹ ಹೇಳಿಕೆಗಳಿಗೆ ಜವಾಬ್ದಾರಿ ಎಂಬುವುದನ್ನು ಸಾರಲು ಪ್ರಸಾರಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ದೂರಿನಲ್ಲಿ ಒತ್ತಾಯಿಸಲಾಗಿತ್ತು.

ಸಂದರ್ಶನದಲ್ಲಿ ಮೌಢ್ಯವನ್ನು ಉತ್ತೇಜಿಸುವಂತಹ ಹಲವು ನಿಲುವುಗಳನ್ನು ಧೀರೇಂದ್ರ ಶಾಸ್ತ್ರಿ ಮಾಡಿದ್ದು, ಹಿಂದೂ ರಾಷ್ಟ್ರ ಮತ್ತು ಧರ್ಮದ ಬಗ್ಗೆ ಹಲವಾರು ಹೇಳಿಕೆಗಳನ್ನು ನೀಡಲಾಗಿದೆ. ಇದು ಸ್ವಭಾವತಃ ವಿಭಜನಕಾರಿಯಾಗಿದ್ದು, ಭಾರತದಲ್ಲಿ ವಾಸಿಸಲು ಸೀತಾ ರಾಮ್ ಎಂದು ಹೇಳುವುದು ಕಡ್ಡಾಯ. ಅಲ್ಲದೆ, ಲವ್ ಜಿಹಾದ್‌ನಲ್ಲಿ ಹಿಂದೂ ಯುವತಿಯರನ್ನು ಸಿಲುಕಿಸಿ ನಂತರ ಅವರನ್ನು ಕೊಲ್ಲುವಂತೆ ಇಸ್ಲಾಂ ಧರ್ಮ ಹೇಳುತ್ತದೆ ಎಂಬುವುದಾಗಿ ಅವರು ಹೇಳಿದರು ಎಂದು ಎನ್‌ಬಿಡಿಎಸ್‌ಎ ಅಧ್ಯಕ್ಷ (ನಿವೃತ್ತ) ನ್ಯಾಯಮೂರ್ತಿ ಎ.ಕೆ. ಸಿಕ್ರಿ ತಿಳಿಸಿದ್ದಾರೆ. ಅಂತಹ ವ್ಯಕ್ತಿಯನ್ನು ಸಂದರ್ಶನಕ್ಕೆ ಆಹ್ವಾನಿಸಿದ್ದೇಕೆ ಎಂದು ಎನ್‌ಬಿಡಿಎಸ್‌ಎ ನ್ಯೂಸ್ 18 ಅನ್ನು ಪ್ರಶ್ನಿಸಿದೆ.

ಇದಕ್ಕೆ ಪ್ರತಿಕ್ರಿಯಿಸಿದ ನ್ಯೂಸ್ 18, ಶಾಸ್ತ್ರಿ ಅವರು ತಿಂಗಳುಗಳ ಕಾಲ ಪ್ರಮುಖ ಸುದ್ದಿ ವ್ಯಕ್ತಿಯಾಗಿದ್ದರು. ಬಿಹಾರದ ರಾಜಕಾರಣಿ ತೇಜ್ ಪ್ರತಾಪ್ ಯಾದವ್ ಅವರಿಂದ ಬೆದರಿಕೆ ಎದುರಿಸಿದ್ದರು. ಅವರ ಪ್ರಸಾರಕ್ಕೆ ಗಮನಾರ್ಹ ಸುದ್ದಿ ಮೌಲ್ಯವನ್ನು ಒದಗಿಸಿದ್ದರು. ಕಾರ್ಯಕ್ರಮ ನಿರೂಪಕರು ಕೋಮುವಾದಿ ಹೇಳಿಕೆಗಳನ್ನು ತಡೆಯಲು ಯತ್ನಿಸಿದ್ದರು ಎಂದು ಸಮಜಾಯಿಸಿ ನೀಡಿತ್ತು.

### ಕಾಂಗ್ರೆಸ್ ಮುಖಂಡರು ಕೊಳ್ಳೆ ಹೊಡೆದ ಹಣ ಚುನಾವಣಾ ಕ್ಷೇತ್ರಗಳಲ್ಲಿ ಬಳಕೆ

# 3 ಚುನಾವಣೆಗಳು ನ್ಯಾಯಸಮ್ಮತವಲ್ಲ ಡಿ.ವಿ.ಸದಾನಂದ ಗೌಡ ಗಂಭೀರ ಆರೋಪ



**ಬೆಂಗಳೂರು, ನ.7–**ರಾಜ್ಯ ಉಪ ಚುನಾವಣೆಯ ಹೊಣೆ ಹೊತ್ತ ಕಾಂಗ್ರೆಸ್ ಮುಖಂಡರು ಕೊಳ್ಳೆ ಹೊಡೆದ ಗರಿಷ್ಠ ಹಣವನ್ನು ಈ 3 ಕ್ಷೇತ್ರಗಳಲ್ಲಿ ಬಳಸುವ ಪ್ರಯತ್ನದಲ್ಲಿರುವುದು ನಮ್ಮ ಗಮನಕ್ಕೆ ಬಂದಿದೆ. ಚುನಾವಣಾ ಕಮೀಷನರ್ ಅವರು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕಿದೆ ಎಂದು ರಾಜ್ಯದ ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದ ಗೌಡ ಅವರು ಆಗ್ರಹಿಸಿದರು.


ಪತ್ರಿಕಾಗೋಷ್ಠಿಯಲ್ಲಿ, ಇಲ್ಲವಾದರೆ, ಈ 3 ಉಪ ಚುನಾವಣೆಗಳು ನ್ಯಾಯಸಮ್ಮತ ಚುನಾವಣೆ ಆಗಲು ಸಾಧ್ಯವಿಲ್ಲ ಎಂದು ತಿಳಿಸಿದರು. ಕಾಂಗ್ರೆಸ್ ಪಕ್ಷದ 3 ಜನ ಚುನಾವಣಾ ಉಸ್ತುವಾರಿಗಳ ಮೇಲೆ ಗಂಭೀರವಾದ ನಿಗಾ ವಹಿಸಬೇಕೆಂದು ಒತ್ತಾಯಿಸಿದರು. ಚುನಾವಣಾ ಆಯೋಗಕ್ಕೆ ಬೇಕಾದ ಮಾಹಿತಿಗಳನ್ನು ನೀಡಲು ನಾವು ಸಿದ್ಧರಿದ್ದೇವೆ ಎಂದು ಹೇಳಿದರು. ನಿಗಾ ಇಲ್ಲದಿದ್ದರೆ, ಹಣದ ಪ್ರಭಾವದಿಂದ ಜನಸಾಮಾನ್ಯರ ತಲೆ ಹಾಳು ಮಾಡಿ ಈ ಚುನಾವಣೆಯನ್ನು ಹಣದ ಪ್ರಭಾವದ ಚುನಾವಣೆಯಾಗಿ ಪರಿವರ್ತಿಸಲಿದ್ದಾರೆ. ಇದಕ್ಕೆ ಬಿಜೆಪಿ ಹೆದರುವುದಿಲ್ಲ. ನಮ್ಮ ಕಾರ್ಯಕರ್ತರು, ಎನ್ಡಿಎ ಪ್ರಾಮಾಣಿಕ ಕಾರ್ಯಾಚರಣೆ ಮುಂದುವರಿಯಲಿದೆ. ಚುನಾವಣಾ ಆಯೋಗ ಒಂದುವೇಳೆ ಈ ಉಸ್ತುವಾರಿಗಳ ಭೂಗತ ಚಟುವಟಿಕೆಗಳನ್ನು ನಿಯಂತ್ರಿಸದೆ ಇದ್ದಲ್ಲಿ, ಸಾಮಾನ್ಯ ಜನರ ಮೇಲೆ ಗಂಭೀರ ಪ್ರಭಾವ ಬೀರಬಹುದು ಎಂದು ಆತಂಕ ಸೂಚಿಸಿದರು.

ಕಾಂಗ್ರೆಸ್ ಪಕ್ಷದ ಚುನಾವಣೆ ಉಸ್ತುವಾರಿ ಪಡೆದವರ ಕುರಿತು ಸ್ವಲ್ಪಮಟ್ಟಿನ ಆತಂಕ ಇದೆ. ಸಂಡೂರಿನಲ್ಲಿ ಮೊನ್ನೆ ತಾನೇ ಜೈಲಿನಿಂದ ಹೊರಗೆ ಬಂದ ನಾಗೇಂದ್ರರ ಉಸ್ತುವಾರಿ ಇದೆ. ಇಡೀ ರಾಜ್ಯದಲ್ಲಿ ರೈತರ ಭೂಮಿಯನ್ನು ಕೊಳ್ಳೆ ಹೊಡೆಯಲು, ವಕ್ಫ್ ಖಾತೆ ಬದಲಿಸಿ ಆಸ್ತಿ ನುಂಗಿ ನೀರು ಕುಡಿಯಲು ಹೊರಟ ಜಮೀರ್ ಶಿಗ್ಗಾವಿ ಉಸ್ತುವಾರಿ ಆಗಿದ್ದಾರೆ. ಚನ್ನಪಟ್ಟಣದಲ್ಲಿ ಸನ್ಮಾನ್ಯ ಡಿ.ಕೆ.ಶಿವಕುಮಾರ್ ಚುನಾವಣಾ ಉಸ್ತುವಾರಿ ಇದೆ. ಕಾಂಗ್ರೆಸ್ಸಿಗೆ ಇದೊಂದು ಸವಾಲಿನ ಚುನಾವಣೆ ಎನಿಸಿದೆ ಎಂದು ವಿಶ್ಲೇಷಿಸಿದರು. ಮುಡಾ ಹಗರಣದ ಆರೋಪಿ ಮುಖ್ಯಮಂತ್ರಿಯವರು ಲೋಕಾಯುಕ್ತದ ಮುಂದೆ ಹೋಗಿ ಎರಡು ಗಂಟೆಯಲ್ಲಿ ಹೊರಗೆ ಬಂದಿದ್ದಾರೆ. ಮತ್ತೆ ಇನ್ಯಾವಾಗ ಹೋಗಬೇಕೆಂಬ ಆಲೋಚನೆ, ಅದಕ್ಕೆ ಬೇಕಾದಂಥ ಹೊಂದಾಣಿಕೆ ಮಾಡುವ ಕಾರ್ಯಯೋಜನೆಯಲ್ಲಿದ್ದಾರೆ. ಎಲ್ಲ ಕಡೆಯಿಂದ ಚಕ್ರವ್ಯೂಹವನ್ನು ಪ್ರವೇಶಿಸಿದ ರೀತಿಯಲ್ಲಿ ಕಾಂಗ್ರೆಸ್ಸಿಗರು ಈ ಬಾರಿಯ ಉಪ ಚುನಾವಣೆಯನ್ನು ಎದುರಿಸುತ್ತಿದ್ದಾರೆ ಎಂದ ಅವರು, ಕರ್ನಾಟಕದ ಬೊಕ್ಕಸದಲ್ಲಿ ಲೂಟಿಯಲ್ಲಿ ನಿಸ್ಸೀಮರಾದ 3 ಜನ ಕಾಂಗ್ರೆಸ್ಸಿಗರು ಉಪ ಚುನಾವಣೆ ಉಸ್ತುವಾರಿ ತೆಗೆದುಕೊಂಡಿದ್ದಾರೆ. ಅವರು ಸಾಕಷ್ಟು ಹಣಬಲದಿಂದ ಚುನಾವಣೆ ಗೆಲ್ಲುವ ಮಾನಸಿಕತೆ ಉಳ್ಳವರು. ವಾಲ್ಮೀಕಿ ನಿಗಮದ ಹಗರಣ, ಮುಡಾ ಹಗರಣದಡಿ ಸಾಕಷ್ಟು ದುಡ್ಡನ್ನೂ ಕೊಳ್ಳೆ ಹೊಡೆದಿದ್ದಾರೆ. ಲೂಟಿ ಮಾಡುವ ಜಮೀರ್ ಕುರಿತು ಮಾತನಾಡುವುದೇ ಅಸಹ್ಯ ಅನಿಸುತ್ತಿದೆ ಎಂದು ಟೀಕಿಸಿದರು.

ಜನರು ಹಣದ ಪ್ರಭಾವಕ್ಕೆ ಒಳಗಾದರೆ, ರಾಜ್ಯದಲ್ಲಿ ಕಾಂಗ್ರೆಸ್ಸಿನ ಅಭಿವೃದ್ಧಿಶೂನ್ಯ ಆಡಳಿತ ಮುಂದುವರೆಯುತ್ತದೆ. ಹಗರಣಗಳ ಸರಕಾರ, ರೈತರ ಭೂಮಿ ಕಬಳಿಕೆ, ಮಳೆ ಹಾನಿಯ ಪರಿಹಾರ ಕೊಡಲಾಗದ ದಯನೀಯ ಸ್ಥಿತಿ ಮತ್ತೆ ಮುಂದು ವರೆಯಲಿದೆ. ರಾಜ್ಯದಲ್ಲಿ 3ಕ್ಕೆ 3 ಸ್ಥಾನಗಳನ್ನು ಎನ್ಡಿಎ ಗೆಲ್ಲಲಿದೆ. ಅದರಲ್ಲಿ ಯಾವುದೇ ಸಂದೇಹವಿಲ್ಲ. ಹಣದ ಪ್ರಭಾವವನ್ನು ನಿಲ್ಲಿಸಬೇಕಿದೆ. ಈ ಗೆಲುವಿನಿಂದ ರಾಜ್ಯದ ದುರಾಡಳಿತದ ವಿರುದ್ಧ ಒಂದು ಸಂದೇಶ ನೀಡಬೇಕಿದೆ. ನಿನ್ನೆ ಚನ್ನಪಟ್ಟಣಕ್ಕೆ ಹೋಗಿದ್ದೆ. ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರ ಜೊತೆ ಪ್ರಚಾರ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದೇನೆ. ಅಲ್ಲದೆ, ಸಂಡೂರು, ಶಿಗ್ಗಾಂವಿ ವಿಚಾರಗಳನ್ನೂ ತಿಳಿದು ಕೊಂಡಿದ್ದೇನೆ ಎಂದರು. ಕು. ಸುರಭಿ ಹೊದಿಗೆರೆ, ರಾಜ್ಯ ಮಾಧ್ಯಮ ಸಮಿತಿ ಸದಸ್ಯ ಶ್ರೀನಾಥ್ ಯು ಪತ್ರಿಕಾಗೋಷ್ಠಿಯಲ್ಲಿ ಇದ್ದರು.

## ಸಿ.ಪಿ. ಯೋಗೇಶ್ವರ್ ವಿರುದ್ಧ ಕೌಟುಂಬಿಕ ಮನಸ್ತಾಪ

# ವಿಚ್ಛೇದಿತ ಪತ್ನಿಯ ಪುತ್ರಿ ನಿಶಾ ಬಳಸುತ್ತಿರುವ ಸಾಮಾಜಿಕ ಜಾಲತಾಣಗಳ ಖಾತೆ ಡಿಲೀಟ್ ಮಾಡಲು ಹೈಕೋರ್ಟ್ ಆದೇಶ





**ಬೆಂಗಳೂರು, ನ.7–** ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸಿ ಪಿ ಯೋಗೇಶ್ವರ್ ವಿರುದ್ಧ ಅವರ ಮೊದಲ ವಿಚ್ಛೇದಿತ ಪತ್ನಿಯ ಪುತ್ರಿ ನಿಶಾ ಅವರು ಬಳಸುತ್ತಿರುವ ಫೇಸ್ ಬುಕ್, ಇನ್ಸ್ಟಾಗ್ರಾಂ, ಎಕ್ಸ್ ಕಾರ್ಪ್ (ಟ್ವಿಟರ್), ಗೂಗಲ್ ಮತ್ತು ಯೂಟ್ಯೂಬ್ ಖಾತೆಯನ್ನು ಸಂಪೂರ್ಣವಾಗಿ ಡಿಲೀಟ್ ಮಾಡಲು ಹೈಕೋರ್ಟ್ ಆದೇಶ ನೀಡಿದೆ.

ಯೋಗೇಶ್ವರ್ ಅವರ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಯಾವುದೇ ಮಾನಹಾನಿಕರ ಅಥವಾ ಅವಹೇಳನಕಾರಿ ಹೇಳಿಕೆಗಳನ್ನು ನೀಡದಂತೆ ರಾಜ್ಯ ಹೈಕೋರ್ಟ್ ನಿರ್ಬಂಧಿಸಿದೆ. ಸಾಮಾಜಿಕ ಜಾಲತಾಣಗಳು ಕೌಟುಂಬಿಕ ವಿಚಾರಗಳನ್ನು ಪೋಸ್ಟ್ ಮಾಡಬಾರದು ಎಂದು ಹೇಳಿದೆ. ಮಾಜಿ ಸಚಿವ ಸಿ ಪಿ ಯೋಗೇಶ್ವರ್ ಪತ್ನಿ ಪಿ.ವಿ. ಶೀಲಾ ಸಲ್ಲಿಸಿರುವ ಅರ್ಜಿಯ ವಿಚಾರಣೆಯನ್ನು ನ್ಯಾಯಮೂರ್ತಿ ಹೇಮಂತ ಚಂದನಗೌಡರ್ ಅವರ ನೇತೃತ್ವದ ಏಕಸದಸ್ಯ ಪೀಠ ಮಧ್ಯಂತರ ಆದೇಶ ಹೊರಡಿಸಿದೆ. ಪತಿ ಸಿ ಪಿ ಯೋಗೇಶ್ವರ್ ಉಪ ಚುನಾವಣೆಗೆ ಸ್ಪರ್ಧಿಸಿರುವ ಬೆನ್ನಲ್ಲೇ ಮಲಮಗಳಾದ ನಿಶಾ ಯೋಗೇಶ್ವರ್ ಸಾಮಾಜಿಕ ಜಾಲತಾಣಗಳಲ್ಲಿ ನಮ್ಮ ಕುಟುಂಬದ ವಿರುದ್ಧ ಅವಹೇಳನಕಾರಿ, ಮಾನಹಾನಿಕರ, ಆಧಾರರಹಿತ ಮತ್ತು ಪ್ರಚೋದನಕಾರಿ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಈ ಸಂಬಂಧ ಬೆಂಗಳೂರಿನ ಸಿಇಎನ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಆಕ್ಷೇಪಿಸಿದ್ದಾರೆ.

ಅರ್ಜಿದಾರರ ಪರ ವಕೀಲರಾದ ನಾಗರಾಜ ಶೆಟ್ಟಿ ಮತ್ತು ರೆಹಮತ್ ಉನ್ನೀಸಾ ವಾದ ಮಂಡಿಸಿದ ಅರ್ಜಿಯ ಮಧ್ಯಂತರ ಮನವಿಯನ್ನು ಪರಿಗಣಿಸಿರುವ ಹೈಕೋರ್ಟ್, ಪ್ರತಿವಾದಿಗಳಾದ ನಿಶಾ ಅವರು ಬಳಸುತ್ತಿರುವ ಫೇಸ್ ಬುಕ್, ಇನ್ಸ್ಟಾಗ್ರಾಂ, ಎಕ್ಸ್ ಕಾರ್ಪ್ (ಟ್ವಿಟರ್), ಗೂಗಲ್ ಮತ್ತು ಯೂ ಟ್ಯೂಬ್ ಖಾತೆಯನ್ನು ಸಂಪೂರ್ಣವಾಗಿ ಡಿಲೀಟ್ ಮಾಡಲು ಹೈಕೋರ್ಟ್ ಆದೇಶ ನೀಡಿದೆ. ಜಾಲತಾಣಗಳಲ್ಲಿ ಯೋಗೇಶ್ವರ್ ಅವರ ವಿರುದ್ಧ ನಿಂದನಾತ್ಮಕ ಹೇಳಿಕೆಗಳನ್ನು ಅಪ್ಲೋಡ್ ಮಾಡಬಾರದು ಮತ್ತು ಈಗಾಗಲೇ ಪ್ರಸಾರ ಮಾಡಲಾಗಿರುವ ತುಣುಕುಗಳನ್ನು ಅಳಿಸಿಹಾಕಬೇಕು ಎಂದು ಮಧ್ಯಂತರ ಆದೇಶ ನೀಡಿ ವಿಚಾರಣೆ ಮುಂದೂಡಿದೆ.

# ಅನಂತ್ ಕುಮಾರ್ ಹೆಗ್ಡೆ ವಿರುದ್ಧ ಅರ್ಜಿಗಳ ವಿಚಾರಣೆ ನ.28ಕ್ಕೆ



**ಬೆಂಗಳೂರು, ನ.7–** ಬಿಜೆಪಿಯ ಮಾಜಿ ಸಂಸದ ಅನಂತ್ ಕುಮಾರ್ ಹೆಗ್ಡೆ ವಿರುದ್ಧ ವಿವಿಧ ಠಾಣೆಗಳಲ್ಲಿ ಕೋಮುದ್ವೇಷದ ಆರೋಪದ ಸಂಬಂಧ ದಾಖಲಾಗಿದ್ದ ಎಫ್ಐಆರ್ ರದ್ದು ಕೋರಿ ಸಲ್ಲಿಸಿದ್ದ ಅರ್ಜಿಗಳ ವಿಚಾರಣೆಯನ್ನು ಕರ್ನಾಟಕ ಹೈಕೋರ್ಟ್ ನ.28ಕ್ಕೆ ಮುಂದೂಡಿ ಆದೇಶಿಸಿದೆ.

ನ್ಯಾ.ಎಂ.ನಾಗಪ್ರಸನ್ನ ಅವರ ಏಕಸದಸ್ಯ ಪೀಠದಿಂದ, ಉತ್ತರ ಕನ್ನಡ ಜಿಲ್ಲೆಯ ಮುಂಡಗೋಡ, ಕುಮಟಾ ಮತ್ತು ಭಟ್ಕಳಾ ಗ್ರಾಮೀಣ ಠಾಣೆಯಲ್ಲಿ ದಾಖಲಾಗಿರುವ ಎಫ್ಐಆರ್ ರದ್ದು ಕೋರಿ ಹೆಗ್ಡೆ ಅವರು ಸಲ್ಲಿಸಿರುವ ಅರ್ಜಿಗಳ ವಿಚಾರಣೆ ಹೈಕೋರ್ಟ್ ಇಂದು ನಡೆಸಿ ಈ ಆದೇಶವಿತ್ತಿದೆ.

ಹೆಗ್ಡೆ ಪರ ವಾದಿಸಿದ ವಕೀಲರಾದ ಪವನ್ ಚಂದ್ರ ಶೆಟ್ಟಿ ಅವರು, ಪಕ್ಷದ ಸೂಚನೆಯಂತೆ ಮಂತ್ರಾಕ್ಷತೆ ವಿತರಿಸಿದ್ದರು. ಯಾವುದೇ ಸಮುದಾಯಕ್ಕೆ ಕೇಡು ಮಾಡಿಲ್ಲ. ಇಲ್ಲಿ ಕೋಮು ದ್ವೇಷ ಹರಡುವಂಥದ್ದೇನಿರಲಿಲ್ಲ ಎಂದು ಪೀಠದ ಗಮನಕ್ಕೆ ತಂದರು. ಅರ್ಜಿ ಪುರಸ್ಕರಿಸಿ, ಹೆಗ್ಡೆ ವಿರುದ್ಧದ ಪ್ರಕರಣ ಹೈಕೋರ್ಟ್ ರದ್ದುಪಡಿಸಿದ್ದು, ಆದರೆ ಮುಂಡ ಗೋಡ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣದ ವಿಚಾರಣೆ ಸದ್ಯ ಮುಂದೂಡಿದೆ.

# ಇಂದಿನಿಂದ ಕಬ್ಬು ನುರಿಸುವಿಕೆ: ಸಚಿವ ಶಿವಾನಂದ ಪಾಟೀಲ

**ಬೆಂಗಳೂರು, ನ.7–** ಉತ್ತರ ಕರ್ನಾಟಕದ ಸಕ್ಕರೆ ಕಾರ್ಖಾನೆಗಳಲ್ಲಿ ನ.8ರಂದು ಕಬ್ಬು ನುರಿಸುವಿಕೆ ಆರಂಭಿಸಲಾಗುವುದು ಎಂದು ಸಕ್ಕರೆ ಸಚಿವ ಶಿವಾನಂದ ಪಾಟೀಲ ಹೇಳಿದರು.

ಬೆಂಗಳೂರಿನಲ್ಲಿ ಆಗಸ್ಟ್‌ನಲ್ಲಿ ನಡೆದಿದ್ದ ದಕ್ಷಿಣ ಭಾರತದ ಸಕ್ಕರೆ ಕಾರ್ಖಾನೆಗಳ ಒಕ್ಕೂಟದ ಸಭೆಯಲ್ಲಿ ನ. 15ರಿಂದ ಕಬ್ಬು ನುರಿಸುವಿಕೆ ಆರಂಭಿಸಬೇಕು ಎಂಬ ನಿರ್ಧಾರ ಕೈಗೊಳ್ಳಲಾಗಿತ್ತು. ಆದರೆ ರೈತರು ಮತ್ತು ಸಕ್ಕರೆ ಕಾರ್ಖಾನೆಗಳ ಆಡಳಿತ ಮಂಡಳಿ ಮೇರೆಗೆ ಒಂದು ವಾರ ಮುಂಚಿತವಾಗಿ ಆರಂಭಿಸುವ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಉತ್ತರ ಕರ್ನಾಟಕ ಮತ್ತು ದಕ್ಷಿಣ ಕರ್ನಾಟಕದಲ್ಲಿ ಕಬ್ಬಿನ ಹಂಗಾಮಿನಲ್ಲಿ ವ್ಯತ್ಯಾಸವಾಗಲಿದ್ದು, ದಕ್ಷಿಣ ಕರ್ನಾಟಕದ ಸಕ್ಕರೆ ಕಾರ್ಖಾನೆಗಳು ಈಗಾಗಲೇ ಕಾರ್ಯಾರಂಭ ಮಾಡಿವೆ. ಉತ್ತರ ಕರ್ನಾಟಕ ಮತ್ತು ಮಹಾರಾಷ್ಟ್ರ ರಾಜ್ಯದಲ್ಲಿ ಏಕಕಾಲಕ್ಕೆ ಸಕ್ಕರೆ ಕಾರ್ಖಾನೆಗಳು ಕಾರ್ಯಾರಂಭ ಮಾಡುವುದು ರೂಢಿಯಲ್ಲಿದೆ. ಈ ಮೊದಲಿನ ನಿರ್ಧಾರದ ಬದಲಿಗೆ ನ. 8ರಿಂದಲೇ ಕಬ್ಬು ನುರಿಸುವಿಕೆ ಆರಂಭಿಸಬೇಕು ಎಂದು ಮಹಾರಾಷ್ಟ್ರ ಸರ್ಕಾರಕ್ಕೂ ಮನವಿ ಮಾಡಲಾಗಿತ್ತು. ಆದರೆ ಅಲ್ಲಿ ವಿಧಾನಸಭಾ ಚುನಾವಣೆ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಈ ಮೊದಲಿನ ನಿರ್ಧಾರ ಬದಲಿಸಲು ಸಾಧ್ಯವಿಲ್ಲ ಎಂದು ತಿಳಿಸಿದರು. ರಾಜ್ಯದ ಕಬ್ಬು ಬೆಳೆಗಾರರ ಹಿತದೃಷ್ಟಿಯಿಂದ ನಾವು ಒಂದು ವಾರ ಮುಂಚಿತವಾಗಿ ಕಬ್ಬು ನುರಿಸುವಿಕೆ ಆರಂಭಿಸುವ ನಿರ್ಧಾರ ಮಾಡಿದ್ದೇವೆ ಎಂದು ವಿವರಿಸಿದರು. ದಾವಣಗೆರೆ ಮತ್ತು ಹಾವೇರಿ ಜಿಲ್ಲೆಗಳು ಮಧ್ಯ ಕರ್ನಾಟಕದಲ್ಲಿ ಬರುತ್ತವೆ. ಈ ಜಿಲ್ಲೆಗಳ ಸಕ್ಕರೆ ಕಾರ್ಖಾನೆಗಳು ದಕ್ಷಿಣ ಕರ್ನಾಟಕದ ಸಕ್ಕರೆ ಕಾರ್ಖಾನೆಗಳ ಸಮಯದಲ್ಲೇ ಆರಂಭ ಮಾಡಿವೆ. ಉತ್ತರ ಕರ್ನಾಟಕದ ಕಬ್ಬು ಬೆಳೆಗಾರರು ಮತ್ತು ಸಕ್ಕರೆ ಕಾರ್ಖಾನೆಗಳ ಆಡಳಿತ ಮಂಡಳಿಗಳು, ನಮ್ಮ ಭಾಗದಲ್ಲಿ ಕಬ್ಬು ಕಟಾವಿಗೆ ಬಂದಿದೆ. ಹೀಗಾಗಿ ಮುಂಚಿತವಾಗಿ ಕ್ರಷಿಂಗ್ ಆರಂಭಿಸಬೇಕು ಎಂದು ಮನವಿ ಮಾಡಿದ್ದವು ಎಂದು ತಿಳಿಸಿದರು. ನ.12ರವರೆಗೆ ಕ್ರಷಿಂಗ್ ಆರಂಭಿಸಿದ್ದರೆ ಒಂದು ಎಕರೆಗೆ 50ರಿಂದ 60 ಟನ್ ಇಳುವರಿ

> ಎಪಿಎಂಸಿ ಕಾಯ್ದೆ ಮರುಸ್ಥಾಪನೆಯಿಂದ ರೈತರಿಗೆ ಅನುಕೂಲವಾಗಿದ್ದು, ಶೋಷಣೆ ಮುಕ್ತವಾಗಿದೆ. 2023–24ನೇ ಸಾಲಿನಲ್ಲಿ ಅಕ್ಟೋಬರ್ ವರೆಗೆ 103 ಕೋಟಿ ರೂ. ಮಾರುಕಟ್ಟೆ ಶುಲ್ಕ ಸಂಗ್ರಹವಾಗಿತ್ತು. 2024–25ನೇ ಸಾಲಿನ ನವಂಬರ್ ಅಂತ್ಯದ ವೇಳೆಗೆ 205 ಕೋಟಿ ರೂ. ಶುಲ್ಕ ಸಂಗ್ರಹವಾಗಿದೆ. ಎಂದು ಸಚಿವ ಶಿವಾನಂದ ಪಾಟೀಲ ಹೇಳಿದರು.



ಬದಲಿಗೆ ಕೇವಲ 25ರಿಂದ 30 ಟನ್ ಇಳುವರಿ ಬರುವ ಸಾಧ್ಯತೆ ಇದೆ. ವಾಡಿಕೆಯಂತೆ ಅಕ್ಟೋಬರ್ ಅಂತ್ಯದೊಳಗೆ ಕ್ರಷಿಂಗ್ ಆರಂಭಿಸಲು ಅನುಮತಿ ನೀಡಬೇಕು ಎಂದು ರೈತರು ಮನವಿ ಮಾಡಿದ್ದರು ಎಂದರು. ರಾಜ್ಯದಲ್ಲಿ 80 ಸಕ್ಕರೆ ಕಾರ್ಖಾನೆಗಳು ಕಾರ್ಯನಿರ್ವಹಿಸುತ್ತಿದ್ದು, ಸುಮಾರು 7.5ಸ ಲಕ್ಷ ಹೆಕ್ಟೇರ್ ಕ್ಷೇತ್ರದಲ್ಲಿ ಕಬ್ಬು ಬೆಳೆಯಲಾಗುತ್ತಿದೆ. ಈ ಬಾರಿ ಕಬ್ಬಿಗೆ ಪ್ರತಿ ಟನ್ಗೆ 3,400 ರೂ. ನಿಗದಿಪಡಿಸಲಾಗಿದೆ. ಕಳೆದ ಹಂಗಾಮಿನಲ್ಲಿ 3,150 ರೂ. ನಿಗದಿಪಡಿಸಲಾಗಿತ್ತು. ಸಕ್ಕರೆ ಇಳುವರಿ ಪ್ರಮಾಣ 9.5ರಿಂದ 12ರವರೆಗೆ ಬರುತ್ತದೆ. ಸರಾಸರಿ ಇಳುವರಿ ಪ್ರಮಾಣ 10.5ರಷ್ಟಿದೆ ಎಂದು ತಿಳಿಸಿದರು.

**ಖರೀದಿ ಅವಧಿ ವಿಸ್ತರಣೆ:**

ಬೆಂಬಲ ಬೆಲೆಯಲ್ಲಿ ಸೋಯಾಬಿನ್ ಮತ್ತು ಹೆಸರುಕಾಳು ಖರೀದಿ ಅವಧಿಯನ್ನು ವಿಸ್ತರಣೆ ಮಾಡಲಾಗಿದೆ ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಹೇಳಿದರು. ಸೋಯಾಬೀನ್ ಖರೀದಿ ಅವಧಿಯನ್ನು ನವಂಬರ್ 20ರವರೆಗೆ ವಿಸ್ತರಣೆ ಮಾಡಲಾಗಿದೆ. ಇದುವರೆಗೆ 570 ಕ್ವಿಂಟಲ್ ಮಾತ್ರ ಖರೀದಿ ಮಾಡಲಾಗಿದ್ದು, ಇನ್ನೂ ರೈತರ ಬಳಿ ದಾಸ್ತಾನು ಇರುವ ಕಾರಣ 20ರವರೆಗೆ ಖರೀದಿ ಮಾಡಲಾಗುವುದು. ಹೆಸರುಕಾಳು ಖರೀದಿ ಅವಧಿಯನ್ನು ನ. 18ರವರೆಗೆ ವಿಸ್ತರಣೆ ಮಾಡಲಾಗಿದೆ. ಇದುವರೆಗೆ ಪ್ರತಿ ಕ್ವಿಂಟಾಲ್‌ಗೆ 8,682 ರೂ. ದರದಲ್ಲಿ 1.93 ಲಕ್ಷ ಕ್ವಿಂಟಾಲ್ ಖರೀದಿ ಮಾಡಲಾಗಿದೆ. ಹೆಚ್ಚಿನ ದಾಸ್ತಾನು ಇರುವ ಕಾರಣ ಖರೀದಿ ಪ್ರಮಾಣವನ್ನು ಹೆಚ್ಚಳ ಮಾಡಲಾಗಿದ್ದು, 38,320 ಟನ್ ಖರೀದಿ ಮಾಡಲು ನಿರ್ಧರಿಸಲಾಗಿದೆ. ಈ ಮೊದಲು 22,215 ಟನ್ ಖರೀದಿ ಮಿತಿಗೊಳಿಸಲಾಗಿತ್ತು ಎಂದು ವಿವರಿಸಿದರು. ಬೆಂಬಲ ಬೆಲೆಯಲ್ಲಿ ಒಟ್ಟು 6.81 ಲಕ್ಷ ಕ್ವಿಂಟಾಲ್ ಕೊಬ್ಬರಿ ಖರೀದಿ ಮಾಡಲಾಗಿದೆ. ಬೆಲೆ ಕುಸಿದಾಗ ಪ್ರತಿ ಕ್ವಿಂಟಾಲ್‌ಗೆ 13,500 ರೂ.ನಂತೆ ಕೊಬ್ಬರಿ ಖರೀದಿ ಮಾಡಲಾಯಿತು. ಬೆಂಬಲ ಬೆಲೆ ಖರೀದಿ ಆರಂಭಿಸುತ್ತಿದ್ದಂತೆ ಮಾರುಕಟ್ಟೆಯಲ್ಲಿ ಕೊಬ್ಬರಿ ಬೆಲೆ 15 ಸಾವಿರ ರೂ.ವರೆಗೆ ಏರಿಕೆಯಾಗಿತ್ತು. ಇದೇ ಮೊದಲ ಬಾರಿಗೆ ಬೆಂಬಲ ಬೆಲೆಯಲ್ಲಿ ಎಂಟು ಕೃಷಿ ಉತ್ಪನ್ನಗಳ ಖರೀದಿ ಮಾಡುತ್ತಿರುವುದು ವಿಶೇಷ ಎಂದರು.

# ಸರ್ಕಾರಿ ಕಚೇರಿ, ಆವರಣದಲ್ಲಿ ತಂಬಾಕು ಸೇವನೆ ನಿಷೇಧಕ್ಕೆ ಸರ್ಕಾರದ ಮಹತ್ವದ ಆದೇಶ



**ಬೆಂಗಳೂರು, ನ.7–** ಸರ್ಕಾರಿ ಕಚೇರಿಗಳಲ್ಲಿ ಹಾಗೂ ಕಚೇರಿಯ ಆವರಣಗಳಲ್ಲಿ ಧೂಮಪಾನ ಹಾಗೂ ಇತರೆ ತಂಬಾಕು ಉತ್ಪನ್ನಗಳ ಸೇವನೆ ಯನ್ನು ನಿಷೇಧಿಸಿ ರಾಜ್ಯ ಸರ್ಕಾರ ಮಹತ್ವದ ಆದೇಶ ವನ್ನು ಹೊರಡಿಸಿದೆ.

ಒಂದು ವೇಳೆ ನಿಯಮ ಮೀರಿದರೆ ಕಠಿಣ ಶಿಕ್ಷೆಗೆ ಗುರಿಯಾಗಬೇಕಾಗುತ್ತದೆ.ಧೂಮಪಾನ ನಿಷೇಧಿಸಿ, ರಾಜ್ಯ ಸಿಬ್ಬಂದಿ ಮತ್ತು ಆಡ ಳಿತ ಸುಧಾರಣೆ ಇಲಾಖೆಯ ಸರ್ಕಾರದ ಅಧೀನ ಕಾರ್ಯ ದರ್ಶಿ ನಾಗರತ್ನ ವಿ ಪಾಟಿಲ್ ಅಧಿಸೂಚನೆ ಹೊರಡಿಸಿದ್ದಾರೆ.

ನೋಟಿಫಿಕೇಶನ್ ಉಲ್ಲೇಖಿಸಿರು ವಂತೆ ಧೂಮಪಾನ ಹಾಗೂ ತಂಬಾಕಿನ ಇತರ ಉತ್ಪನ್ನಗಳ ಸೇವನೆಯು ಆರೋಗ್ಯಕ್ಕೆ ಮಾರಕ ವಾಗಿದ್ದು, ಸಾರ್ವಜನಿಕ ಪ್ರದೇಶಗಳಲ್ಲಿ ಇಂತಹ ಉತ್ಪನ್ನಗಳ ಸೇವನೆಯನ್ನು ಸಿಗರೇಟುಗಳು ಮತ್ತು ಇತರ ತಂಬಾಕು ಉತ್ಪನ್ನಗಳು (ಜಾಹೀರಾತು ನಿಷೇಧ ಮತ್ತು ವ್ಯಾಪಾರ ಮತ್ತು ವಾಣಿಜ್ಯ ನಿಯಂತ್ರಣ, ಉತ್ಪಾದನೆ, ಸರಬರಾಜು ಮತ್ತು ವಿತರಣೆ) ಕಾಯಿದೆ, 2003 (ಕೇಂದ್ರ ಅಧಿನಿಯಮ 34/2003)ರಲ್ಲಿ ಸಂಪೂರ್ಣವಾಗಿ ನಿಷೇ ಧಿಸಲಾಗಿದೆ. ಕರ್ನಾಟಕ ರಾಜ್ಯ ನಾಗರಿಕ ಸೇವಾ (ನಡತೆ) ನಿಯಮಗಳು, 2021ರ ನಿಯಮ–31ರಲ್ಲಿ ಸಾರ್ವಜನಿಕ ಸ್ಥಳದಲ್ಲಿ ಯಾವುದೇ ಮಾದಕ ಪಾನೀಯ ಅಥವಾ ಮಾದಕ ವಸ್ತುವನ್ನು ಸೇವಿಸುವುದನ್ನು ಕೂಡ ನಿಷೇಧಿಸಲಾಗಿದೆ. ಶಾಸನತ್ಮಾಕ ಎಚ್ಚರಿಕೆಗಳ ಹೊರತಾಗಿಯೂ ಸರ್ಕಾರಿ ಕಚೇರಿಗಳಲ್ಲಿ ಹಾಗೂ ಕಚೇರಿಯ ಆವರಣದಲ್ಲಿ ತಂಬಾಕು ಉತ್ಪನ್ನಗಳ ಸೇವನೆ ಆಗುತ್ತಿ ರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಹಿನ್ನೆಲೆಯಲ್ಲಿ ಸಿಬ್ಬಂದಿಗಳ ಆರೋಗ್ಯದ ಹಿತದೃಷ್ಟಿಯಿಂದ ಹಾಗೂ ಪರೋಕ್ಷ ಧೂಮಪಾನ ದಿಂದ ಸಾರ್ವಜನಿಕರನ್ನು ಹಾಗೂ ಸರ್ಕಾರಿ ಸಿಬ್ಬಂದಿ ಗಳನ್ನು ರಕ್ಷಿಸುವ ಉದ್ದೇಶದಿಂದ ಯಾವುದೇ ಸರ್ಕಾರಿ ನೌಕರನು ಸರ್ಕಾರಿ ಕಚೇರಿಗಳಲ್ಲಿ ಹಾಗೂ ಕಚಏರಿ ಆವರಣದಲ್ಲಿ ಧೂಮ ಪಾನ ಸೇರಿದಂತೆ ಯಾವುದೇ ತಂಬಾಕು ಉತ್ಪನ್ನಗಳ ಸೇವನೆ ಮಾಡುವುದನ್ನು ಸಂಪೂರ್ಣವಾಗಿ ನಿಷೇಧಿಸ ಲಾಗಿದೆ.

ಈ ಸಂಬಂಧ ಎಚ್ಚರಿಕೆಯ ಫಲಕವನ್ನು ಕಚೇರಿಯ ಸೂಕ್ತ ಸ್ಥಳಗಳಲ್ಲಿ ಪ್ರದರ್ಶಿಸ ಬೇಕಿದೆ.ಈ ಸೂಚನೆಗಳನ್ನು ಉಲ್ಲಂಘಿಸಿ ಯಾವುದೇ ಸರ್ಕಾರಿ ನೌಕರ ಕಚೇರಿಯಲ್ಲಿ ಅಥವಾ ಕಚೇರಿಯ ಆವರಣ ದಲ್ಲಿ ಧೂಮಪಾನ ಮಾಡು ವುದು ಮತ್ತು ಯಾವುದೇ ತಂಬಾಕು ಉತ್ಪನ್ನಗಳನ್ನು (ಗುಟ್ಕಾ, ಪಾನ್ ಮಸಾಲ, ಹೊಗೆಸೊಪ್ಪು ಇತ್ಯಾದಿ) ಸೇವಿಸುವುದು ಕಂಡುಬಂದಲ್ಲಿ ಅಂತಹ ನೌಕರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಸರ್ಕಾರ ಖಡಕ್ ಎಚ್ಚರಿಕೆ ಸಂದೇಶವನ್ನು ರವಾನಿಸಿದೆ.

# ಬಿ.ನಾಗೇಂದ್ರ ಕ್ರಿಮಿನಲ್ ಪ್ರಕರಣಗಳ ರದ್ದತಿ ಕೋರಿದ ಅರ್ಜಿ ವಿಚಾರಣೆ ನ.21ಕ್ಕೆ



**ಬೆಂಗಳೂರು, ನ.7–** ಅಕ್ರಮ ಕಬ್ಬಿಣದ ಅದಿರು ಮಾರಾಟ ಸಂಬಂಧದ ಆರೋಪದಲ್ಲಿ ದಾಖಲಾಗಿರುವ 17 ಕ್ರಿಮಿನಲ್ ಪ್ರಕರಣಗಳ ರದ್ದತಿ ಕೋರಿ ಕಾಂಗ್ರೆಸ್ ಶಾಸಕ ಬಿ.ನಾಗೇಂದ್ರ ಸಲ್ಲಿಸಿರುವ ಅರ್ಜಿಗಳ ವಿಚಾರಣೆಯನ್ನು ಕರ್ನಾಟಕ ಹೈಕೋರ್ಟ್ ನ.21ಕ್ಕೆ ಮುಂದೂಡಿದೆ.

ಈ ಹಿನ್ನೆಲೆಯಲ್ಲಿ ನಾಗೇಂದ್ರಗೆ ಸದ್ಯಕ್ಕೆ ರಿಲೀಫ್ ಸಿಕ್ಕಂತಾಗಿದೆ.ನ್ಯಾ. ಎಂ.ನಾಗಪ್ರಸನ್ನ ಅವರ ಏಕಸದಸ್ಯ ಪೀಠದಿಂದ ಇಂದು ವಿಚಾರಣೆ ನಡೆಸಲಾಗಿದ್ದು, ಹಿರಿಯ ವಕೀಲ ಸಂದೇಶ್ ಚೌಟ ಅವರು ನಾಗೇಂದ್ರ ಪರ ವಾದ ಮಂಡಿಸಿದರು. ವಿಶೇಷ ನ್ಯಾಯಾಲಯವು ಪ್ರಕರಣದ ಸಂಜ್ಞೇ ಪರಿಗಣಿಸಿ ಮಧ್ಯಂತರ ಆದೇಶ ವಿಸ್ತರಿಸುವ ಮೂಲಕ ಅರ್ಜಿ ವಿಚಾರಣೆ ಮುಂದೂಡಿ ಆದೇಶಿಸಿದೆ.

ಅಕ್ರಮ ಗಣಿಗಾರಿಕೆ ಮೂಲಕ ರಾಜ್ಯದ ಬೊಕ್ಕಸಕ್ಕೆ ಅಂದಾಜು 2.82 ಕೋಟಿ ರೂಪಾಯಿ ರಾಜಸ್ವ ಮತ್ತು ಇತರೆ ಶುಲ್ಕ ನಷ್ಟ ಉಂಟು ಮಾಡಿದ ಪ್ರಕರಣ ಸಂಬಂಧ ಈ ಹಿಂದೆ ನಾಗೇಂದ್ರ ಯುವಜನ ಸಬಲೀಕರಣ, ಕ್ರೀಡೆ ಮತ್ತು ಪರಿಶಿಷ್ಟರ ಕಲ್ಯಾಣ ಸಚಿವರಾಗಿದ್ದಾಗ ಹಗರಣ ನಡೆದಿದೆ ಎಂಬ ಆಪಾದನೆ ಕೇಸ್ ಇದಾಗಿದೆ. ಆಗ ನಾಗೇಂದ್ರ ಸೇರಿ, ಗಂಗಾವತಿ ಶಾಸಕ ಗಾಲಿ ಜನಾರ್ದನ ರೆಡ್ಡಿ ಸೇರಿದಂತೆ ಒಟ್ಟು 10 ಮಂದಿಯ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲು ಕಳೆದ ವರ್ಷ ಜೂನ್‌ನಲ್ಲಿ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಆದೇಶಿಸಿ, ಸಮನ್ಸ್ ಕೂಡ ಜಾರಿ ಮಾಡಿತ್ತು. ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅನುಮತಿ ಪಡೆಯದೇ ಮತ್ತು ಸರ್ಕಾರಕ್ಕೆ ರಾಜಸ್ವ ಮತ್ತು ಇತರೆ ಶುಲ್ಕ ಪಾವತಿಸದೇ ಆರೋಪಿಗಳು 22.282 ಮೆಟ್ರಿಕ್ ಟನ್ ಕಬ್ಬಿಣದ ಅದಿರು ಮಾರಾಟ ಮಾಡಿದ್ದರು ಎಂಬ ಆರೋಪವಿದೆ.

ಚನ್ನರಾಯಪಟ್ಟಣ ಹೋಬಳಿಯ ಹ್ಯಾಡಾಳ ಗ್ರಾಮದ ರೈತರಿಗೆ ಭೂಮಿ ತೆರವು ಅಧಿಕಾರಿಗಳು ನೋಟಿಸ್ ನೀಡಿರುವ ಬಗ್ಗೆ ಸಚಿವ ಕೆ.ಹೆಚ್ ಮುನಿಯಪ್ಪ ಪ್ರತಿಕ್ರಿಯಿಸಿದ್ದು, ನೋಟಿಸ್ ಆದಷ್ಟು ಬೇಗ ವಾಪಸ್ ಹಿಂಪಡೆಯುವಂತೆ ಅಧಿಕಾರಿಗಳಿಗೆ ಸೂಚಿಸಿದ್ದೇನೆ ಎಂದು ಹೇಳಿದರು

### ದೇವನಹಳ್ಳಿ ಭೂಸ್ವಾಧೀನ ಅವ್ಯವಹಾರ ಆರೋಪ

# ಸಿದ್ದರಾಮಯ್ಯ ಸರ್ಕಾರಕ್ಕೆ ಮತ್ತೊಂದು ಬಹುಕೋಟಿ ಹಗರಣದ ಸಂಕಷ್ಟ

**ಬೆಂಗಳೂರು, ನ.7–** ರಾಜ್ಯ ರಾಜಕೀಯದಲ್ಲಿ ಕೋಲಾಹಲ ಎಬ್ಬಿಸಿರುವ ಮುಡಾ ನಿವೇಶನ ಅಕ್ರಮ, ವಾಲ್ಮೀಕಿ ನಿಗಮದ ಕರ್ಮಕಾಂಡದ ಬೆನ್ನಲ್ಲೇ ಸಿದ್ದರಾಮಯ್ಯ ಸರ್ಕಾರಕ್ಕೆ ಬಹುಕೋಟಿ ಹಗರಣವೂ ಸಂಕಷ್ಟ ತಂದೊಡ್ಡಿದೆ. ಕುತೂಹಲಕಾರಿ ಬೆಳವಣಿಗೆಯಲ್ಲಿ 'ದೇವನಹಳ್ಳಿ ಭೂಸ್ವಾಧೀನ ಅವ್ಯವಹಾರ' ಆರೋಪ ಕುರಿತಂತೆ ಸಿಎಂ ಸಿದ್ದರಾಮಯ್ಯ, ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಹಾಗೂ ಕೆ.ಎ.ಎಸ್ ಅಧಿಕಾರಿ ಬಾಳಪ್ಪ ಹಂದಿಗುಂದ ವಿರುದ್ಧ ಜಾರಿ ನಿರ್ದೇಶನಾಲಯದ ನಿರ್ದೇಶಕರಿಗೆ ದೂರು ಸಲ್ಲಿಕೆಯಾಗಿದೆ.

'ಸಿಟಿಜನ್ ರೈಟ್ಸ್ ಫೌಂಡೇಶನ್' ಈ ದೂರನ್ನು ಸಲ್ಲಿಸಿದ್ದು, ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಷಾ, ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರ ನಿರ್ದೇಶನ ಕೋರಿ ಕೇಂದ್ರ ಸರ್ಕಾರಕ್ಕೂ ದೂರು ಸಲ್ಲಿಕೆಯಾಗಿದೆ.ಕೈಗಾರಿಕೋದ್ಯಮಗಳನ್ನು ಉತ್ತೇಜಿಸಲು, ಉದ್ಯಮ ಸಂಸ್ಥೆಗಳಿಗೆ ಮೂಲ ಸೌಕರ್ಯ ಕಲ್ಪಿಸುವ ಸಂಬಂಧ ಸ್ಥಾಪಿಸಲಾಗಿರುವ ರಾಜ್ಯ ಸರ್ಕಾರದ ಅಧೀನದ ಕರ್ನಾಟಕ ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿ ಮಂಡಳಿ ಇದೀಗ ಹಗರಣಗಳ ಕೂಪವಾಗಿದ್ದು, ಒಂದೊಂದೇ ಕರ್ಮಕಾಂಡಗಳು ಬೆಳಕಿಗೆ ಬರುತ್ತಿವೆ. ಅದರಲ್ಲೂ ಸರ್ಕಾರಿ ಜಮೀನಿಗೆ ನಕಲಿ ಮಾಲೀಕರನ್ನು ಸೃಷ್ಟಿಸಿ ಪರಿಹಾರದ ಮೊತ್ತವನ್ನು ಪಾವತಿಸಿರುವ ಆರೋಪ ಕೇಳಿಬಂದಿದೆ. ಈ ಹಗರಣದಲ್ಲಿ KIADB ಭೂಸ್ವಾಧೀನಾದಿ ಕಾರಿಯಾಗಿರುವ KAS ಅಧಿಕಾರಿ ಬಾಳಪ್ಪ ಹಂದಿಗುಂದ ಅವರು ಅಧಿಕಾರ ದುರುಪಯೋಗ ಪಡಿಸಿದ್ದಾರೆ ಎಂದು 'ಸಿಟಿಜನ್ ರೈಟ್ಸ್ ಫೌಂಡೇಶನ್' ಅಧ್ಯಕ್ಷ ಕೆ.ಎ.ಪಾಲ್ ಅವರು ಈ ದೂರು ಸಲ್ಲಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ಸಮೀಪ ನೂರಾರು ಎಕ್ರೆ ಜಮೀನನ್ನು ಕೈಗಾರಿಕಾ ಉದ್ದೇಶಗಳಿಗಾಗಿ ವಶಪಡಿಸಿಕೊಳ್ಳಲು ನೋಟಿಫಿಕೇಶನ್ ಹೊರಡಿಸಲಾಗಿತ್ತು. ಈ ಪೈಕಿ ದೇವನಹಳ್ಳಿ ತಾಲೂಕಿನ ಕುಂದಾಣ ಹೋಬಳಿಯ ಚಪ್ಪರದಹಳ್ಳಿ




ಗ್ರಾಮದಲ್ಲಿ ನಡೆದ ಭೂಸ್ವಾಧೀನ ಪ್ರಕ್ರಿಯೆಯಲ್ಲಿ ಅವ್ಯವಹಾರ ನಡೆದಿದೆ.

ಕೆಐಎಡಿಬಿ ವತಿಯಿಂದ ಭೂಸ್ವಾಧೀನ ಪ್ರಸ್ತಾಪವಾದ ಸಂದರ್ಭದಲ್ಲಿ ಹಲವರನ್ನು ಜಮೀನು ಮಾಲೀಕರೆಂದು ಗುರುತಿಸಿ ಪರಿಹಾರ ಹಂಚಲಾಗಿದೆ ಎಂಬ ಆರೋಪ ಕೇಳಿಬಂದಿದೆ.

ಈ ಸಂಬಂಧ ತನಿಖೆಗೆ ಕೋರಿ 12.09.2024ರಂದು ಮುಖ್ಯಮಂತ್ರಿ, ಮುಖ್ಯ ಕಾರ್ಯದರ್ಶಿ, ಕೈಗಾರಿಕಾ ಸಚಿವರಿಗೆ ದೂರು ನೀಡಲಾಗಿತ್ತು. ಇದಕ್ಕೆ ಸ್ಪಂಧಿಸದಿದ್ದಾಗ 09.10.2024ರಂದು ಲೋಕಾಯುಕ್ತರಿಗೆ ದೂರು ಸಲ್ಲಿಸಲಾಗಿದೆ. ಅದಕ್ಕೂ ಸರ್ಕಾರ ಸ್ಪಂಧಿಸದ ಹಿನ್ನೆಲೆ ಅಕ್ಟೋಬರ್ 23ರಂದು ಇಡಿಗೆ ಅಹವಾಲು ಸಲ್ಲಿಸಲಾಗಿದ್ದು, ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಷಾ, ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಜಾರಿ ನಿರ್ದೇಶನಾಲಯದ ನಿರ್ದೇಶಕರಿಗೆ ದೂರು ಸಲ್ಲಿಸಿ ಬಹುಕೋಟಿ ಹಗರಣ ಬಗ್ಗೆ ಸಮಗ್ರ ತನಿಖೆ ನಡೆಸಲು ಕೆ.ಎ.ಪಾಲ್ ಮನವಿ ಮಾಡಿದ್ದಾರೆ. ದೇವನಹಳ್ಳಿ ತಾಲೂಕಿನ ಬೈದೇನಹಳ್ಳಿ, ದೊಡ್ಡಗೊಲ್ಲಹಳ್ಳಿ, ಚಪ್ಪರದಹಳ್ಳಿ, ಹರೋನಹಳ್ಳಿ ಮೊದಲಾದ ಗ್ರಾಮಗಳಲ್ಲಿ ಕೆಐಎಡಿಬಿ ಭೂಸ್ವಾಧೀನ ನಡೆಸಿದ್ದು, ಭೂಮಿಯ ಮಾಲೀಕರಿಗೆ ಪ್ರತೀ ಎಕರೆಗೆ 1.35 ಕೋಟಿ ರೂಪಾಯಿ ಪಾವತಿಸಿ, ಆ ಮೊತ್ತದಿಂದ ಕಮೀಷನ್ ಸಂಗ್ರಹಿಸಲಾಗಿದೆ ಎಂಬ ರೈತರು 'ಸಿಟಿಜನ್ ರೈಟ್ಸ್ ಫೌಂಡೇಷನ್'ಗೆ ದೂರು ನೀಡಿದ್ದು, ಮುಖ್ಯಮತ್ರಿ ಸಿದ್ದರಾಮಯ್ಯ ಮತ್ತು ಸಚಿವ ಎಂ.ಬಿ.ಪಾಟೀಲ್ ರವರಿಗೆ ತಲುಪಿಸಲು ಪ್ರತೀ ಎಕರೆಗೆ 35 ಲಕ್ಷ ರೂಪಾಯಿ ಕಮೀಷನ್ ಸಂಗ್ರಹಿಸಲಾಗಿದೆ ಎಂದೂ ಆರೋಪಿಸಿದ್ದಾರೆ.

ಅನೇಕ ಭೂ ಮಾಲೀಕರಿಗೆ ಹಣ ನೀಡುವ ಬದಲು 50:50 ಅನುಪಾತದಲ್ಲಿ ನಿವೇಶನ ಪಡೆಯುವ ಒಪ್ಪಂದ ಮಾಡಿಸಿ, ಆ ಜಮೀನನ್ನು ತಮ್ಮ ಬೇನಾಮಿ ವ್ಯಕ್ತಿಗಳಿಗೆ ಸೇಲ್ ಅಗ್ರಿಮೆಂಟ್ ಮಾಡಿಸಲಾಗಿದೆ ಎಂದೂ ಈ ದೂರಿನಲ್ಲಿ ಆರೋಪಿಸಲಾಗಿದೆ.

ಬಾಳಪ್ಪ ಹಂದಿಗುಂದ ಒಬ್ಬ ಪ್ರಭಾವಿ ಅಧಿಕಾರಿಯಾಗಿದ್ದು, ಅವ್ಯವಹಾರ ಪ್ರಕರಣದಲ್ಲಿ ಅಮಾನತಾಗಿದ್ದರೂ ಅದೇ ಇಲಾಖೆಯ ಹುದ್ದೆಯಲ್ಲಿ ಮುಂದುವರಿಯುವಷ್ಟು ಪ್ರಭಾವಿ. ಲೋಕಾಯುಕ್ತ ಹಾಗೂ ವಿವಿಧ ಪೊಲೀಸ್ ಠಾಣೆಗಳಲ್ಲಿ ಇವರ ವಿರುದ್ಧ ಪ್ರಕರಣಗಳಿದ್ದರೂ ಕೆಐಎಡಿಬಿಯಲ್ಲೇ ಮುಂದುವರಿಸಲು ಸಚಿವ ಎಂಬಿ ಪಾಟೀಲ್ ಶಿಫಾರಸು ಮಾಡಿದ್ದು, ಸಿಎಂ ಅದಕ್ಕೆ ಒಪ್ಪಿರುವ ಕ್ರಮವೂ ಆಕ್ಷೇಪಾರ್ಹ ಎಂದು ದೂರುದಾರ ಕೆ.ಎ.ಪಾಲ್ ಅವರು ಈ ದೂರಿನಲ್ಲಿ ಹೇಳಿದ್ದಾರೆ.

ಈ ನಡುವೆ ಕೆಐಎಡಿಬಿ ವತಿಯಿಂದ ನಡೆದಿದೆ ಎನ್ನಲಾಗಿರುವ ಅಕ್ರಮಗಳ ವಿರುದ್ಧ 'ರೈತ ಹೋರಾಟ ಸಮಿತಿ' ನೇತೃತ್ವದಲ್ಲಿ ಕಳೆದ 6–7 ತಿಂಗಳುಗಳಿಂದ ಪ್ರತಿಭಟನೆಗಳು ನಡೆಯುತ್ತಿದ್ದರೂ ಸರ್ಕಾರ ಸಮಸ್ಯೆ ಬಗೆಹರಿಸದೆ ಇರುವುದರಿಂದ ಕೇಂದ್ರ ಸರ್ಕಾರದ ಮಧ್ಯ ಪ್ರವೇಶಿಸಬೇಕೆಂದು ಕೆ.ಎ.ಪಾಲ್ ಆಗ್ರಹಿಸಿದ್ದಾರೆ.

# ಭೂಕಬಳಿಕೆಯ ವಿರುದ್ಧ ನಿರಂತರ ಹೋರಾಟಕ್ಕೆ ಆರ್.ಅಶೋಕ್ ಸಜ್ಜು

**ಬೆಂಗಳೂರು, ನ.7–** ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸರ್ಕಾರ ನೀಡುವ ನೋಟಿಸ್ಗೆ ಯಾವುದೇ ಬೆಲೆ ನೀಡುವುದಿಲ್ಲ. ವಕ್ಫ್ ಮಂಡಳಿ ಮಾಡುತ್ತಿರುವ ಭೂ ಕಬಳಿಕೆಯ ವಿರುದ್ಧ ನಿರಂತರ ಹೋರಾಟ ಮಾಡಲಾಗುವುದು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಹೇಳಿದರು.

ಮಂಡ್ಯ ಜಿಲ್ಲೆಯ, ಚಂದ್ಗಾಲು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ,ವಿರೋಧ ಪಕ್ಷದ ನಾಯಕನಾಗಿ ನಾನು ಎಲ್ಲಿ ಬೇಕಾದರೂ ಓಡಾಡಬಹುದು. ಆ ಅಧಿಕಾರ, ಸ್ವಾತಂತ್ರ್ಯ ನನಗಿದೆ. ಅದಕ್ಕಾಗಿ ವಕ್ಫ್ ಭೂಮಿ ಕಬಳಿಸಿದ ಸ್ಥಳಗಳಿಗೆ ಭೇಟಿ ನೀಡುತ್ತಿದ್ದೇನೆ. ಚಂದ್ಗಾಲು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಜಾಗವನ್ನು ಒತ್ತುವರಿ ಮಾಡಲಾಗಿದೆ. ಕಣ್ಣ ಮುಂದೆ ಇರುವ ಶಾಲೆ ಪಹಣಿಯಲ್ಲಿ ಖಬರಸ್ಥಾನ ಆಗಿದೆ. ಇದು ಹೆಣ ಹೂಳುವ ಜಾಗವೇ ಎಂದು ಗ್ರಾಮಸ್ಥರೇ ಹೇಳಬೇಕು. ನಮ್ಮ ಶಾಲೆ ನಮ್ಮ ಹಕ್ಕು ಎಂಬ ಘೋಷಣೆಯಡಿ ಹೋರಾಟ ಮಾಡಬೇಕು ಎಂದರು. ಯಾವುದೇ ಜಮೀನು ತಕಾರರು ಬಂದರೆ ಜಿಲ್ಲಾಧಿಕಾರಿಗೆ ಅರ್ಜಿ ನೀಡಬೇಕು.



ಆದರೆ ವಕ್ಫ್ಗೆ ಸಂಬಂಧಿಸಿದ ಜಮೀನು ವಿವಾದ ಬಂದರೆ ಅದನ್ನು ವಕ್ಫ್‌ನಲ್ಲೇ ಬಗೆಹರಿಸಬೇಕೆಂದು ಕೇಂದ್ರದಲ್ಲಿದ್ದ ಕಾಂಗ್ರೆಸ್ ಸರ್ಕಾರ ಕಾನೂನು ತಿದ್ದುಪಡಿ ಮಾಡಿದೆ. ಇದರಿಂದಾಗಿ ಜನರ ಜಮೀನು ಕಬಳಿಕೆಯಾಗುತ್ತಿದೆ. ಹಿಂದೂ ಧಾರ್ಮಿಕ ಸಂಸ್ಥೆಗಳ ಆಸ್ತಿ ಮುಜರಾಯಿ ಇಲಾಖೆಯಡಿ ಬಂದು ಸರ್ಕಾರಿ ಆಸ್ತಿಯಾಗುತ್ತದೆ. ಆದರೆ ಮುಸ್ಲಿಂ ಸಂಸ್ಥೆಗಳ ಆಸ್ತಿ ಮಾತ್ರ ವಕ್ಫ್ ಅಡಿ ಬರುತ್ತದೆ ಎಂದು ದೂರಿದರು. ವಿರಕ್ತ ಮಠದ ಆಸ್ತಿಯನ್ನು ಪಹಣಿಯಲ್ಲಿ ವಕ್ಫ್ ಭೂಮಿ ಎಂದು ಬರೆಯಲಾಗಿದೆ. ಇದರಿಂದಾಗಿ ಸ್ವಾಮೀಜಿಗಳು ಬೀದಿಗಿಳಿದು ಹೋರಾಟ ಮಾಡಬೇಕಾಗಿದೆ. 15 ಸಾವಿರ ಎಕರೆ ಜಾಗವನ್ನು ವಕ್ಫ್ಗೆ ಬರೆಯಲಾಗಿದೆ. ದೇಶ, ಧರ್ಮ, ಕನ್ನಡ ಭಾಷೆ ಉಳಿಯಲು ಇದರ ವಿರುದ್ಧ ಹೋರಾಡಬೇಕಿದೆ. ರಾಜ್ಯದ ಪ್ರತಿಯೊಬ್ಬರೂ ಪಹಣಿಯಲ್ಲಿ ಪರಿಶೀಲಿಸಬೇಕು. ಅದರಲ್ಲಿ ವಕ್ಫ್ ಎಂದು ಇದ್ದರೆ, ನನಗೆ ತಿಳಿಸಿದರೆ ಬಂದು ಹೋರಾಟ ಮಾಡುತ್ತೇನೆ ಎಂದು ತಿಳಿಸಿದರು.

ಸುದ್ದಿಗಾರರೊಂದಿಗೆ, ನಮ್ಮ ಶಾಲೆ ನಮ್ಮ ಹಕ್ಕು, ನಮ್ಮ ದೇವಸ್ಥಾನ ನಮ್ಮ ಹಕ್ಕು ಎಂದು ನಾವು ಹೋರಾಟ ಮಾಡುತ್ತಿದ್ದೇವೆ. ಭೂ ಕಬಳಿಕೆಯ ಕ್ಯಾನ್ಸರ್ ತಡೆಗಟ್ಟದಿದ್ದರೆ ರೈತರು, ದಲಿತರ ಜಮೀನು ಉಳಿಯುವುದಿಲ್ಲ. ಸ್ವಾತಂತ್ರ್ಯ ಚಳವಳಿ ಮಾಡಿದಂತೆಯೇ ಈಗ ನಾವು ಹೋರಾಟ ಮಾಡಿ ವಕ್ಫ್ ಬೋರ್ಡ್ ರದ್ದು ಮಾಡಬೇಕಿದೆ. ಪಹಣಿಯಲ್ಲಿ ಬರೆದ ವಕ್ಫ್ ಬೋರ್ಡ್ ಎಂಬ ಹೆಸರು ತೆಗೆದುಹಾಕಿ, ನಿಜವಾದ ಮಾಲೀಕರಿಗೆ ಆಸ್ತಿ ಸಿಗುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಟಿಪ್ಪು ಮಾದರಿಯಾಗಿದ್ದು, ಮತಾಂಧ ಮುಸ್ಲಿಮರನ್ನು ಓಲೈಸಲು ಹೀಗೆ ಮಾಡುತ್ತಿದ್ದಾರೆ.

ಯಾವುದೇ ಸರ್ಕಾರ ಇದ್ದಾಗಲೂ ಜಮೀನು ಕಬಳಿಕೆ ಮಾಡಿದ್ದರೆ, ಆ ಅಧಿಕಾರಿಯನ್ನು ಮುಲಾಜಿಲ್ಲದೆ ಜೈಲಿಗೆ ಹಾಕಲಿ. ಸರ್ಕಾರವನ್ನು ವಂಚಿಸಿದ ಅಧಿಕಾರಿಯ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಿ ಎಂದರು.

# ಅನಧಿಕೃತ ನಿರ್ಮಾಣಗಳ ತೆರವು ರೂ. 12 ಕೋಟಿ ಆಸ್ತಿ ವಶ

**ಬೆಂಗಳೂರು, ನ.7–** ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಅನಧಿಕೃತ ನಿರ್ಮಾಣಗಳನ್ನು ತೆರವುಗೊಳಿಸುವ ಕಾರ್ಯಾಚರಣೆಯನ್ನು ಮುಂದುವರೆಸಿದ್ದು, ಇಂದು ನಡೆದ ಕಾರ್ಯಾಚರಣೆಯಲ್ಲಿ ರಾಜಾಜಿನಗರ ಪೀಣ್ಯಾ ಇಂಡಸ್ಟ್ರಿಯಲ್ 2ನೇ ಹಂತ ಬಡಾವಣೆಯಲ್ಲಿ ರೂ. 12 ಕೋಟಿ ಆಸ್ತಿಯನ್ನು ವಶಪಡಿಸಿಕೊಂಡಿದೆ. ಬೆಂಗಳೂರು ಉತ್ತರ ತಾಲ್ಲೂಕು, ಯಶವಂತಪುರ ಹೋಬಳಿ, ಪೀಣ್ಯ ಗ್ರಾಮದ ಸರ್ವೆ ನಂ.79ರ ಕೈಗಾರಿಕಾ ನಿವೇಶನ ಸಂಖ್ಯೆ 14 ಮತ್ತು 15ರ 12000 ಚದರ ಅಡಿಯ ಪ್ರದೇಶದಲ್ಲಿ ಅನಧಿಕೃವಾಗಿ ನಿರ್ಮಾಣವಾಗಿದ್ದ ಶೆಡ್ ಅನ್ನು ತೆರವುಗೊಳಿಸಿ, ಸುಮಾರು 12 ಕೋಟಿ ಬೆಲೆ ಬಾಳುವ ಪ್ರದೇಶವನ್ನು ಪ್ರಾಧಿಕಾರವು ವಶಪಡಿಸಿಕೊಂಡಿತು. ಕಾರ್ಯಾಚರಣೆಯನ್ನು ಪ್ರಾಧಿಕಾರದ ಆರಕ್ಷಕ ಅಧೀಕ್ಷಕರು, ಪಶ್ಚಿಮ ವಿಭಾಗದ ಕಾರ್ಯಪಾಲಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು ಒಳಗೊಂಡಂತೆ ಸ್ಥಳೀಯ ಪೊಲೀಸ್ ಇಲಾಖೆಯ ಸಹಕಾರದೊಂದಿಗೆ ನೆರವೇರಿಸಲಾಯಿತು.



ಬೆಂಗಳೂರು ಉತ್ತರ ತಾಲೂಕಿನಲ್ಲಿ ದಲಿತರ ಮೇಲಿನ ದೌರ್ಜನ್ಯ ಖಂಡಿಸಿ ಜೈ ಭೀಮ್ ಅಖಿಲ ಭಾರತ ದಲಿತ ಕ್ರಿಯಾ ಸಮಿತಿ ಸದಸ್ಯರು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಗುರುವಾರ ಪ್ರತಿಭಟನೆ ನಡೆಸಿದರು.

# ರಾಜಕಾರಣಿಗಳಿಂದ ಕನ್ನಡ ಶಾಲೆ ಮುಚ್ಚುವ ಯತ್ನ: ಆಕ್ರೋಶ

**ಬೀದರ್, ನ.7–** ರಾಜ್ಯದಲ್ಲಿ ಹೆಚ್ಚಿನ ಆಂಗ್ಲ ಮಾಧ್ಯಮಗಳ ಶಾಲೆಗಳು ರಾಜಕಾರಣಿಗಳದ್ದೇ ಆಗಿಉವುದರಿಂದ ಕನ್ನಡ ಮಾಧ್ಯಮ ಸರ್ಕಾರಿ ಶಾಲೆಗಳನ್ನು ಮುಚ್ಚುವ ವ್ಯವಸ್ಥಿತ ಪ್ರಯತ್ನ ಸ್ವಾರ್ಥ ರಾಜಕಾರಣಿಗಳಿಂದ ನಡೆಯುತ್ತಿದೆ ಎಂದು ಜಿ.ಬಿ. ವಿನಯಕುಮಾರ ಬೇಸರ ವ್ಯಕ್ತಪಡಿಸಿದರು.

ನಗರದ ಜಿಲ್ಲಾ ರಂಗ ಮಂದಿರದಲ್ಲಿ ಶ್ರೀ ಕೇತಕಿ ಶೈಕ್ಷಣಿಕ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಸಂಸ್ಥೆ ಹಾಗೂ ಹಣ್ಮು ಪಾಜಿ ಗೆಳೆಯರ ಬಳಗದ ವತಿಯಿಂದ ಆಯೋಜಿಸಿದ್ದ ಕರ್ನಾಟಕ ಸಂಭ್ರಮ 50 ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರಿ ಶಾಲೆಗಳಿಂದಾಗಿಯೇ ಇಂದು ಕನ್ನಡ ಉಳಿದಿದೆ. ಸರ್ಕಾರಿ ಶಾಲೆಗಳು ಮುಚ್ಚಿದರೆ ಕನ್ನಡ ನಶಿಸಲಿದೆ ಎಂದು ಆತಂಕ ಹೊರ ಹಾಕಿದರು. ಕ ನ್ನಡಿಗರು ರಾಷ್ಟ್ರ ರಾಜಕಾರಣದಲ್ಲಿ ಮಿಂಚಬೇಕು. ಕನ್ನಡ, ಭಾಷೆ, ನೆಲ, ಜಲದ ಬಗ್ಗೆ ಸಂಸತ್ತಿನ ಧ್ವನಿ ಎತ್ತುವುದು ಇಂದಿನ ಅನಿವಾರ್ಯವಾಗಿದೆ ಎಂದು ಹೇಳಿದರು.



ಬೀದರನಲ್ಲಿ ಶ್ರೀ ಕೇತಕಿ ಶೈಕ್ಷಣಿಕ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಸಂಸ್ಥೆ ಹಾಗೂ ಹಣ್ಮು ಪಾಜಿ ಗೆಳೆಯರ ಬಳಗದ ವತಿಯಿಂದ ಕನ್ನಡ ರಾಜ್ಯೋತ್ಸವದ ಅಂಗವಾಗಿ ಕನ್ನಡ ತಾಯಿ ಭುವನೇಶ್ವರಿಯ ಭವ್ಯ ಮೆರವಣಿಗೆ ನಡೆಯಿತು.

ವಿಶೇಷ ಉಪನ್ಯಾಸ ನೀಡಿದ ಸಾಹಿತಿ ಬಿ.ಎಂ. ಅಮರವಾಡಿ ಜಾತಿ, ಧರ್ಮದ ಹೆಸರಿನಲ್ಲಿ ಛಿದ್ರವಾದರೆ ಕನ್ನಡ ಕಟ್ಟುವುದು ಹೇಗೆ, ಆಲೂರು ವೆಂಕಟರಾಯ, ಕುವೆಂಪು, ದೇವರಾಜ ಅರಸು ಅವರ ಏಕತೆಯ ಆದರ್ಶಗಳನ್ನು ಕನ್ನಡಿಗರು ಪಾಲಿಸಬೇಕು ಎಂದರು. ಶ್ರೀ ಕೇತಕಿ ಶೈಕ್ಷಣಿಕ, ಸಾಮಾಜಿಕ ಹಾಗೂ ಸಾಂಸ್ಕೃತಿಕ ಸಂಸ್ಥೆಯ ಅಧ್ಯಕ್ಷ ಹಣ್ಮು ಪಾಜಿ ಮಾತನಾಡಿ, ಕನ್ನಡ ನಾಡು, ನುಡಿ, ಸಂಸ್ಕೃತಿಯ ಬೆಳವಣಿಗೆಗೆ ಪೂರಕವಾಗಿ ಸಂಸ್ಥೆ ಕಾರ್ಯ ನಿರ್ವಹಿಸುತ್ತಿದೆ. ವಿವಿಧ ಕ್ಷೇತ್ರಗಳ ಸಾಧಕರಿಗೆ ಪ್ರಶಸ್ತಿ ನೀಡಿ ಪ್ರೋತ್ಸಾಹಿಸುತ್ತಿದೆ ಎಂದು ತಿಳಿಸಿದರು.

ಸುರೇಶ ಚನಶೆಟ್ಟಿ, ವಿರೂಪಾಕ್ಷ ಗಾದಗಿ ಮತ್ತು ಲಕ್ಷ್ಮಣ ದಸ್ತಿ ಮಾತನಾಡಿದರು. ಜಿ.ಬಿ. ವಿನಯ ಕುಮಾರ ಅವರಿಗೆ ಕನ್ನಡ ಸಾರಥಿ, ವಿವಿಧ ಕ್ಷೇತ್ರಗಳ 69 ಸಾಧಕರಿಗೆ ರಾಜ್ಯಮಟ್ಟದ ಕನ್ನಡ ಸೇವಾ ರತ್ನ ಪ್ರಶಸ್ತಿ ಪ್ರದಾನ ಮಾಡಲಾಯಿತು. ವಿವಿಧ ಸ್ಪರ್ಧೆಗಳ ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಸಂಜೀವಕುಮಾರ ಅತಿವಾಳೆ, ವಿನಯಕುಮಾರ ಮಾಳಗೆ ಅವರನ್ನು ಸನ್ಮಾನಿಸಲಾಯಿತು. ವಿವಿಧ ಶಾಲಾ, ಕಾಲೇಜು ವಿದ್ಯಾರ್ಥಿಗಳಿಂದ ನಡೆದ ಸಾಂಸ್ಕೃತಿಕ ಕಾರ್ಯಕ್ರಮಗಳು ಗಮನ ಸೆಳೆದವು. ಲಿಂಗಾಯತ ಮಹಾ ಮಠದ ಪ್ರಭುದೇವರು ಸಾನಿಧ್ಯ ವಹಿಸಿದ್ದರು. ಭುವನೇಶ್ವರಿ ಭಾವಚಿತ್ರದ ಮೆರವಣಿಗೆ ಕರ್ನಾಟಕ ಸಂಭ್ರಮ 50 ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ನಿಮಿತ್ತ ನಗರದಲ್ಲಿ ಅಲಂಕೃತ ರಥದಲ್ಲಿ ಕನ್ನಡ ತಾಯಿ ಭುವನೇಶ್ವರಿ ಭಾವಚಿತ್ರದ ಮೆರವಣಿಗೆ ನಡೆಯಿತು. ಕಿತ್ತೂರು ರಾಣಿ ಚನ್ನಮ್ಮ ವೃತ್ತದಿಂದ ಪ್ರಮುಖ ಬೀದಿಗಳ ಮೂಲಕ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗ ಮಂದಿರದವರೆಗೆ ಮೆರವಣಿಗೆ ಜರುಗಿತು.

ಆಟೋಗಳ ಮೇಲೆ ಸ್ವಾತಂತ್ರ್ಯ ಹೋರಾಟಗಾರರು ಹಾಗೂ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರ ಭಾವಚಿತ್ರಗಳನ್ನು ಇಡಲಾಗಿತ್ತು. ಡೊಳ್ಳು ಕುಣಿತ, ಲಂಬಾಣಿ ನೃತ್ಯ, ಹಲಗೆ, ಚಕ್ಕಡಿಗಳು ಮೆರವಣಿಗೆಯ ಮೆರಗು ಹೆಚ್ಚಿಸಿದವು.

# ಕಾಂಗ್ರೆಸ್ ನಾಯಕರಿಂದಲೇ 2.70 ಲಕ್ಷ ಕೋಟಿ ಮೌಲ್ಯದ ವಕ್ಫ್ ಆಸ್ತಿ ಕಬಳಿಕೆ: ಯತ್ನಾಳ್



ವಿಜಯಪುರದಲ್ಲಿ ಧರಣಿ ಸತ್ಯಾಗ್ರಹ ನಡೆಸುತ್ತಿರುವ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಮಾಧ್ಯಮಗಳೊಂದಿಗೆ ಮಾತನಾಡಿದರು. ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ ಅವರೂ ಇದ್ದಾರೆ.

**ವಿಜಯಪುರ, ನ.7–** ರಾಜ್ಯದಲ್ಲಿ ವಕ್ಫ್ ಆಸ್ತಿ ಕುರಿತು ಅನ್ವರ್ ಮಾಣಿಪ್ಪಾಡಿ ವರದಿ ಪ್ರಕಾರ ಕಾಂಗ್ರೆಸ್ ನಾಯಕರು ಸುಮಾರು 2.70 ಲಕ್ಷ ಕೋಟಿ ಮೌಲ್ಯದಷ್ಟು ವಕ್ಫ್ ಆಸ್ತಿ ಕಬಳಿಸಿದ್ದಾರೆ. ಈ ವರದಿಯಲ್ಲಿ ಈಗಿನ ರಾಷ್ಟ್ರೀಯ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಖಮರುಲ್ ಇಸ್ಲಾಂ, ರೆಹಮಾನ್ ಖಾನ್, ಸಿ.ಎಂ.ಇಬ್ರಾಹಿಂ, ಬೆಂಗಳೂರಿನ ಶಾಸಕ ಹ್ಯಾರಿಸ್ ಹೆಸರುಗಳಿವೆ. ವಕ್ಫ್ ನಿಂದ ಯಾವುದೇ ಮುಸ್ಲಿಮರಿಗೆ ಅನುಕೂಲ ವಾಗಿಲ್ಲ ಎಂದು ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದರು.

ಸೋಮವಾರದಿಂದ ನಡೆಯುತ್ತಿರುವ ಅಹೋರಾತ್ರಿ ಧರಣಿಯ 4ನೇ ದಿನವಾದ ಇಂದು ಮಾಧ್ಯಮಗಳೊಂದಿಗೆ ಮಾತನಾಡಿ, ವಕ್ಫ್ ಆಸ್ತಿ ರಕ್ಷಣೆ ಮಾಡಿ ಕ್ರೋಡೀಕರಣ ಮಾಡುತ್ತೇವೆಂದು ನಮ್ಮ ಪಕ್ಷದ ಪ್ರಣಾಳಿಕೆಯಲ್ಲಿ ಹಾಕಿದ್ದು ನಿಜ. ಇದರರ್ಥ ಬೇಕಾಬಿಟ್ಟಿಯಾಗಿ ಕಾಂಗ್ರೆಸ್ ನಾಯಕರು ನುಂಗಿರುವ ಆಸ್ತಿಯ ವಾಪಸ್ ಪಡೆದು ರಕ್ಷಣೆ ಮಾಡುವುದಾಗಿದೆ. ಹೀಗಾಗಿ ಕೇಂದ್ರ ಸರ್ಕಾರ ವಕ್ಫ್ ಕಾಯ್ದೆಗೆ ತಿದ್ದುಪಡಿ ತರುತ್ತಿದೆ. ಅದನ್ನು ತಡೆಯಲು ಜಗತ್ತಿನ ಯಾವುದೇ ಶಕ್ತಿಗೂ ಸಾಧ್ಯವಿಲ್ಲ. ಈ ಕಾಯ್ದೆಗೆ ಅಂಗೀಕಾರ ಪಡೆಯುವುದರೊಳಗೆ ವಕ್ಫ್ ಸಚಿವ ಜಮೀರ್ ಅಹ್ಮದ್ ರಾತ್ರೋರಾತ್ರಿ ವಿಜಯಪುರ, ಬೀದರ, ಕಲಬುರಗಿ, ಯಾದಗಿರಿಗೆ ಧಾವಿಸಿ ವಕ್ಫ್ ಅದಾಲತ್‌ಗಳನ್ನು ನಡೆಸುವ ಮೂಲಕ ರಾಜ್ಯದಲ್ಲಿ ಲಕ್ಷಾಂತರ ಎಕರೆ ವಕ್ಫ್ ಮಾಡುವ ಹುನ್ನಾರ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಯಾವುದೇ ನೋಟಿಸ್ ಕೊಡದೇ ರೈತರ ಜಮೀನು, ಮಠಗಳು, ಸಂಘ–ಸಂಸ್ಥೆಗಳ ದಾಖಲೆಗಳಲ್ಲಿ ವಕ್ಫ್ ಎಂದು ಸೇರಿಸುತ್ತಿದ್ದಾರೆ. ಹೀಗಾಗಿ ಜನರು ಹೊರಗಡೆ ಬಂದು ಹೋರಾಟ ಮಾಡಿ ನಮ್ಮ ದೇಶ, ಧರ್ಮ, ಭೂಮಿ ರಕ್ಷಣೆ ಮಾಡಿಕೊಳ್ಳಬೇಕು. ವಕ್ಫ್ ಆಸ್ತಿ ಒತ್ತುವರಿಯಾಗಿದ್ದನ್ನು ತೆರವು ಮಾಡಿ ಮೂಲ ಮಾಲೀಕರಿಗೆ ನೀಡಬೇಕು. ಎಲ್ಲ ವಕ್ಫ್ ಆಸ್ತಿಯನ್ನು ರಾಷ್ಟ್ರೀಕರಣ ಮಾಡಬೇಕು. ವಕ್ಫ್ ಆಸ್ತಿ ರಾಷ್ಟ್ರೀಕರಣವೇ ಎಲ್ಲ ಸಮಸ್ಯೆಗೂ ಪರಿಹಾರ ಎಂದರು.

ಧರಣಿ ಸ್ಥಳಕ್ಕೆ ಕೆ.ಎಸ್.ಈಶ್ವರಪ್ಪ ಭೇಟಿ: ವಕ್ಫ್ ನೋಟಿಸ್ ವಿರುದ್ಧದ ಧರಣಿ ಸ್ಥಳಕ್ಕೆ ಮಾಜಿ ಡಿಸಿಎಂ ಕೆ.ಎಸ್.ಈಶ್ವರಪ್ಪ ಭೇಟಿ ನೀಡಿ ಅಹೋರಾತ್ರಿ ಧರಣಿಗೆ ಬೆಂಬಲಿಸಿದರು. ಶಾಸಕ ಬಸನಗೌಡ ಪಾಟೀಲ್ ಯತ್ನಾಳ್‌ರೊಂದಿಗೆ ಕೆಲಹೊತ್ತು ಸಮಾಲೋಚಿಸಿದರು.

ರೈತರಿಗೆ ವಕ್ಫ್ ಬೋರ್ಡ್ ನೋಟಿಸ್ ನೀಡಿರುವ ಸರ್ಕಾರದ ಧೋರಣೆ ಖಂಡಿಸಿ ರಾಜ್ಯಾದ್ಯಂತ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ರಾಜ್ಯದ ವಿವಿಧ ಜಿಲ್ಲಾ ಕೇಂದ್ರಗಳು ಹಾಗೂ ತಾಲೂಕುಗಳಲ್ಲಿ ಬಿಜೆಪಿ ನಾಯಕರು ಹಾಗೂ ಕಾರ್ಯಕರ್ತರು ತಂಡೋಪತಂಡವಾಗಿ ರಸ್ತೆಗಿಳಿದು ಸರ್ಕಾರದ ವಿರುದ್ಧ ವಕ್ಫ್ ಸಮರ ಸಾರಿದರು.

# ಮಾಜಿ ವಕ್ಫ್ ಸಚಿವೆ ಶಶಿಕಲಾ ಜೊಲ್ಲೆ ಮಗನ ಆಸ್ತಿಗೂ ವಕ್ಫ್ ಕಂಟಕ!

ಬೆಳಗಾವಿ, ನ.7–ರೈತರ ಪಹಣಿಯಲ್ಲಿ ವಕ್ಫ್ ಆಸ್ತಿ ಎಂದು ನಮೂದಿಸಿದ್ದನ್ನು ವಿರೋಧಿಸಿ ರಾಜ್ಯ ಬಿಜೆಪಿ ನಾಯಕರು ಸರ್ಕಾರದ ವಿರುದ್ಧ ಹರಿಹಾಯುತ್ತಿದ್ದಾರೆ. ಆದರೆ ವಕ್ಫ್ ಬೋರ್ಡ್ ವಕ್ರ ದೃಷ್ಟಿ ಬಿಜೆಪಿ ನಾಯಕರ ಮೇಲೆಯೇ ಬಿದ್ದಿದೆ. ಮಾಜಿ ಹಜ್ ಮತ್ತು ವಕ್ಫ್ ಬೋರ್ಡ್ ಸಚಿವೆ ಶಶಿಕಲಾ ಜೊಲ್ಲೆ ಅವರ ಕುಟುಂಬಕ್ಕೂ ವಕ್ಫ್ ಬೋರ್ಡ್ ಶಾಕ್ ನೀಡಿದೆ. ಜೊಲ್ಲೆ ದಂಪತಿಯ ಕಿರಿಯ ಪುತ್ರನಿಗೆ ಸೇರಿದ ಜಮೀನಿನ ಪಹಣಿ ಪತ್ರದಲ್ಲಿ "ವಕ್ಫ್ ಆಸ್ತಿ" ಎಂದು ನಮೂದಿಸಲಾಗಿದೆ.

ಬಿಜೆಪಿ ಶಾಸಕಿ ಶಶಿಕಲಾ ಜೊಲ್ಲೆ ಮತ್ತು ಮಾಜಿ ಸಂಸದ ಅಣ್ಣಾಸಾಹೇಬ್ ಜೊಲ್ಲೆ ದಂಪತಿಯ ಕಿರಿಯ ಪುತ್ರ ಬಸವಪ್ರಭು ಜೊಲ್ಲೆ ಅವರಿಗೆ ಸೇರಿದ 2 ಎಕರೆ 13 ಗುಂಟೆ ಜಮೀನಿನ ಪಹಣಿಯಲ್ಲಿ ವಕ್ಫ್ ಆಸ್ತಿ ಅಂತ ಹೆಸರು ಸೇರ್ಪಡೆಯಾಗಿದೆ.

ಚಿಕ್ಕೋಡಿ ತಾಲೂಕಿನ ಯಕ್ಸಂಬಾ ಗ್ರಾಮದಲ್ಲಿ ಸರ್ವೆ ನಂಬರ್ 337ರಲ್ಲಿ ಬಸವಪ್ರಭು ಜೊಲ್ಲೆ ಅವರಿಗೆ ಸೇರಿದ 2 ಎಕರೆ 13 ಗುಂಟೆ ಜಮೀನು ಇದೆ. ಈ ಜಮೀನಿನಲ್ಲಿ ಜೊಲ್ಲೆ ಕುಟುಂಬ ತಲ–ತಲಾಂತರಗಳಿಂದ ಉಳಿಮೆ ಮಾಡುತ್ತಾ ಬಂದಿದೆ. ಆದರೆ, 2021ರಲ್ಲಿ ಶಾಸಕಿ ಶಶಿಕಲಾ ಜೊಲ್ಲೆ 'ವಕ್ಫ್ ಬೋರ್ಡ್' ಸಚಿವರಾಗಿದ್ದ ಸಮಯದಲ್ಲೇ ತಮ್ಮ ಕಿರಿಯ ಪುತ್ರ ಬಸವಪ್ರಭು ಅವರಿಗೆ ಸೇರಿದ ಜಮೀನು ಪಹಣಿಯಲ್ಲಿ ವಕ್ಫ್? ಆಸ್ತಿ ಅಂತ ನಮೂದಾಗಿದೆ. ವಕ್ಫ್ ಆಸ್ತಿ ಎಂದು ಉಲ್ಲೇಖಿತ ಪಹಣಿ ಪತ್ರ ನೋಡಿ ಬಸವಪ್ರಭು ಜೊಲ್ಲೆ ದಂಗಾಗಿದ್ದಾರೆ. ಇನ್ನು, ವಕ್ಫ್ ಆಸ್ತಿಗೆ ಸಂಬಂಧಿಸಿದಂತೆ ಈವರೆಗೆ ವಕ್ಫ್ ಬೋರ್ಡ್‌ನಿಂದ ಬಸವಪ್ರಭು ಅವರಿಗೆ ಯಾವುದೇ ನೋಟಿಸ್ ಜಾರಿಯಾಗಿಲ್ಲ.



ಮಾಜಿ ಸಚಿವೆ ಶಶಿಕಲಾ ಜೊಲ್ಲೆ ತಮ್ಮ ಪುತ್ರನ ಆಸ್ತಿಯ ಪಹಣಿಯಲ್ಲಿ ವಕ್ಫ್ ಎಂದು ದಾಖಲಾಗಿರುವುದನ್ನು ತೋರಿಸಿದರು.

ಶಶಿಕಲಾ ಜೊಲ್ಲೆ ಅವರು ತಾವು ಸಚಿವೆಯಾಗಿದ್ದ ಸಮಯದಲ್ಲೇ ತಮ್ಮ ಪುತ್ರನ ಜಮೀನಿನ ಪಹಣಿಯಲ್ಲಿ ವಕ್ಫ್ ಆಸ್ತಿ ಎಂದು ನಮೂದು ಆಗಿದ್ದು ವಿಪರ್ಯಾಸವಾಗಿದೆ. ಅಲ್ಲದೇ, ಇವರ ಅವಧಿಯಲ್ಲಿ ಅನೇಕ ರೈತರ ಜಮೀನಿನ ಪಹಣಿಯಲ್ಲಿ ವಕ್ಫ್ ಆಸ್ತಿ ಅಂತ ನಮೂದು ಮಾಡಲಾಗಿದೆ.

ಶಾಸಕಿ ಶಶಿಕಲಾ ಜೊಲ್ಲೆ ಅವರು 2021 ರಿಂದ 2023ವರೆಗೂ ಬಿಜೆಪಿ ಸರ್ಕಾರದಲ್ಲಿ ಹಜ್ ಮತ್ತು ವಕ್ಫ್ ಬೋರ್ಡ್ ಸಚಿವರಾಗಿದ್ದರು. ಇವರ ಅವಧಿಯಲ್ಲಿ, ಅಂದರೆ 2021ರಲ್ಲಿ ಕೊಪ್ಪಳ ಜಿಲ್ಲೆಯ ಕೊಪ್ಪಳ ತಾಲೂಕಿನ ಕವಲೂರು, ಹೂವಿನಾಳ ಕುಕನೂರು, ಯಲಬುರ್ಗಾ ತಾಲೂಕಿನ ಹಲವು ರೈತರ ಜಮೀನು ಪಹಣಿಯ ಕಾಲಂ 11ರಲ್ಲಿ ವಕ್ಫ್ ಬೋರ್ಡ್ ಅಂತ ಹೆಸರು ನಮೂದಾಗಿದೆ. ಅದು ಕೂಡ ರೈತರಿಗೆ ನೋಟಿಸ್ ನೀಡದೆ ಪಹಣಿಯಲ್ಲಿ ವಕ್ಫ್ ಆಸ್ತಿ ಎಂದು ನಮೂದಾಗಿದೆ. ಬಳಿಕ, ವಕ್ಫ್ ಬೋರ್ಡ್ 2023ರಲ್ಲಿ ಅನೇಕ ರೈತರಿಗೆ ನೋಟಿಸ್ ನೀಡಿದ್ದು, ತಮ್ಮ ಮೂಲ ದಾಖಲೆಗಳನ್ನು ಹಾಜರುಪಡಿಸುವಂತೆ ಹೇಳಿದೆ.

# ಯೋಗೇಶ್ವರ್‌ಗೆ ಚನ್ನಪಟ್ಟಣದಲ್ಲಿ ಬೆಂಬಲ ಹೆಚ್ಚು: ಡಿ.ಕೆ.ಸುರೇಶ್



**ಚನ್ನಪಟ್ಟಣ, ನ.7–** "ಚನ್ನಪಟ್ಟಣದ ಜನ ಬಹಳ ಉತ್ಸಾಹದಿಂದ ಯೋಗೇಶ್ವರ್‌ಗೆ ಬೆಂಬಲ ನೀಡುತ್ತಿದ್ದಾರೆ" ಎಂದು ಮಾಜಿ ಸಂಸದ ಡಿ.ಕೆ.ಸುರೇಶ್ ವಿಶ್ವಾಸ ವ್ಯಕ್ತಪಡಿಸಿದರು.

ಚನ್ನಪಟ್ಟಣ ವಿಧಾನ ಸಭಾ ಕ್ಷೇತ್ರದ ಉಪಚುನಾವಣೆ ಕಾಂಗ್ರೆಸ್ ಅಭ್ಯರ್ಥಿ ಪರ ಗುರುವಾರ ಡಿ.ಕೆ. ಸುರೇಶ್ ಪ್ರಚಾರ ನಡೆಸಿದರು. ಈ ವೇಳೆ ಮಾಧ್ಯಮಗಳ ಜತೆ ಮಾತನಾ ಡಿದ ಅವರು, "ಕುಮಾರಸ್ವಾಮಿ ಅವರ ಕಾಲದಲ್ಲಿ ಅಭಿವೃದ್ಧಿ ಕುಂಠಿತ, ಜನಗಳಿಗೆ ಸ್ಪಂದಿಸದೆ ಇರುವುದನ್ನು ಗಮನದಲ್ಲಿಟ್ಟುಕೊಂಡು ಚನ್ನಪಟ್ಟಣ ಕ್ಷೇತ್ರದ ಜನ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ. ಯೋಗೇಶ್ವರ್ ಅವರಿಗೆ ಬಹಳ ಉತ್ಸಾಹದಿಂದ ಬೆಂಬಲ ನೀಡುತ್ತಿದ್ದಾರೆ" ಎಂದು ತಿಳಿಸಿದರು.

"ಯೋಗೇಶ್ವರ್ ಅವರು ಕೆರೆಗಳಿಗೆ ನೀರು ತುಂಬಿಸಿ ಅವರ ಬದುಕು ಬದಲಾವಣೆ ಮಾಡುವ ಪ್ರಯತ್ನ ಮಾಡಿದ್ದ ಕಾರಣಕ್ಕೆ ಅವರಿಗೆ ಮತ್ತೊಂದು ಅವಕಾಶ ನೀಡಲು ಮುಂದಾಗಿದ್ದಾರೆ". ಸರ್ಕಾರದ ಹಗರಣಗಳ ವಿರುದ್ಧ ಹೋರಾಟ ಎಂದು ವಿರೋಧ ಪಕ್ಷಗಳ ಆರೋಪದ ಬಗ್ಗೆ ಕೇಳಿದಾಗ, "ಕುಮಾರಸ್ವಾಮಿ ಹಾಗೂ ಬಿಜೆಪಿ ಅವರ ಕಾಲದಲ್ಲಿ ಆಗಿರುವ ಹಗರಣಗಳನ್ನು ಮುಚ್ಚಿಕೊಳ್ಳಲು ಕಾಂಗ್ರೆಸ್ ಸರ್ಕಾರದ ವಿರುದ್ಧ ಆರೋಪ ಮಾಡುತ್ತಿದ್ದಾರೆ.

ದೇವೇಗೌಡರು, ಕುಮಾರಸ್ವಾಮಿ, ನಿಖಿಲ್ ಕುಮಾರಸ್ವಾಮಿ ಅವರು ಕಳೆದ 7 ವರ್ಷಗಳಲ್ಲಿ ಎಂದಿಗೂ ಈ ಕ್ಷೇತ್ರದ ಜನರ ಕಷ್ಟ ಕೇಳಲು ಬಂದಿಲ್ಲ. ಈಗ ಮಗ ಹಾಗೂ ಮೊಮ್ಮಗನ ಗೆಲ್ಲಿಸಲು ಬಂದಿದ್ದಾರೆ. ಇಷ್ಟು ದಿನ ಜನರ ಕಷ್ಟ ಕೇಳಲು ಅವರು ಹಳ್ಳಿಗೆ ಹೋಗಿಲ್ಲ. ಅವರು ಎಂದಾದರೂ ಜನರ ಕಷ್ಟ ಕೇಳಲು ಹೋಗಿದ್ದರೆ, ಮಾಧ್ಯಮಗಳು ಅದರ ಬಗ್ಗೆ ಮಾಹಿತಿ ನೀಡಲಿ. ಅವರು ಮುಖ್ಯಮಂತ್ರಿ ಆಗಿದ್ದಾಗ ಕ್ಷೇತ್ರದ ಅಭಿವೃದ್ಧಿಗೆ ಎಷ್ಟು ಸಭೆ ಮಾಡಿದ್ದಾರೆ ಎಂದು ಮಾಹಿತಿ ನೀಡಲಿ" ಎಂದು ತಿಳಿಸಿದರು.

# ಹೋಟೆಲ್ ಸಂಘದ ಅಧ್ಯಕ್ಷ ನರಸಿಂಹ ಮೆಂಡನ್‌ಗೆ ಸನ್ಮಾನ



ಕಲಬುರಗಿ: ಜಿಲ್ಲಾ ಹೋಟೆಲ್ ವಸತಿ ಮತ್ತು ಬೇಕರಿ ಮಾಲಕ ರ ಅಸೋಸಿಯೇಷನ್ ಗೆ ನೂತನ ಅಧ್ಯಕ್ಷರಾಗಿ ಆಯ್ಕೆ ಹೊಂದಿದ ಹೋಟೆಲ್ ಉದ್ಯಮಿ ನರಸಿಂಹ ಮೆಂಡನ್ ಅವರಿಗೆ ಅಶೋಕ್ ಬಡದಾಳ ಗುತ್ತೇದಾರ್ ಮತ್ತು ರಾಘವೇಂದ್ರ ಮೈಲಾಪುರ್ ಸನ್ಮಾನಿಸಿದರು.

ಕಲಬುರಗಿಯ ಯಾತ್ರಿಕ್ ನಿವಾಸ ಸಭಾಂಗಣದಲ್ಲಿ ಇತ್ತೀಚೆಗೆ ಸನ್ಮಾನ ನೆರವೇರಿಸಿ ಶಾಲು ಹ'ೂಗ'ುಚ್ಛದ'ೂಂದಿಗ' ಅಭಿನಂದಿಸಲಾಯಿತು. ಕಲ್ಬುರ್ಗಿ ಜಿಲ್ಲೆಯ ಹೋಟೆಲ್ ವಸತಿ ಮತ್ತು ಬೇಕರಿ ಉದ್ಯಮದ ಬೆಳವಣಿಗೆಗೆ ಅಸೋಸಿಯೇಷನ್ ಉತ್ತಮ ಕೆಲಸ ಕಾರ್ಯಗಳನ್ನು ಮಾಡಿ ಕಲಬುರಾಗಿ ಜಿಲ್ಲೆ ಹೆಸರು ಗಳಿಸಲಿ ಎಂದು ಅಶೋಕ್ ಗುತ್ತೇದಾರ್ ಬಡದಾಳ ಶುಭಕೋರಿದರು. ಜಿಲ್ಲಾ ಅಸೋಸಿಯೇಷನ್ ಎಲ್ಲಾ ಕಾರ್ಯ ಚಟುವಟಿಕೆಗಳಿಗೆ ಪೂರ್ಣ ಬೆಂಬಲದೊಂದಿಗೆ ಸಹಕರಿಸುವುದಾಗಿ ರಾಘವೇಂದ್ರ ಮೈಲಾಪುರ ಹೇಳಿದರು. ಈ ಸಂದರ್ಭದಲ್ಲಿ ಆಕಾಶವಾಣಿ ನಿವೃತ್ತ ಹಿರಿಯ ಕಾರ್ಯಕ್ರಮ ನಿರ್ವಹಣಾಧಿಕಾರಿ ಡಾ. ಸದಾನಂದ ಪೆರ್ಲ, ಹೋಟೆಲ್ ಅಸೋಸಿಯೇಷನ್ ಖಜಾಂಚಿ ಸುನಿಲ್ ಶೆಟ್ಟಿ ನರೇಂದ್ರ ಮೋದಿ ವಿಚಾರ ಮಂಚ್‌ನ ರಾಜ್ಯಾಧ್ಯಕ್ಷರಾದ ಶಿವರಾಜ್ ಕೋಟ್ಯಾನ್, ಬೇಕರಿ ಉದ್ಯಮಿ ಮೊಯಿನುದ್ದೀನ್ ಉಪಸ್ಥಿತರಿದ್ದರು.

# ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವೇ ಚಾಲ್ತಿಯಲ್ಲಿ: ಲಕ್ಷ್ಮಣ್ ಸವದಿ

**ಹುಬ್ಬಳ್ಳಿ, ನ.7–** ಒಬ್ಬರಲ್ಲ, ಇಬ್ಬರಲ್ಲ, ಬಿಜೆಪಿಯಿಂದ ಕಾಂಗ್ರೆಸ್‌ಗೆ ಬಹಳ ಜನ ಬರುತ್ತಾರೆ. ಕರ್ನಾಟಕದಲ್ಲಿ ಬಿಜೆಪಿ ನಶಿಸಿ ಹೋಗಲಿದೆ ಎಂದು ಶಾಸಕ ಹಾಗೂ ಮಾಜಿ ಉಪ ಮುಖ್ಯಮಂತ್ರಿ ಲಕ್ಷ್ಮಣ್ ಸವದಿ ಹೇಳಿದರು.

ಮಾಧ್ಯಮಗಳೊಂದಿಗೆ ಲಕ್ಷ್ಮಣ್ ಸವದಿ ಅವರು, ಬಿಜೆಪಿಯಿಂದ ಬಹಳ ಜನ ಬರ್ತಾರೆ. ಆದರೆ, ಅವರಿಗೆ ಜಾಗ ಕಲ್ಪಿಸೋದು ಕಷ್ಟವಾಗುತ್ತಿದ್ದು, ಯಾವ ಯಾವ ಕ್ಷೇತ್ರ ನೋಡಿಕೊಂಡು ನಾವು ಬಿಜೆಪಿಯರವರನ್ನು ಕರೆದುಕೊಳ್ಳಬೇಕೆಂದ ಅವರು ಬಿಜೆಪಿಯೊಂದು ಆರು ಬಾಗಿಲಾಗಿದೆ.ಮನೆಯೊಂದು ಮೂರು ಬಾಗಿಲಲ್ಲ, ಆರು ಬಾಗಿಲಾಗಿದೆ. ಬಿಜೆಪಿಯಲ್ಲಿ ಹೇಳೋರಿಲ್ಲ ಕೇಳೋರಿಲ್ಲ, ಅವರು ಕಾಂಗ್ರೆಸ್ ಸರ್ಕಾರ ರಚನೆಯಾದ ದಿನದಿಂದ ಸರ್ಕಾರ ಬೀಳತ್ತೆ ಅಂತಾ ಹೇಳುತ್ತಿದಾರೆ. ಆದರೆ, ಇನ್ನು ಮೂರು ವರ್ಷ ಅದನ್ನೆ ಹೇಳ್ತಾರೆ. ನಂತರ ಐದು ವರ್ಷ ಅದನ್ನೆ ಹೇಳ್ತಾರೆ. ಪರೋಕ್ಷವಾಗಿ ಮುಂದಿನ ಬಾರಿಯೂ ನಮ್ಮದೇ ಸರ್ಕಾರ ಎಂದು ಮಾಜಿ ಉಪ ಮುಖ್ಯಮಂತ್ರಿ ಲಕ್ಷ್ಮಣ್ ಸವದಿ ಅವರು ಹೇಳಿದರು.

ವಕ್ಫ್ ವಿವಾದ ಬಿಜೆಪಿ ಸೃಷ್ಟಿ. ನಮ್ಮ ಸರ್ಕಾರ ರೈತರನ್ನು ರಕ್ಷಿಸಲು ಬದ್ಧವಾಗಿದ್ದು, ಯಾರನ್ನೂ ಒಕ್ಕಲೆಬ್ಬಿಸುವುದಿಲ್ಲ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು. ಚುನಾವಣೆ ಹಿನ್ನಲೆಯಲ್ಲಿ ಬಿಜೆಪಿ ಈ ವಿವಾದ ಸೃಷ್ಟಿಸಿದೆ. ರಾಜ್ಯದ ಆಸ್ತಿ ರಾಜ್ಯಕ್ಕೆ ಸಂಬಂಧಿಸಿದ ವಿಚಾರ. ವಕ್ಫ್ ಆಸ್ತಿ ವಿಚಾರವಾಗಿ ಧಾರವಾಡ ಸೇರಿದಂತೆ ಬೇರೆ ಜಿಲ್ಲೆಗಳಲ್ಲಿ 2019ರಿಂದ ಮೊದಲು ನೋಟೀಸ್ ಕೊಟ್ಟಿದ್ದು ಬಿಜೆಪಿ. ಈಗ ನಮ್ಮ ಮೇಲೆ ಆರೋಪ ಮಾಡುತ್ತಿದ್ದಾರೆ. ನಾವು ಆಗಿರುವ ತಪ್ಪುಗಳನ್ನು ಸರಿಪಡಿಸಿ ರೈತರನ್ನು ರಕ್ಷಣೆ ಮಾಡುತ್ತೇವೆ. ಈ ವಿಚಾರವಾಗಿ ನಮ್ಮ ಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರು ಸ್ಪಷ್ಟನೆ ನೀಡಿದ್ದಾರೆ. ಜೆಪಿಸಿ ರಾಜ್ಯದ ವಿಚಾರಕ್ಕೆ ಭೇಟಿ ನೀಡುವ ಅಧಿಕಾರವಿಲ್ಲ. ಕೇವಲ ರಾಜಕೀಯ ಉದ್ದೇಶದಿಂದ ಭೇಟಿ ನೀಡುತ್ತಿದ್ದಾರೆ. ಈ ಸಮಿತಿಗೆ ಅಧಿಕೃತ ಮಾನ್ಯತೆ ಇಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ತಿಳಿಸಿದರು.



ಮಹಾರಾಷ್ಟ್ರ ಹಾಗೂ ರಾಜ್ಯದ ಉಪ ಚುನಾವಣೆ ಸಮಯದಲ್ಲಿ ಅನಗತ್ಯ ಗೊಂದಲ ಸೃಷ್ಟಿ ಮಾಡುತ್ತಿದ್ದಾರೆ. ಜನ ಬಹಳ ಬುದ್ಧಿವಂತರು ಅವರಿಗೆ ಜನ ತಕ್ಕ ರೀತಿ ಪಾಠ ಕಲಿಸಲಿದ್ದಾರೆ. ನಾವು ದಾಖಲೆಗಳಲ್ಲಿ ಆಗಿರುವ ತಪ್ಪುಗಳನ್ನು ಸರಿಪಡಿಸಿ ರೈತರನ್ನು ರಕ್ಷಣೆ ಮಾಡುತ್ತೇವೆ. ಈ ವಿಚಾರವಾಗಿ ನಮ್ಮ ಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರು ಸ್ಪಷ್ಟನೆ ನೀಡಿದ್ದಾರೆ ಎಂದರು.ಜೆಪಿಸಿ ರಾಜ್ಯದ ವಿಚಾರಕ್ಕೆ ಭೇಟಿ ನೀಡುವ ಅಧಿಕಾರವಿಲ್ಲ. ಜೆಸಿಪಿ ರಾಜ್ಯಕ್ಕೆ ಭೇಟಿ ನೀಡುವುದಾದರೆ ಸರ್ಕಾರ ಹಾಗೂ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು. ಇಡೀ ಸಮಿತಿ ತಂಡ ಭೇಟಿ ನೀಡಬೇಕು. ಅವರು ಸಂಸದರಾದ ಬೊಮ್ಮಾಯಿ ಹಾಗೂ ಸಚಿವ ಸೋಮಣ್ಣ ಅವರ ಜತೆ ಬಂದಿದ್ದಾರೆ. ಇವರಿಬ್ಬರು ಜೆಪಿಸಿ ಸದಸ್ಯರೇ? ಭೇಟಿ ನೀಡಿರುವವರು ಕೇವಲ ಬಿಜೆಪಿ ಸದಸ್ಯರು ಮಾತ್ರ, ರಾಜಕೀಯ ಉದ್ದೇಶದಿಂದ ಭೇಟಿ ನೀಡುತ್ತಿದ್ದಾರೆ. ಈ ಸಮಿತಿಗೆ ಅಧಿಕೃತ ಮಾನ್ಯತೆ ಇಲ್ಲ. ಅವರು ಏನಾದರೂ ರಾಜಕೀಯ ಮಾಡಲಿ. ಸತ್ಯಾಂಶವೇ ಬೇರೆ ಎಂದು ತಿಳಿಸಿದರು.

# ಕೊಡಗಿನಲ್ಲಿಯೂ ವಕ್ಫ್ ಆಸ್ತಿ ಅತಿಕ್ರಮ ಎಂದು ಬೆದರಿಕೆ

**ಮಡಿಕೇರಿ, ನ.7–** ಉತ್ತರ ಕರ್ನಾಟಕ ಭಾಗದಲ್ಲಿ ವಕ್ಫ್ ಆಸ್ತಿ ವಿವಾದ ಮುನ್ನೆಲೆಯಲ್ಲಿ ಇರುವಾಗಲೇ ಇದೀಗ ಕೊಡಗಿನಲ್ಲಿಯೂ ವಕ್ಫ್ ಆಸ್ತಿ ಅತಿಕ್ರಮ ಎಂದು ಬೆದರಿಕೆ ಹಾಕಿರುವ ಪ್ರಕರಣ ಬೆಳಕಿಗೆ ಬಂದಿದೆ. ಕೊಡವ ಮಹಿಳೆಯೊಬ್ಬರ ಮನೆಯ ಆವರಣಕ್ಕೆ ಪ್ರವೇಶಿಸಿ ನೀವು ವಕ್ಫ್ ಆಸ್ತಿಯನ್ನು ಅತಿಕ್ರಮಿಸಿ ಕೊಂಡು ಮನೆ ಕಟ್ಟಿದ್ದೀರ, ಕೂಡಲೇ ತೆರವುಗೊಳಿಸಿ ಎಂದು ಬೆದರಿಕೆ ಒಡ್ಡಿದ ಘಟನೆ ಕೊಡಗು ಜಿಲ್ಲೆಯ ಕುಶಾಲನಗರದಲ್ಲಿ ನಡೆದಿದೆ.

ಈ ಕುರಿತು ಕೊಡಗು ಜಿಲ್ಲಾ ಪೋಲೀಸ್ ಅಧಿಕಾರಿಯವರಿಗೆ ದೂರು ನೀಡಿರುವ ಪುಚ್ಚಿಮಾಡ ರೇಣುಕಾ ಉತ್ತಪ್ಪ ಅವರು ತಾವು ತಮ್ಮ ಕುಶಾಲನಗರದ ಮುಳ್ಳುಸೋಗೆಯಲ್ಲಿ ಮನೆಯಲ್ಲಿ ಒಬ್ಬರೇ ಇರುವಾಗ ಇಬ್ಬರು ಬಂದು ಬೆದರಿಕೆ ಒಡ್ಡಿದ್ದಾರೆ ಎಂದು ಆರೋಪಿಸಿದ್ದಾರೆ. ಮಹಿಳೆ ನೀಡಿರುವ ದೂರಿನ ಸಂಪೂರ್ಣ ಸಾರಾಂಶ ಈ ಕೆಳಗಿನಂತಿದೆ. ತಾವು ಬೆಂಗಳೂರಿನಲ್ಲಿ ಖಾಸಗಿ ಕಂಪೆನಿಯಲ್ಲಿ ಉದ್ಯೋಗ ದಲ್ಲಿದ್ದು ಮುಳ್ಳುಸೋಗೆಯಲ್ಲಿ ಪಿತ್ರಾರ್ಜಿತ ಮನೆ ಹೊಂದಿದ್ದಾರೆ. ದಿನಾಂಕ 25.10.2024 ರಂದು ಬೆಳಿಗ್ಗೆ 11 ಗಂಟೆಗೆ, ತಾವೊಬ್ಬರೇ ಮನೆಯಲ್ಲಿ ಇರುವಾಗ ಅನ್ಯ ಸಮುದಾಯಕ್ಕೆ ಸೇರಿದ ಇಬ್ಬರು ವ್ಯಕ್ತಿಗಳು ಮನೆಯ ಆವರಣಕ್ಕೆ ಪ್ರವೇಶಿಸಿ ಇದು ವಕ್ಫ್ ಆಸ್ತಿ ಆಗಿದ್ದು ಮನೆಯನ್ನು ತಕ್ಷಣವೇ ತೆರವುಗೊಳಿಸಿ ವಕ್ಫ್ ಗೆ ಒಪ್ಪಿಸುವಂತೆ ಬೆದರಿಸಿದರು. ಆಗ ನಾನು ನನ್ನ ತಂದೆ 1984 ರಲ್ಲಿ ಮುಳ್ಳುಸೋಗೆ ಯಲ್ಲಿ ಸರ್ವೆ ನಂಬರ್ 79/2 ರಲ್ಲಿ 36 ಸೆಂಟ್ಸ್ ಜಮೀನನ್ನು ಮಾನ್ಯಪಂಡ ಬೋಪಣ್ಣ ಎಂಬುವ ವರಿಂದ ಖರೀದಿಸಿದ್ದು ಅಂದಿನಿಂದ ನಾವು ಹೇಳಿದ ಆಸ್ತಿಯಲ್ಲಿ ವಾಸಿಸುತ್ತಿದ್ದೇವೆ. ಇತ್ತೀ ಚೆಗೆ ನನ್ನ ಪೋಷಕರು ನಿಧನರಾದರು. ನಾನು ಹೇಳಿದ ಆಸ್ತಿಯನ್ನು ಪಿತ್ರಾರ್ಜಿತವಾಗಿ ಪಡೆದಿದ್ದೇನೆ. ಏಕೆ ತೆರವುಗೊಳಿಸಬೇಕು. ನಿಮ್ಮ ಬಳಿ ಯಾವುದಾದರೂ ನ್ಯಾಯಾಲಯದ ನೋಟೀಸ್ ಅಥವಾ ವಕ್ಫ್‌ಗೆ ಸೇರಿರುವುದಕ್ಕೆ ದಾಖಲೆ ಕೊಡಿ ಎಂದು ಪ್ರಶ್ನಿಸಿದೆ. ಆಗ ಅವರು ನೀವು ಮನೆ ಖಾಲಿ ಮಾಡದಿದ್ದರೆ ಹೊರಗೆ 15 ಜನರು ಇದ್ದಾರೆ ಅವರನ್ನು ಕರೆಯುವುದಾಗಿಯೂ ಮತ್ತು ಹೆಚ್ಚಿನ ಜನರನ್ನು ಕರೆತರುವುದಾಗಿಯೂ ಬೆದರಿಸಿದರು ಎಂದು ತಿಳಿಸಿದ್ದಾರೆ.

# ಸಂಡೂರಿನ ಅಭಿವೃದ್ಧಿಗಾಗಿ ಅನ್ನಪೂರ್ಣರನ್ನು ಬಹುಮತದಿಂದ ಆರಿಸಿ; ಜಿ.ಸಿ.ಚಂದ್ರಶೇಖರ್

**ಸಂಡೂರು ನ.7–** ಸಂಡೂರು ಸಂರಕ್ಷಣೆಯ ಚುನಾವಣೆ ಇದಾಗಿದೆ, ಈ ಹಿಂದೆ ಭೂಮಿಗಾಗಿ ಯಾವ ರೀತಿ ದುರಾಡಳಿತ ನಡೆಸಿದರು ಎನ್ನುವುದು ತಿಳಿದಿದೆ, ಅ ದುರಾಡಳಿತ ವಿರುದ್ದ ಚುನಾವಣೆಯನ್ನು ಕಾಂಗ್ರೆಸ್ ಪಕ್ಷ ಮಾಡುತ್ತದೆ ಎಂದು ಕಾಂಗ್ರೆಸ್ ರಾಜ್ಯ ಕಾರ್ಯಾಧ್ಯಕ್ಷರಾಗಿ ಜಿ.ಸಿ. ಚಂದ್ರಶೇಖರ್ ತಿಳಿಸಿದರು.

ಅವರು ಪಟ್ಟಣದ ಕಛೇರಿಯಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ ಇತ್ತೀಚೆಗೆ ನ್ಯಾಯಾಲಯದ ಅದೇಶ ಸಿಕ್ಕ ತಕ್ಷಣವೆ ಇಲ್ಲಿಗೆ ಬಂದು ತಮ್ಮನೆಲೆಯನ್ನು ಕಂಡುಕೊಳ್ಳುವ ಬಹುದೊಡ್ಡ ಪ್ರಯತ್ನ ನಡೆಯುತ್ತಿದೆ ವಿರೋಧ ಪಕ್ಷದಿಂದ, ನ್ಯಾಯಾಲಯದ ಕಟ್ಟಪ್ಪಣೆಯಿಂದ ಜಿಲ್ಲೆಯಿಂದ ಹೊರಗಿದ್ದವರು ಇಂದು ಇಲ್ಲಿಗೆ ಪ್ರವೇಶವಾಗುತ್ತಿದೆ ಅವರನ್ನು ಕಾನೂನು ಹೊರಗಿಟ್ಟಿತ್ತು. ಬಳ್ಳಾರಿಯ ಸಂಡೂರಿನ ಜನತೆಗೆ ಗೊತ್ತಿದೆ ದೇಶದಲ್ಲಿಯೇ ಕುಖ್ಯಾತಿಗೆ ಒಳಗಾಗಿ ತಮ್ಮ ಸ್ವಾರ್ಥಕ್ಕೆ ಬಳಸಿಕೊಂಡು, ಇಡೀ ಬಳ್ಳಾರಿ ಜಿಲ್ಲೆಯ ಜನತೆಗೆ ತಿಳಿದಿದೆ, ಎಲ್ಲಾ ಪಕ್ಷದಲ್ಲಿ ಸಚ್ಚಾರಿತ್ರ್ಯ ಇಲ್ಲ, 4 ಬಾರಿ ಆಯ್ಕೆಯಾದ ಸಜ್ಜನ ರಾಜಕಾರಣಿ ತುಕರಾಂ, ಅವರು ಜನತೆಯ ಮನಸ್ಸನ್ನು ಗೆದ್ದಿದ್ದಾರೆ, ಅಲ್ಲದೆ ಸಂತೋಷ್ ಲಾಡ್ ಅವರ ಕ್ಷೇತ್ರವಾಗಿದೆ, ಅದ್ದರಿಂದ ಬಿಜೆಪಿ ಒಡೆದ ಮನೆಯಾಗಿದೆ, ಯತ್ನಾಳ್, ರಮೇಶ್ ಜಾರಕಿ ಹೊಳಿಯ ವರು ಅಧ್ಯಕ್ಷರನ್ನು ತೆಗೆದು ಹಾಕುವವ ರೆಗೂ ನಾವು ಚುನಾವಣೆಗೆ ಬರುವುದಿಲ್ಲ ಎಂದು ಘಂಟಾಘೋಷವಾಗಿ ಹೇಳುತ್ತಿದೆ, ಬಿಜೆಪಿ ಅಶಿಸ್ತಿನಿಂದ ತಾಂಡವ ವಾಡುತ್ತಿದೆ, ಬಿಜೆಪಿಯಲ್ಲಿ ನಾಯಕತ್ವ ಇಲ್ಲವಾಗಿದೆ, ಅದೆ ಯಡೆಯೂರಪ್ಪ ಅವರಿದ್ದಾಗ ಮಾತ ನಾಡುತ್ತಿದ್ದಾರಾ. ಅದರೆ ಇಂದು ರಾಜ್ಯಾ ಧ್ಯಕ್ಷ ಪರ ನಾಲ್ಕು ಜನ ಎಂ.ಎಲ್.ಎ ಸಹ ಇಲ್ಲವಾಗಿದ್ದಾರೆ, ಪಕ್ಷದ ಶಿಸ್ತು ಕಮಿಟಿ ಇಲ್ಲವಾಗಿದೆ, ಅವರದೇ ಪಕ್ಷದ ಅಧ್ಯಕ್ಷರ ಮೇಲೆ ದಾಳಿಮಾಡುತ್ತಿರುವವರು ಅವ ರದೇ ಪಕ್ಷದವರು ಅವರಿಗೆ ಯಾವ ನೈತಿಕತೆ ಇದೆ, ಅದರೆ ಕಾಂಗ್ರೆಸ್ ಪಕ್ಷದಲ್ಲಿ ಬಲಿಷ್ಠಮತ್ತು ದೊಡ್ಡ ನಾಯಕರಾದ ಸಿದ್ದರಾ ಮಯ್ಯ, ಡಿ.ಕೆ. ಶಿವಕುಮಾರ್ ನಾಯಕತ್ವದಲ್ಲಿ ಇದೆ, ಸಾಕಷ್ಟು ನಾಯಕರೂ ಸಹ ಇದ್ದಾರೆ.



ಎ.ಐ.ಸಿ.ಸಿ. ನಿರ್ದೇಶನ ಮೀರಿ ಯಾರು ನಡೆಯುವಂತಿಲ್ಲ, ಅದನ್ನು ತಡೆದಿದ್ದೇವೆ, ಅದರೆ ಬಿಜೆಪಿ ತನ್ನ ಶಿಸ್ತನ್ನು ಕಳೆದುಕೊಳ್ಳುತ್ತಿದೆ, ಎಲ್ಲಿಕೂಡಾ ರಾಜ್ಯಾಧ್ಯ ಕ್ಷರು ಬಂದಾಗ ಜನರೇ ಇಲ್ಲದ್ದನ್ನು ಕಾಣುತಿತ್ತು ಸಂಡೂರಿನಲ್ಲಿ ಬಿಜೆಪಿಯವರು ಮತ ಕೇಳಲು ನೈತಿಕತೆ ಇಲ್ಲ ಎಂದು ಅರೋಪಿಸಿದರು.

ಅಲ್ಲದೆ ಮೂರು ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷ ಗೆಲ್ಲುವುದರಲ್ಲಿ ಯಾವುದೇ ಅನು ಮಾನ ಬೇಡ, ಸಿದ್ದರಾಮಯ್ಯನವರ ಬಲಿಷ್ಠ ನಾಯಕತ್ವದಲ್ಲಿ ಎಲ್ಲಾ ಸಚಿವರನ್ನು ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿ ಪ್ರಚಾರಕ್ಕೆ, ಶಾಸಕರನ್ನು ತಾಲೂಕು ಪಂಚಾಯಿತಿ ವ್ಯಾಪ್ತಿಗೆ ನಿಗದಿಪಡಿಸಿದ್ದೇವೆ, ಇಂದು ಸಕ್ರಿಯವಾಗಿ ಹೇಗೆ ಕಾಂಗ್ರೆಸ್ ಪಕ್ಷ ಮಾಡುತ್ತಿದೆ ಎಂಬುದನ್ನು ಪರಿಶೀಲನೆ ಮಾಡುವ ಮೂಲಕ ಪಕ್ಷವನ್ನು ಗೆಲ್ಲಿಸಿಯೇ ಗೆಲ್ಲಿಸು ತೇವೆ. ಪ್ರತಿ ಕ್ಷೇತ್ರಕ್ಕೂ ಸ್ಕಯಡ್ ತಂಡವನ್ನು ರಚಿಸಿ ಪ್ರಚಾರ ನಡೆಸುತ್ತಿದೆ, ಪರಿಶೀಲನೆ ಮಾಡುತ್ತಿದೆ, ಕೆಪಿಸಿಸಿ ಅಧ್ಯಕ್ಷರು ಬಂದಾಗ ಯಾರು ಪ್ರಚಾರಕ್ಕೆ ಹೋಗಿಲ್ಲ ಎಂಬುದನ್ನು ಸಹ ಮಾಹಿತಿ ಇದೆ, ಕಾರಣ ಚುನಾವಣೆಯನ್ನು ಗಂಭೀರವಾಗಿ ಪರಿಗ ಣಿಸಿದ್ದೇವೆ, ಪಕ್ಷದ ನಿರ್ದೇಶನದಂತೆ ಕಾರ್ಯನಿರ್ವಹಿಸುತ್ತೇವೆ, ಎಐಸಿಸಿ ಜನರಲ್ ಕಾರ್ಯದರ್ಶಿಯಿಂದಲೂ ಸಹ ತಂತ್ರ ರಚಿಸಿ ಚುನಾವಣೆ, ವಿರೋಧ ಪಕ್ಷ ದವರನ್ನು ಸಹ ಯಾವ ರೀತಿ ಹೆದರಿಸಬೇಕು ಎನ್ನುವ ತಂತ್ರವನ್ನು ಸಹ ಮಾಡುತಿದ್ದೇವೆ, ಇದು ಬರೀ ಮಾಮೂಲಿ ಚುನಾ ವಣೆಯಲ್ಲ ಎಂದರು.

# ಮೊದಲ ಬಾರಿಗೆ ತಾಲಿಬಾನ್ ರಕ್ಷಣಾ ಸಚಿವರೊಂದಿಗೆ ಭಾರತದ ಉನ್ನತ ಅಧಿಕಾರಿ ಸಭೆ



**ಹೊಸದಿಲ್ಲಿ, ನ. 7 :** ತಾಲಿಬಾನ್ ಸಂಸ್ಥಾಪಕ ಮುಲ್ಲಾ ಒಮರ್ ಅವರ ಪುತ್ರ, ತಾಲಿಬಾನ್ ಹಂಗಾಮಿ ರಕ್ಷಣಾ ಸಚಿವ ಮೊಹಮ್ಮದ್ ಯಾಕೂಬ್ ಮುಜಾಹಿದ್ ಅವರೊಂದಿಗೆ ಭಾರತವು ತನ್ನ ಮೊದಲ ಸಭೆಯನ್ನು ಕಾಬೂಲ್‌ನಲ್ಲಿ ನಡೆಸಿತು ಮತ್ತು ತಾಲಿಬಾನ್ ಆಡಳಿತದ ಇತರ ಮಂತ್ರಿಗಳೊಂದಿಗೆ ಇಂದು ಸಭೆ ನಡೆಸಿದೆ ಎಂದು ಉನ್ನತ ಅಧಿಕಾರಿಯೊಬ್ಬರು ಇಂದು ಇಲ್ಲಿ ತಿಳಿಸಿದ್ದಾರೆ.

ಮಾಧ್ಯಮಗೋಷ್ಠಿಯಲ್ಲಿ ಪ್ರಶ್ನೆಗಳಿಗೆ ಉತ್ತರಿಸಿದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಪಾಕಿಸ್ತಾನ, ಇರಾನ್ ಮತ್ತು ಅಫ್ಘಾನ್ ಡೆಸ್ಕ್‌ನ ಉಸ್ತುವಾರಿ ವಹಿಸಿರುವ ವಿದೇಶಾಂಗ ಇಲಾಖೆ ಜಂಟಿ ಕಾರ್ಯದರ್ಶಿ ಜೆಪಿ ಸಿಂಗ್ ನೇತೃತ್ವದ ನಿಯೋಗವು ನವೆಂಬರ್ 4-5 ರಂದು ಕಾಬೂಲ್‌ಗೆ ಭೇಟಿ ನೀಡಿತ್ತು ಎಂದು ಖಚಿತಪಡಿಸಿದ್ದಾರೆ. ಅವರು ಮಂತ್ರಿಗಳೊಂದಿಗೆ ಹಲವಾರು ಸಭೆಗಳನ್ನು ನಡೆಸಿದರು ಮತ್ತು ಮಾಜಿ ಅಧ್ಯಕ್ಷ ಹಮೀದ್ ಕರ್ಜೈ ಮತ್ತು ಯುಎನ್ ಏಜೆನ್ಸಿಗಳ ಮುಖ್ಯಸ್ಥರನ್ನು ಭೇಟಿ ಮಾಡಿದರು.

ಈ ಸಭೆಯಲ್ಲಿ, ಎರಡೂ ಕಡೆಯವರು ದ್ವಿಪಕ್ಷೀಯ ಸಂಬಂಧಗಳನ್ನು ವಿಸ್ತರಿಸುವ ತಮ್ಮ ಸಾಮಾನ್ಯ ಬಯಕೆಯನ್ನು ಘೋಷಿಸಿದರು, ಮುಖ್ಯವಾಗಿ ಮಾನವೀಯ ಸಹಕಾರದ ವ್ಯಾಪ್ತಿಗಳಲ್ಲಿ, ಇತರ ವಿಷಯಗಳ ಜೊತೆಗೆ, ಮತ್ತು ಅಫ್ಘಾನಿಸ್ತಾನ ಮತ್ತು ಭಾರತದ ನಡುವಿನ ಸಂವಹನವನ್ನು ಮತ್ತಷ್ಟು ಬಲಪಡಿಸಲು ತಮ್ಮ ಆಸಕ್ತಿಯನ್ನು ವ್ಯಕ್ತಪಡಿಸಿದರು. ಕಾಬೂಲ್ ಮತ್ತು ನವದೆಹಲಿ ನಡುವಿನ ದ್ವಿಪಕ್ಷೀಯ ಆರ್ಥಿಕ ಮತ್ತು ರಾಜಕೀಯ ಸಂಬಂಧಗಳ ಕುರಿತು ಚರ್ಚಿಸಲು ಜೆಪಿ ಸಿಂಗ್ ಅವರು ಹಾಲಿ ವಿದೇಶಾಂಗ ಸಚಿವ ಅಮೀರ್ ಖಾನ್ ಮುತ್ತಕಿ ಅವರನ್ನು ಭೇಟಿಯಾದರು.

ಎಂಇಎ ವಕ್ತಾರ ರಣಧೀರ್ ಜೈಸ್ವಾಲ್ ಅವರು ಕಾಬೂಲ್‌ನಲ್ಲಿ ಜೆಪಿ ಸಿಂಗ್ ಅವರ ಸಭೆಗಳಲ್ಲಿ ಉಭಯ ಕಡೆಯವರು ಭಾರತದ ಮಾನವೀಯ ನೆರವು ಮತ್ತು ಕಾಬೂಲ್‌ನಲ್ಲಿರುವ ವ್ಯಾಪಾರ ಸಮುದಾಯವು ಇರಾನ್‌ನ ಚಬಹಾರ್ ಬಂದರನ್ನು ಹೇಗೆ ಪ್ರವೇಶಿಸಬಹುದು ಎಂಬುದರ ಕುರಿತು ಚರ್ಚೆ ನಡೆಸಿದರು, ಇದು ಮೇ ತಿಂಗಳಲ್ಲಿ ಸಹಿ ಮಾಡಿದ 10 ವರ್ಷಗಳ ಒಪ್ಪಂದದ ನಂತರ ಭಾರತವು ನಿರ್ವಹಿಸುತ್ತಿದೆ. ಈ ವರ್ಷ. ಅಫ್ಘಾನಿಸ್ತಾನದ ಜನರೊಂದಿಗೆ ಭಾರತದ ಸಹಕಾರವನ್ನು ಶ್ಲಾಘಿಸುತ್ತಾ, ಮಾಜಿ ಅಧ್ಯಕ್ಷರು ಅಫ್ಘಾನಿಸ್ತಾನದ ಯುವಕರ ಶಿಕ್ಷಣ ಮತ್ತು ತರಬೇತಿ, ವ್ಯಾಪಾರ ವಿನಿಮಯದ ಅಭಿವೃದ್ಧಿ ಮತ್ತು ಭಾರತ ಮತ್ತು ಅಫ್ಘಾನಿಸ್ತಾನದ ನಡುವಿನ ಪ್ರಯಾಣದ ಸುಲಭತೆಯ ಬಗ್ಗೆ ಆ ದೇಶದ ಹೆಚ್ಚಿನ ಗಮನವನ್ನು ಕೇಳಿದರು.

# ಟ್ರಂಪ್‌ಗೆ ಝೆಲೆನ್ಸ್ಕಿ ಅಭಿನಂದನೆ: ಅಮೆರಿಕ-ಉಕ್ರೇನ್ ಸಹಕಾರ ಸಂಬಂಧ ಬಲವರ್ಧನೆಗೆ ಚರ್ಚೆ



**ಕೈವ್, ನ.7:** ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರು ಅಮೆರಿಕದ ಚುನಾಯಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ಗುರುವಾರ ದೂರವಾಣಿ ಸಂಭಾಷಣೆ ನಡೆಸಿದರು, ಈ ಸಂದರ್ಭದಲ್ಲಿ ಅವರು ಮತ್ತಷ್ಟು ಸಹಕಾರವನ್ನು ಅಭಿವೃದ್ಧಿಪಡಿಸಲು ಒಪ್ಪಿಕೊಂಡರು. "ನಾನು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗೆ ಅತ್ಯುತ್ತಮವಾದ ಕರೆಯನ್ನು ಹೊಂದಿದ್ದೇನೆ ಮತ್ತು ಅವರ ಐತಿಹಾಸಿಕ ಭೂಕುಸಿತದ ವಿಜಯಕ್ಕಾಗಿ ಅವರನ್ನು ಅಭಿನಂದಿಸಿದ್ದೇನೆ ಅವರ ಪ್ರಚಂಡ ಅಭಿಯಾನವು ಈ ಫಲಿತಾಂಶವನ್ನು ಸಾಧ್ಯವಾಗಿಸಿದೆ.

ಉತ್ತಮ ಕೆಲಸಕ್ಕಾಗಿ ನಾನು ಅವರ ಕುಟುಂಬ ಮತ್ತು ತಂಡವನ್ನು ಶ್ಲಾಘಿಸಿದೆ. ನಾವು ನಿಕಟ ಸಂವಾದವನ್ನು ನಿರ್ವಹಿಸಲು ಮತ್ತು ನಮ್ಮ ಸಹಕಾರವನ್ನು ಮುಂದುವರಿಸಲು ಒಪ್ಪಿಕೊಂಡಿದ್ದೇವೆ. ಬಲವಾದ ಮತ್ತು ಅಚಲವಾದ ಯುಎಸ್ ನಾಯಕತ್ವವು ಜಗತ್ತಿಗೆ ಮತ್ತು ನ್ಯಾಯಯುತವಾದ ಶಾಂತಿಗೆ ಅತ್ಯಗತ್ಯ" ಎಂದು ಝೆಲೆನ್ಸ್ಕಿ ಫಿ ನಲ್ಲಿ ಬರೆದಿದ್ದಾರೆ.

ವಾಲ್ ಸ್ಟ್ರೀಟ್ ಜರ್ನಲ್ ಈ ಹಿಂದೆ ಟ್ರಂಪ್ ತಂಡವು ಉಕ್ರೇನಿಯನ್ ಸಂಘರ್ಷವನ್ನು ಫ್ರೀಜ್ ಮಾಡಲು ಹಲವಾರು ಯೋಜನೆಗಳನ್ನು ಪ್ರಸ್ತಾಪಿಸಿದೆ ಎಂದು ವರದಿ ಮಾಡಿದೆ, ಆದಾಗ್ಯೂ, ನಾಯಕ ಯಾವುದನ್ನೂ ಅನುಮೋದಿಸಲಿಲ್ಲ. ಇನ್ನೂ ಈ ಯೋಜನೆಗಳು. ಬಿಕ್ಕಟ್ಟನ್ನು ಪರಿಹರಿಸುವ ನಿಟ್ಟಿನಲ್ಲಿ ವಾಷಿಂಗ್ಟನ್ನ ವಿಧಾನವನ್ನು ಟ್ರಂಪ್ ಪದೇ ಪದೇ ಟೀಕಿಸಿದ್ದಾರೆ ಮತ್ತು ಝೆಲೆನ್ಸ್ಕಿಯ ಮೇಲೆ ಕಟ್ಟುನಿಟ್ಟನ್ನು ಹಾಕಿದ್ದಾರೆ. ಅದೇ ಸಮಯದಲ್ಲಿ, ಯುಎಸ್ ಅಧ್ಯಕ್ಷರಾಗಿ ಆಯ್ಕೆಯಾದವರು ಒಂದೇ ದಿನದಲ್ಲಿ ಉಕ್ರೇನಿಯನ್ ಸಂಘರ್ಷವನ್ನು ಪರಿಹರಿಸುವ ಭರವಸೆ ನೀಡಿದ್ದಾರೆ.





ವಿದೇಶಾಂಗ ವ್ಯವಹಾರಗಳ ಸಚಿವ ಎಸ್ ಜೈಶಂಕರ್ ಗುರುವಾರ ಸಿಡ್ನಿಯಲ್ಲಿ ಆಸ್ಟ್ರೇಲಿಯಾ ಕಂಪನಿಗಳ ಸಿಇಒಗಳು ಮತ್ತು ವ್ಯಾಪಾರ ಮುಖ್ಯಸ್ಥರೊಂದಿಗೆ ಸಭೆ ನಡೆಸಿದರು.

# ಕೆನಡಾ: ಭಾರತದ ಕಾನ್ಸುಲರ್ ಶಿಬಿರ ರದ್ದು

**ಟೊರಾಂಟೊ:** ಕೆನಡಾದ ವಿವಿಧೆಡೆ ನಡೆಸಲು ಉದ್ದೇಶಿಸಿರುವ ಕೆಲವು ಕಾನ್ಸುಲರ್ ಶಿಬಿರಗಳನ್ನು ರದ್ದುಗೊಳಿಸಿರುವುದಾಗಿ ಭಾರತದ ಕಾನ್ಸುಲೇಟ್ ಜನರಲ್ ಕಚೇರಿ ಗುರುವಾರ ಹೇಳಿದೆ. ಕಾನ್ಸುಲರ್ ಶಿಬಿರಗಳಿಗೆ ಕನಿಷ್ಠ ಭದ್ರತೆ ಒದಗಿಸಲು ಅಸಮರ್ಥರಾಗಿದ್ದೇವೆ ಎಂದು ಕೆನಡಾದ ಭದ್ರತಾ ಅಧಿಕಾರಿಗಳು ಹೇಳಿರುವುದರಿಂದ ಈ ನಿರ್ಧಾರ ತೆಗೆದುಕೊಂಡಿದೆ. ಹಿಂದೂ ಸಭಾ ಮಂದಿರ ಮತ್ತು ಭಾರತದ ದೂತವಾಸ ಕಚೇರಿಯು ಬ್ರಾಂಪ್ಟನ್ನಲ್ಲಿ ಜಂಟಿಯಾಗಿ ಆಯೋಜಿಸಿದ್ದ ಕಾನ್ಸುಲರ್ ಶಿಬಿರದ ತಾಣಕ್ಕೆ ಖಾಲಿಸ್ತಾನಿ ಪರ ಹೋರಾಟಗಾರರು ನುಗ್ಗಿ, ಅಲ್ಲಿದ್ದವರೊಂದಿಗೆ ಘರ್ಷಣೆ ನಡೆಸಿದ್ದ ಘಟನೆ ಈಚೆಗೆ ನಡೆದಿತ್ತು. ಅದರ ಬೆನ್ನಲ್ಲೇ ಈ ಬೆಳವಣಿಗೆ ನಡೆದಿದೆ. 'ಶಿಬಿರಗಳಿಗೆ ಭದ್ರತೆ ಒದಗಿಸಲು ಸಾಧ್ಯವಿಲ್ಲ ಎಂದು ಭದ್ರತಾ ಏಜೆನ್ಸಿಗಳು ತಿಳಿಸಿವೆ. ಆದ್ದರಿಂದ ನಿಗದಿತ ಶಿಬಿರಗಳನ್ನು ರದ್ದುಗೊಳಿಸಿದ್ದೇವೆ ಎಂದು ಭಾರತದ ಕಾನ್ಸುಲರ್ ಜನರಲ್ ಎಕ್ಸ್‌ನಲ್ಲಿ ಪ್ರಕಟಿಸಿದ್ದಾರೆ. ಖಾಲಿಸ್ತಾನ ಧ್ವಜಗಳನ್ನು ಹಿಡಿದಿದ್ದ ಪ್ರತಿಭಟನಕಾರರು ಹಿಂದೂ ಸಭಾ ದೇವಾಲಯದ ಆವರಣದೊಳಗೆ ನುಗ್ಗಿ, ದಾಂದಲೆ ನಡೆಸಿದ್ದ ಘಟನೆಯನ್ನು ಭಾರತ ತೀವ್ರವಾಗಿ ಖಂಡಿಸಿತ್ತು. ಕೆನಡಾ ಪ್ರಧಾನಿ ಜಸ್ಟಿನ್ ಟ್ರೂಡೊ ಅವರೂ ಈ ಘಟನೆಯನ್ನು ಖಂಡಿಸಿದ್ದರು.

# ಬೈರೂತ್ ಉಪನಗರಗಳ ಮೇಲೆ ವೈಮಾನಿಕ ದಾಳಿ




**ಬೈರೂತ್ :** ಬೈರೂತ್ನ ದಕ್ಷಿಣ ಉಪನಗರಗಳಲ್ಲಿ ಗುರುವಾರ ನಸುಕಿನಲ್ಲಿ ಭಾರಿ ವೈಮಾನಿಕ ದಾಳಿಗಳು ನಡೆದಿವೆ. ವೈಮಾನಿಕ ದಾಳಿಗೆ ತುತ್ತಾದ ಪ್ರದೇಶಗಳಲ್ಲಿ ಲೆಬನಾನ್ನ ವಿಮಾನ ನಿಲ್ದಾಣದ ಪಕ್ಕದಲ್ಲಿನ ಪ್ರಮುಖ ತಾಣವೂ ಸೇರಿದೆ. ಈ ತಾಣದ ಬಗ್ಗೆ ಹೆಚ್ಚಿನ ವಿವರಗಳನ್ನು ನೀಡದ ಇಸ್ರೇಲ್ ಸೇನೆಯು, ಅಲ್ಲಿ ಹಿಜ್ಬುಲ್ಲಾ ಉಗ್ರರು ಮಿಲಿಟರಿ ಸೌಲಭ್ಯಗಳನ್ನು ಹೊಂದಿದ್ದರು ಎಂದು ಹೇಳಿದೆ. ಅಲ್ಲದೆ, ದಾಳಿಗೂ ಮೊದಲು ಸುತ್ತಮುತ್ತಲಿನ ನಿವಾಸಿಗಳಿಗೆ ಜಾಗ ತೆರವುಗೊಳಿಸುವಂತೆ ಸೂಚನೆ ನೀಡಿತ್ತು.

ಯುದ್ಧದ ಆರಂಭದಿಂದಲೂ ತೀವ್ರ ಬಾಂಬ್ ದಾಳಿಗೆ ತುತ್ತಾಗಿರುವ ಬೇತ್ ಲಾಯಿಯಾ ಸೇರಿದಂತೆ, ಉತ್ತರ ಗಾಜಾದಲ್ಲಿ ತಿಂಗಳಿಂದ ನಡೆಯುತ್ತಿರುವ ಭೂ ದಾಳಿಯನ್ನು ಮತ್ತಷ್ಟು ವಿಸ್ತರಿಸಿರುವುದಾಗಿ ಇಸ್ರೇಲ್ ಗುರುವಾರ ಘೋಷಿಸಿದೆ. ಈ ಪ್ರದೇಶಗಳಲ್ಲಿ ಹಮಾಸ್ ಉಗ್ರರು ಮತ್ತೆ ಸಂಘಟಿತರಾಗಿದ್ದಾರೆ ಎಂದು ಅದು ಹೇಳಿದೆ. ಇಸ್ರೇಲ್ ದಾಳಿಯಿಂದ ಲೆಬನಾನ್ನಲ್ಲಿ 3,000ಕ್ಕೂ ಹೆಚ್ಚು ಜನರು ಮೃತಪಟ್ಟಿದ್ದು, ಸುಮಾರು 13,600 ಜನರು ಗಾಯಗೊಂಡಿದ್ದಾರೆ ಎಂದು ಲೆಬನಾನ್ ಆರೋಗ್ಯ ಸಚಿವಾಲಯ ವರದಿ ಮಾಡಿದೆ. ಗಾಜಾದಲ್ಲಿ ಇಸ್ರೇಲ್ ನಡೆಸುತ್ತಿರುವ ಯುದ್ಧದಿಂದ 43,000ಕ್ಕೂ ಹೆಚ್ಚು ಜನರು ಹತರಾಗಿದ್ದಾರೆ. ಕೊಲ್ಲಲ್ಪಟ್ಟವರಲ್ಲಿ ಅರ್ಧಕ್ಕಿಂತಲೂ ಹೆಚ್ಚು ಮಹಿಳೆಯರು ಮತ್ತು ಮಕ್ಕಳು ಇದ್ದಾರೆ ಎಂದು ಪ್ಯಾಲೆಸ್ಟೀನ್ ಆರೋಗ್ಯ ಅಧಿಕಾರಿಗಳು ಹೇಳಿದ್ದಾರೆ.

**ಯುದ್ಧ ವಿಮಾನ ಖರೀದಿಸಲು ಇಸ್ರೇಲ್ ಒಪ್ಪಂದ :** ಅಮೆರಿಕದ ಏರೋಸ್ಪೇಸ್ ದೈತ್ಯ ಬೋಯಿಂಗ್ನಿಂದ 25 ಸುಧಾರಿತ ಎಫ್ -15 ಯುದ್ಧ ವಿಮಾನಗಳನ್ನು ?43836 ಕೋಟಿಗೆ ಖರೀದಿಸಲು ಒಪ್ಪಂದಕ್ಕೆ ಬಂದಿರುವುದಾಗಿ ಇಸ್ರೇಲ್ ಹೇಳಿದೆ. ಒಪ್ಪಂದವು ಈ ವರ್ಷದ ಆರಂಭದಲ್ಲಿ ಅಮೆರಿಕ ಅನುಮೋದಿಸಿದ ನೆರವಿನ ಪ್ಯಾಕೇಜ್ನ ಭಾಗವಾಗಿದೆ ಎಂದು ರಕ್ಷಣಾ ಸಚಿವಾಲಯ ಹೇಳಿದೆ. ಈ ವಿಮಾನಗಳ ಪೂರೈಕೆಯು 2031ರಲ್ಲಿ ಪ್ರಾರಂಭವಾಗಲಿದೆ. ಅಲ್ಲದೆ ಹೆಚ್ಚುವರಿಯಾಗಿ 25 ವಿಮಾನಗಳನ್ನು ಖರೀದಿಸುವ ಆಯ್ಕೆಯೂ ಇದೆ ಎಂದು ಅದು ಹೇಳಿದೆ.

# ಅಧಿಕಾರ ವಹಿಸಿಕೊಂಡ ಎರಡೇ ಸೆಕೆಂಡ್‌ನಲ್ಲಿ ಸ್ಮಿತ್ ವಜಾ: ಟ್ರಂಪ್



**ವಾಷಿಂಗ್ಟನ್, ನ 07 :** ಅಮೆರಿಕದ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಎರಡೇ ಸೆಕೆಂಡುಗಳಲ್ಲಿ ವಿಶೇಷ ಸರ್ಕಾರಿ ವಕೀಲ ಜಾಕ್ ಸ್ಮಿತ್ ಅವರನ್ನು ವಜಾ ಮಾಡುವುದಾಗಿ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಬೆನ್ನಲ್ಲೇ ತಾವು ನೀಡಿರುವ ಸಂದರ್ಶನವೊಂದರಲ್ಲಿ ಅವರು ಈ ವಿಷಯ ತಿಳಿಸಿದ್ದಾರೆ.

ನಿಮ್ಮ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆಯನ್ನು ತಪ್ಪಿಸಲು ಸ್ಮಿತ್ ಅವರನ್ನು ವಜಾಗೊಳಿಸುವಿರಾ ಎಂಬ ಪ್ರಶ್ನೆಗೆ, ಅಧಿಕಾರ ವಹಿಸಿಕೊಂಡ ಎರಡೇ ಸೆಕೆಂಡುಗಳಲ್ಲಿ ಅವರನ್ನು ವಜಾಗೊಳಿಸುವೆ. ಅದು ತುಂಬಾ ಸುಲಭ ಎಂದು ಉತ್ತರಿಸಿದ್ದಾರೆ.

2020ರ ಅಮೆರಿಕದ ಅಧ್ಯಕ್ಷೀಯ ಚುನಾವಣೆಯ ಫಲಿತಾಂಶವನ್ನು ತಿರುಚಲು ಯತ್ನಿಸಿದ ಮತ್ತು ಶ್ವೇತಭವನದ ರಹಸ್ಯ ದಾಖಲೆಗಳನ್ನು ತಮ್ಮ ಖಾಸಗಿ ನಿವಾಸಕ್ಕೆ ಕೊಂಡೊಯ್ದ ಆರೋಪಗಳಡಿ ಟ್ರಂಪ್ ವಿರುದ್ಧ ಪ್ರಕರಣಗಳು ದಾಖಲಾಗಿವೆ. ಈ ಪ್ರಕರಣಗಳಲ್ಲಿ ವಿಶೇಷ ಸರ್ಕಾರಿ ವಕೀಲ ಜಾಕ್ ಸ್ಮಿತ್ ವಾದಿಸಿದ್ದರು.

ಸ್ಮಿತ್ ವಿರುದ್ಧ ಟೀಕೆ ಮಾಡುತ್ತಾ ಬಂದಿರುವ ಟ್ರಂಪ್, ಈ ಬಾರಿಯ ಚುನಾವಣೆಯಲ್ಲಿ ಗೆದ್ದು ಅಧಿಕಾರ ಸ್ವೀಕರಿಸಿದ ನಂತರ ಅವರನ್ನು ಕಿತ್ತೊಗೆಯುವೆ ಎಂದಿದ್ದರು. ಸ್ಮಿತ್ ಒಬ್ಬ ಮೋಸಗಾರ ಎಂದು ಜರೆದಿದ್ದರು. ಅಟಾರ್ನಿ ಜನರಲ್ ಮೆರಿಕ್ ಗಾರ್ಲಂಡ್ ಅವರು 2022ರಲ್ಲಿ ಸ್ಮಿತ್ ಅವರನ್ನು ವಿಶೇಷ ಸರ್ಕಾರಿ ವಕೀಲರಾಗಿ ನೇಮಕ ಮಾಡಿದ್ದರು.

## ಟ್ರಂಪ್ ಗೆದ್ದ ಬೆನ್ನಲ್ಲೇ ಎಲಾನ್ ಮಸ್ಕ್ ಮೇಲೆ ಎಲ್ಲರ ಕಣ್ಣು



ಡೊನಾಲ್ಡ್ ಟ್ರಂಪ್ ಅವರು ಅಮೆರಿಕದ ಹೊಸ ಅಧ್ಯಕ್ಷರಾಗಿ ಆಯ್ಕೆ ಆಗಿದ್ದಾರೆ. ಡೊನಾಲ್ಡ್ ಟ್ರಂಪ್ ಗೆಲುವು ಇದೀಗ ಜಾಗತಿಕ ಮಟ್ಟದಲ್ಲಿ ಕೂಡ ದೊಡ್ಡ ಸಂಚಲನ ಸೃಷ್ಟಿ ಮಾಡಿದೆ. ಒಂದು ಕಡೆ ಅಮೆರಿಕದ ಮಿತ್ರ ರಾಷ್ಟ್ರಗಳಿಗೆ ಟ್ರಂಪ್ ಗೆಲುವು ಖುಷಿ ಕೊಟ್ಟಿದ್ದರೆ, ಇನ್ನೊಂದು ಕಡೆ ಅಮೆರಿಕದ ಶತ್ರು ದೇಶಗಳಿಗೆ ಹೊಸ ಟೆನ್ಷನ್ ಶುರುವಾಗಿದೆ. ಇಷ್ಟೆಲ್ಲದರ ನಡುವೆ ಈಗ ಡೊನಾಲ್ಡ್ ಟ್ರಂಪ್ ಅವರು ಗೆದ್ದ ತಕ್ಷಣ ಎಲಾನ್ ಮಸ್ಕ್ ಮೇಲೆ ಎಲ್ಲರ ಕಣ್ಣು ನೆಟ್ಟಿದೆ! ಹಾಗಿದ್ರೆ ಟ್ರಂಪ್ ಗೆಲ್ಲುವುದಕ್ಕೂ, ಎಲಾನ್ ಮಸ್ಕ್ ಮೇಲೆ ಕಣ್ಣು ಬೀಳುವುದಕ್ಕೂ ಸಂಬಂಧ ಏನು.

# ಭಾರತದ ವಿಚಾರದಲ್ಲಿ ಮತ್ತೆ ಉದ್ಧಟತನ ಮೆರೆದ ಕೆನಡಾ : ಆಸ್ಟ್ರೇಲಿಯಾ ಟುಡೇ ಪ್ರಸಾರಕ್ಕೆ ನಿಷೇಧ



**ನವದೆಹಲಿ, ನ.07 :** ಈಗಾಗಲೇ ಭಾರತ ಮತ್ತು ಕೆನಡಾ ನಡುವಿನ ದ್ವಿಪಕ್ಷೀಯ ಸಂಬಂಧ ಹದಗೆಟ್ಟಿದ್ದು ಈ ಮಧ್ಯೆ ಮೇಲಿಂದ ಮೇಲೆ ಕೆನಡಾ ತನ್ನ ಉದ್ಧಟತನ ಮುಂದುವರೆಸಿದೆ. ಭಾರತ-ಕೆನಡಾ ನಡುವಿನ ರಾಜತಾಂತ್ರಿಕ ಬಿಕ್ಕಟ್ಟಿನ ಕುರಿತು ಭಾರತದ ವಿದೇಶಾಂಗ ಸಚಿವ ಜೈಶಂಕರ್ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ್ದನ್ನು ಪ್ರಸಾರ ಮಾಡಿದ್ದಕ್ಕೆ ಅಸ್ಟ್ರೇಲಿಯಾ ಟುಡೇಯನ್ನು ಕೆನಡಾ ನಿಷೇಧಿಸಿದೆ. ಆಸ್ಟ್ರೇಲಿಯಾದ ಸಿಡ್ನಿಯಲ್ಲಿ ಜೈಶಂಕರ್ ಮತ್ತು ಆಸ್ಟ್ರೇಲಿಯಾದ ವಿದೇಶಾಂಗ ವ್ಯವಹಾರಗಳ ಖಾತೆಯ ಸಚಿವೆ ಪೆನ್ನಿ ವಾಂಗ್ ಜಂಟಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡುವಾಗ ಎಸ್. ಜೈಶಂಕರ್, ಯಾವುದೇ ಪುರಾವೆಗಳಿಲ್ಲದೆ ಭಾರತದ ಮೇಲೆ ಕೆನಡಾ ಆರೋಪ ಮಾಡುತ್ತಿದೆ ಎಂದು ಹೇಳಿದ್ದನ್ನು ಆಸ್ಟ್ರೇಲಿಯಾ ಟುಡೇ ಪ್ರಸಾರ ಮಾಡಿತ್ತು. ಇದಾದ ಕೆಲವೇ ಗಂಟೆಗಳಲ್ಲಿ ಕೆನಡಾ ಸರ್ಕಾರ ಆಸ್ಟ್ರೇಲಿಯಾ ಟುಡೇ ಪ್ರಸಾರವನ್ನು ನಿಷೇಧಿಸಿದೆ. ಈ ಬಗ್ಗೆ ಭಾರತದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಪ್ರತಿಕ್ರಿಯಿಸಿದ್ದು, ಆಸ್ಟ್ರೇಲಿಯಾ ಟುಡೇಯನ್ನು ನಿಷೇಧಿಸಿದ ಕೆನಡಾ ನಿರ್ಧಾರ ಖಂಡನೀಯ. ವಾಕ್ ಸ್ವಾತಂತ್ರ್ಯದ ಬಗ್ಗೆ ಮಾತನಾಡುವ ಕೆನಡಾ ಕೇವಲ ಬೂಟಾಟಿಕೆ ಮಾತುಗಳನ್ನಾಡುತ್ತದೆ ಎಂದಿದ್ದಾರೆ.

# ಪ್ಯಾಲೆಸ್ತೀನ್ ಬಂಡುಕೋರರ ಕುಟುಂಬ ಸದಸ್ಯರ ಗಡೀಪಾರು: ಮಸೂದೆ ಅಂಗೀಕರಿಸಿದ ಇಸ್ರೇಲ್



**ಜೆರುಸಲೇಂ, ನ. 07 :** ತನ್ನ ಮೇಲೆ ದಾಳಿ ಮಾಡಿದ ಪ್ಯಾಲೆಸ್ಟೀನ್ ಬಂಡುಕೋರರ ಕುಟುಂಬ ಸದಸ್ಯರನ್ನು ಗಡೀಪಾರು ಮಾಡಲು ನಿರ್ಧರಿಸಿರುವ ಇಸ್ರೇಲ್, ಇದಕ್ಕಾಗಿ ಗುರುವಾರ ನೂತನ ಮಸೂದೆಯನ್ನು ಅಂಗೀಕರಿಸಿದೆ. ಪ್ಯಾಲೆಸ್ತೀನ್ ಬಂಡುಕೋರರ ಹಲವು ಕುಟುಂಬಗಳ ಸದಸ್ಯರು ಇಸ್ರೇಲ್‌ನಲ್ಲಿ ವಾಸವಿದ್ದಾರೆ. ಈ ಪೈಕಿ ಇಸ್ರೇಲ್‌ನ ಪೌರತ್ವವನ್ನು ಪಡೆದುಕೊಂಡಿರುವವರೂ ಇದ್ದಾರೆ.

ಇವರನ್ನು 7 ರಿಂದ 20 ವರ್ಷಗಳ ಅವಧಿಗೆ ಗಾಜಾ ಪಟ್ಟಿ ಅಥವಾ ಇತರ ಪ್ರದೇಶಗಳಿಗೆ ಗಡೀಪಾರು ಮಾಡಲು ನೂತನ ಮಸೂದೆಯು ಅವಕಾಶ ನೀಡುತ್ತದೆ. ಇಸ್ರೇಲ್‌ನಲ್ಲಿರುವ ಪ್ಯಾಲೆಸ್ತೀನ್ ಸದಸ್ಯರು ಹಾಗೂ ಪೂರ್ವ ಜೆರುಸಲೇಂ ಪ್ರದೇಶದಲ್ಲಿರುವ ಜನರಿಗೆ ಈ ನೀತಿ ಅನ್ವಯವಾಗಲಿದೆ. ಇಸ್ರೇಲ್ ವಶದಲ್ಲಿರುವ ವೆಸ್ಟ್ ಬ್ಯಾಂಕ್‌ನಲ್ಲಿರುವ ಜನರಿಗೆ ಈ ನೀತಿ ಅನ್ವಯವಾಗುತ್ತದೆಯೇ, ಇಲ್ಲವೇ ಎಂಬುದು ಸ್ಪಷ್ಟವಾಗಿಲ್ಲ. ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರ ಲಿಕುಡ್ ಪಕ್ಷ ಹಾಗೂ ಅದರ ಮಿತ್ರಪಕ್ಷಗಳ ಸದಸ್ಯರ ಬೆಂಬಲದೊಂದಿಗೆ 61-41 ಮತಗಳಿಂದ ಮಸೂದೆಯನ್ನು ಅಂಗೀಕರಿಸಲಾಯಿತು.

ಪ್ಯಾಲೆಸ್ತೀನ್ ದಾಳಿಕೋರರ ಕುಟುಂಬ ಸದಸ್ಯರಾಗಿರುವ ಇವರಿಗೆ ಇಸ್ರೇಲ್ ಮೇಲಿನ ದಾಳಿ ಬಗ್ಗೆ ಮೊದಲೇ ತಿಳಿದಿರುತ್ತದೆ. ಭಯೋತ್ಪಾದನೆಯಂತಹ ಕೃತ್ಯಕ್ಕೆ ಇವರು ಬೆಂಬಲ ನೀಡಿದ್ದಾರೆ ಎಂಬ ಕಾರಣದಿಂದ ಗಡೀಪಾರು ಮಾಡಲಾಗುವುದು ಎಂದು ಮಸೂದೆಯಲ್ಲಿ ಉಲ್ಲೇಖಿಸಲಾಗಿದೆ.

# ಗಾಝಾ ನಿರಾಶ್ರಿತರ ಕೇಂದ್ರದ ಮೇಲೆ ಇಸ್ರೇಲ್ ದಾಳಿ; ಕನಿಷ್ಠ 10 ಮಂದಿ ಮೃತ್ಯು



**ಜೆರುಸೆಲಂ, ನ. 07 :** ಗಾಝಾ ನಗರದ ಶತಿ ನಿರಾಶ್ರಿತರ ಕೇಂದ್ರದಲ್ಲಿರುವ ಶಾಲೆಯೊಂದರ ಮೇಲೆ ಗುರುವಾರ ಸಂಜೆ ಇಸ್ರೇಲ್ ನಡೆಸಿದ ಮಾರಣಾಂತಿಕ ವಾಯು ದಾಳಿಯಲ್ಲಿ ಕನಿಷ್ಠ 10 ಮಂದಿ ಪ್ಯಾಲೆಸ್ತೀನಿಯರು ಮೃತಪಟ್ಟ ಘಟನೆ ನಡೆದಿದೆ ಎಂದು ಸ್ಥಳೀಯ ವೈದ್ಯರು ತಿಳಿಸಿದ್ದಾರೆ.

ಇಸ್ರೇಲ್ ಇತ್ತೀಚೆಗೆ ಗಾಝಾದಲ್ಲಿನ ಪ್ಯಾಲೆಸ್ತೀನ್ ನಿರಾಶ್ರಿತರ ಕೇಂದ್ರದ ಮೇಲೆ ನಿರಂತರ ದಾಳಿ ನಡೆಸುತ್ತಿದೆ. ನಿರಾಶ್ರಿತರಿಗೆ ಆಶ್ರಯ ನೀಡುವ ಶಾಲೆಗಳ ಮೇಲೆ ಅನೇಕ ಬಾರಿ ವಾಯುದಾಳಿ ನಡೆಸಿ, ಮಹಿಳೆಯರು ಮತ್ತು ಮಕ್ಕಳನ್ನು ಹತ್ಯೆ ಮಾಡಿದೆ ಎಂದು Aljazeera ವರದಿ ಮಾಡಿದೆ. ನಿರಾಶ್ರಿತರ ಕೇಂದ್ರದ ಮೇಲಿನ ದಾಳಿಯಲ್ಲಿ ಹಲವರು ಗಾಯಗೊಂಡಿದ್ದಾರೆ ಎಂದು ತಿಳಿದು ಬಂದಿದೆ.

# 16 ವರ್ಷದೊಳಗಿನ ಮಕ್ಕಳಿಗೆ ಸೋಶಿಯಲ್ ಮೀಡಿಯಾ ಬಳಕೆ ನಿಷೇಧ





**ಆಸ್ಟ್ರೇಲಿಯಾ :** ದೇಶದಲ್ಲಿ 16 ವರ್ಷದೊಳಗಿನ ಮಕ್ಕಳಿಗೆ ಸೋಶಿಯಲ್ ಮೀಡಿಯಾವನ್ನು ನಿಷೇಧಿಸಲು ಮುಂದಾಗಿದ್ದೇವೆ ಎಂದು ಆಸ್ಟ್ರೇಲಿಯಾದ ಪ್ರಧಾನ ಮಂತ್ರಿ ಆಂಥೋನಿ ಅಲ್ಬನೀಸ್ ಹೇಳಿದ್ದಾರೆ. ಅಲ್ಲದೇ ಮಕ್ಕಳು ಸ್ವಿಮ್ಮಿಂಗ್ ಪೂಲ್, ಟೆನ್ನಿಸ್ ಕೋರ್ಟ್, ಮೈದಾನದಲ್ಲಿ ನೋಡುವುದಕ್ಕಿಂತ ಹೆಚ್ಚಾಗಿ ಮೊಬೈಲ್ ಮುಂದೆ ಇರುವುದನ್ನು ಗಮನಿಸಿದ್ದೇನೆ. ಇದು ಭವಿಷ್ಯದಲ್ಲಿ ಮಕ್ಕಳ ಮೇಲೆ ಬಹಳ ದೊಡ್ಡ ಪರಿಣಾಮ ಬೀರುತ್ತವೆ, ಈ ನಿಟ್ಟಿನಲ್ಲಿ ಸೋಶಿಯಲ್ ಮೀಡಿಯಾವನ್ನು ನಿಷೇಧಿಸಲು ನಿರ್ಧರಿಸಿದ್ದೇವೆ ಎಂದು ಹೇಳಿದರು.

ಕಳೆದ ತಿಂಗಳು ಮಕ್ಕಳು ಸೋಶಿಯಲ್ ಮೀಡಿಯಾ ಬಳಸುವ ಕುರಿತು ಯೂಗೋವ್ ಸಮೀಕ್ಷೆಯನ್ನು ಮಾಡಲಾಗಿತ್ತು. ಇದರಲ್ಲಿ ಶೇ. 61 ಪ್ರತಿಶತದಷ್ಟು ಆಸ್ಟ್ರೇಲಿಯನ್ನರು 17 ವರ್ಷಕ್ಕಿಂತ ಕಡಿಮೆ ವಯಸ್ಸಿನವರಿಗೆ ಸಾಮಾಜಿಕ ಮಾಧ್ಯಮಗಳ ಪ್ರವೇಶವನ್ನು ನಿರ್ಬಂಧಿಸುವುದನ್ನು ಬೆಂಬಲಿಸಿದ್ದಾರೆ. ಈ ಹಿಂದೆ 14 ವರ್ಷದೊಳಗಿನ ಮಕ್ಕಳು ಸೋಶಿಯಲ್ ಮೀಡಿಯಾ ಬಳಸುವಂತಿಲ್ಲ ಎಂಬ ಕಾನೂನು ಇತ್ತು, ಆದರೆ ಇದೀಗ ಆ ಕಾನೂನನ್ನು ತಿದ್ದುಪಡಿ ಮಾಡಲಾಗಿದ್ದು, 16 ವರ್ಷದ ವರೆಗೆ ವಿಸ್ತರಿಸಲಾಗಿದೆ.





ಅಮೆರಿಕ ಅಧ್ಯಕ್ಷರಾಗಿ ಡೋನಾಲ್ಡ್ ಟ್ರಂಪ್ ಐತಿಹಾಸಿಕ ಗೆಲುವನ್ನು ಬುಧವಾರ ಫಲಿತಾಂಶ ಖಾತ್ರಿ ಪಡಿಸುತ್ತಿದ್ದಂತೆ ಷೇರು ಮಾಡುಕಟ್ಟೆಯಲ್ಲಿ ವ್ಯವಹಾರ ಏರುಗತಿಯಲ್ಲಿದೆ. ನ್ಯೂಯಾರ್ಕ್‌ನ ಷೇರುಪೇಟೆಯ ಅಂಕಿಅಂಶಗಳ ಬಗ್ಗೆ ಗ್ರಾಹಕರು ಕುತೂಹಲದಿಂದ ವೀಕ್ಷಿಸಿದರು.